VOLUME: 16 | 19 JUNE 2026 | ಶುಕ್ರವಾರ | RS: 2 | PAGE: 06 ISSUE: 129 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ರೀಲ್ಸ್‌ನಲ್ಲಿ ಸದಾ ಮಿಂಚುವ ನಿವೇದಿತಾ ಗೌಡಡ್ಯಾನ್ಸರ್ ಕಿಶನ್ ಜೊತೆ ರೀಲ್ಸ್ ಮಾಡಿದ್ದಾರೆ. ಹೇ ನವಿಲೇ ಹಾಡಿಗೆ ಇಬ್ಬರೂ ಮಾದಕ ಹೆಜ್ಜೆ ಹಾಕಿದ್ದಾರೆ. ನವಿಲು ಗರಿ ಧರಿಸಿ ಸಖತ್ತಾಗಿ ಈ ಜೋಡಿ ಮಿಂಚಿದೆ. ಸರಳ, ಆಕರ್ಷಕ ಹೆಜ್ಜೆಯೊಂದಿಗೆ ರೀಲ್ಸ್ ಮಾಡಿರುವ ನಿವೇದಿತಾ ಗೌಡ ಹಾಗೂ ಕಿಶನ್ ಹಾಡಿನ ಥೀಮ್‌ನ್ನು ಉತ್ತಮವಾಗಿ ಬಳಸಿಕೊಂಡಿದ್ದಾರೆ. ನವಿಲುಗರಿ ಬಳಸಿಯೇ ನಿವೇದಿತಾ ಡ್ರೆಸ್ ಮಾಡಲಾಗಿದೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಮೇಕೆದಾಟು ಯೋಜನೆ ರದ್ದುಗೊಳಿಸಲು ಪ್ರಧಾನಿ ಮೋದಿ ಅವರಿಗೆ ಮನವಿ ಮಾಡಿರುವ ಬಗ್ಗೆ ಕೇಳಿದಾಗ, "ತಮಿಳುನಾಡಿನವರು ಕಳೆದ 40 ವರ್ಷಗಳಿಂದ ರಾಜಕೀಯ ಅಜೆಂಡಾ ಇಟ್ಟುಕೊಂಡಿದ್ದಾರೆ. ಅವರ ರಾಜಕೀಯದಲ್ಲಿ ನಾನು ಹಸ್ತಕ್ಷೇಪ ಮಾಡುವುದಿಲ್ಲ. ಈ ವಿಚಾರದ ಬಗ್ಗೆ ನ್ಯಾಯಾಲಯ ನಿರ್ದೇಶನ ನೀಡಿದೆ. ಕಳೆದ ವರ್ಷ 400ಕ್ಕೂ ಹೆಚ್ಚು ಟಿಎಂಸಿ ಹೆಚ್ಚುವರಿ ನೀರು ಸಮುದ್ರ ಸೇರಿದೆ. ಅವರು ಕೆಳ ಹಂತದಲ್ಲಿ ಸಾಕಷ್ಟು ಅಣೆಕಟ್ಟು ನಿರ್ಮಾಣ ಮಾಡುತ್ತಿದ್ದು, ನಾವು ಯಾವುದಕ್ಕೂ ಆಕ್ಷೇಪ ವ್ಯಕ್ತಪಡಿಸಿಲ್ಲ. ಅವರ ನೆಲದಲ್ಲಿ ಅವರು ನಿರ್ಮಿಸಿಕೊಳ್ಳುತ್ತಿದ್ದಾರೆ.

# ಮೇಕೆದಾಟು ದಕ್ಷಿಣ ಭಾರತದ ಹೃದಯ

ಬೆಂಗಳೂರು: "ಮೇಕೆದಾಟು ಯೋಜನೆ ದಕ್ಷಿಣ ಭಾರತದ ಹೃದಯದಂತ ಯೋಜನೆ. ಈ ಯೋಜನೆಯಲ್ಲಿ ಕರ್ನಾಟಕ ಹಾಗೂ ತಮಿಳುನಾಡಿನ ಹಿತ ಅಡಗಿದೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ವಿಧಾನ ಪರಿಷತ್ ಚುನಾವಣೆ ಮತದಾನದ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿದರು.

ತಮಿಳುನಾಡು ಸರ್ಕಾರ ನಿಮ್ಮ ಹೃದಯಕ್ಕೆ ಹತ್ತಿರವಾದ ಮೇಕೆದಾಟು ಯೋಜನೆ ತಡೆಯಲು ಕಾನೂನು ಅವಕಾಶ ಹುಡುಕುತ್ತಿದೆ ಎಂದು ಕೇಳಿದಾಗ, "ಮೇಕೆದಾಟು ಕೇವಲ ನನ್ನ ಹೃದಯಕ್ಕೆ ಮಾತ್ರ ಹತ್ತಿರವಾಗಿಲ್ಲ. ಮೇಕೆದಾಟು ಯೋಜನೆ ಕರ್ನಾಟಕ ರಾಜ್ಯಕ್ಕಿಂತ ತಮಿಳುನಾಡಿಗೆ ಹೆಚ್ಚು ಅನುಕೂಲ ನೀಡಲಿದೆ. ತಮಿಳುನಾಡು ಪಾಲಿನ 177 ಟಿಎಂಸಿ ನೀರನ್ನು ಬಿಡಲು ನಾವು ಸಿದ್ಧವಾಗಿದ್ದೇವೆ. ಈ ಬಗ್ಗೆ ಸುಪ್ರೀಂ ಕೋರ್ಟ್ ಆದೇಶವೂ ಇದೆ. ಈ ಯೋಜನೆ ತೀರ್ಮಾನವನ್ನು ಕೇಂದ್ರ ಜಲ ಆಯೋಗ ಮಾಡಬೇಕು ಎಂದು ಕೋರ್ಟ್ ತಿಳಿಸಿದೆ" ಎಂದು ತಿಳಿಸಿದರು.

ಒಂದೇ ಒಂದು ಬಕೆಟ್ ನೀರನ್ನೂ ನೀರಾವರಿಗೆ ಬಳಸುವುದಿಲ್ಲ

"ನಾವು ತಮಿಳುನಾಡಿನ ರೈತರ ಹಿತವನ್ನೂ ಕಾಪಾಡಬೇಕು. ಇದು ಸಮತೋಲಿತ ಜಲಾನಯನ. ಇಲ್ಲಿ ಒಂದೇ ಒಂದು ಬಕೆಟ್ ನೀರನ್ನೂ ನೀರಾವರಿಗೆ ಬಳಸುವುದಿಲ್ಲ. ಬೆಂಗಳೂರು ನಗರದ ಕುಡಿಯುವ ನೀರು ಪೂರೈಕೆಗೆ ಮಾತ್ರ ಬಳಸಲಾಗುವುದು. ಬೆಂಗಳೂರಿನಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದ್ದು, ನಾವು ಕೃಷ್ಣಾದಿಂದ ನೀರನ್ನು ತರಲು ಸಾಧ್ಯವಿಲ್ಲ. ಹೀಗಾಗಿ ಕಾವೇರಿ ನಮ್ಮ ಮುಂದಿರುವ ಏಕೈಕ ಆಯ್ಕೆ" ಎಂದು ತಿಳಿಸಿದರು.

ಮೇಕೆದಾಟು ಯೋಜನೆ ರದ್ದುಗೊಳಿಸಲು ಪ್ರಧಾನಿ ಮೋದಿ ಅವರಿಗೆ ಮನವಿ ಮಾಡಿರುವ ಬಗ್ಗೆ ಕೇಳಿದಾಗ, "ತಮಿಳುನಾಡಿನವರು ಕಳೆದ 40 ವರ್ಷಗಳಿಂದ ರಾಜಕೀಯ ಅಜೆಂಡಾ ಇಟ್ಟುಕೊಂಡಿದ್ದಾರೆ. ಅವರ ರಾಜಕೀಯದಲ್ಲಿ ನಾನು ಹಸ್ತಕ್ಷೇಪ ಮಾಡುವುದಿಲ್ಲ. ಈ ವಿಚಾರದ ಬಗ್ಗೆ ನ್ಯಾಯಾಲಯ ನಿರ್ದೇಶನ ನೀಡಿದೆ. ಕಳೆದ ವರ್ಷ 400ಕ್ಕೂ ಹೆಚ್ಚು ಟಿಎಂಸಿ ಹೆಚ್ಚುವರಿ ನೀರು ಸಮುದ್ರ ಸೇರಿದೆ. ಅವರು ಕೆಳ ಹಂತದಲ್ಲಿ ಸಾಕಷ್ಟು ಅಣೆಕಟ್ಟು ನಿರ್ಮಾಣ ಮಾಡುತ್ತಿದ್ದು, ನಾವು ಯಾವುದಕ್ಕೂ ಆಕ್ಷೇಪ ವ್ಯಕ್ತಪಡಿಸಿಲ್ಲ. ಅವರ ನೆಲದಲ್ಲಿ ಅವರು ನಿರ್ಮಿಸಿಕೊಳ್ಳುತ್ತಿದ್ದಾರೆ. ಇದೇ ವಿಚಾರ ಸುಪ್ರೀಂ ಕೋರ್ಟ್ ನಲ್ಲೂ ಚರ್ಚೆಯಾಗಿದೆ. ಈ ಯೋಜನೆಗೆ ನಾವು ಯಾವುದೇ ಆರ್ಥಿಕ ನೆರವಾಗಲಿ ಇತರೆ ವಿಚಾರವನ್ನು ಕೇಳುತ್ತಿಲ್ಲ. ಈ ಯೋಜನೆಯಿಂದ 400 ಮೆ.ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವುದು ಇಂಧನ ಕ್ಷೇತ್ರದಲ್ಲಿ ನಮಗೆ ಅನುಕೂಲ ಮಾಡಿಕೊಡಲಿದೆ" ಎಂದರು.



ತಮಿಳುನಾಡು ಜೊತೆ ಯಾವಾಗ ಬೇಕಾದರೂ ಚರ್ಚೆಗೆ ಸಿದ್ಧ

ಈ ವಿಚಾರವಾಗಿ ತಮಿಳುನಾಡು ಜೊತೆ ಚರ್ಚೆ ಮಾಡುತ್ತೀರಾ ಎಂದು ಕೇಳಿದಾಗ, "ಯಾವಾಗ ಬೇಕಾದರೂ ಅವರ ಜೊತೆ ಮಾತನಾಡಲು ಸಿದ್ಧನಿದ್ದೇನೆ, ತಮಿಳುನಾಡು, ಕರ್ನಾಟಕದವರು ಭಾರತೀಯರು. ನಾವು ಕಾವೇರಿ ನೀರು ಕುಡಿಯಬೇಕು. ತಮಿಳುನಾಡಿನಿಂದ ಇಲ್ಲಿಗೆ ಬಂದು ವೃತ್ತಿ ಮಾಡುತ್ತಿರುವ ಅನೇಕ ಜನರಿದ್ದಾರೆ. ಇಲ್ಲಿಂದ ಹೋಗಿ ಅಲ್ಲಿ ಕೆಲಸ ಮಾಡುತ್ತಿರುವವರೂ ಇದ್ದಾರೆ. ನಾವು ಅವರನ್ನು ಪ್ರತ್ಯೇಕಿಸುವುದಿಲ್ಲ. ಸಮತೋಲಿತ ಜಲಾನಯನ ನಿರ್ಮಾಣದಿಂದ ಕಷ್ಟ ಕಾಲದಲ್ಲಿ ತಮಿಳುನಾಡಿನ ಪಾಲಿನ ನೀರನ್ನು ಹರಿಸಲು ನೆರವಾಗುತ್ತದೆ. ಅತಿ ಕಡಿಮೆ ವೆಚ್ಚದಲ್ಲಿ ಯೋಜನೆ ಆಗುವ ವಿಶ್ವಾಸವಿದೆ" ಎಂದು ತಿಳಿಸಿದರು.

ನಮ್ಮ ಎಲ್ಲಾ ಸಂಸದರು ಒಗ್ಗಟ್ಟಾಗಿ ಹೋರಾಡುವ ವಿಶ್ವಾಸವಿದೆ

ತಮಿಳುನಾಡು ಅನಗತ್ಯ ಕ್ಯಾತೆ ತೆಗೆಯುತ್ತಿಲ್ಲವೇ ಎಂದು ಕೇಳಿದಾಗ, "ಅವರು ರಾಜಕೀಯ ಉಳಿವಿಗಾಗಿ ಧ್ವನಿ ಎತ್ತುತ್ತಿದ್ದಾರೆ.

ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ತೀರ್ಪು ಬಂದ ಬಳಿಕ ಮತ್ತೇನಿದೆ? ಕರ್ನಾಟಕ 177 ಟಿಎಂಸಿ ನೀರು ಬಿಡಬೇಕು ಎಂದು ನೀಡಿದ ನಿರ್ದೇಶನವನ್ನು ನಾವು ಒಪ್ಪಿಕೊಳ್ಳಲಿಲ್ಲವೇ?" ಎಂದು ತಿಳಿಸಿದರು. ರಾಜ್ಯದ ಬಿಜೆಪಿ ಸಂಸದರು ಇದರ ಬಗ್ಗೆ ಹೋರಾಟ ಮಾಡಬೇಕಲ್ಲವೇ ಎಂದಾಗ, "ಅವರು ಹೋರಾಟ ಮಾಡುತ್ತಾರೆ.



ಪರಿಷತ್‌ಗೆ ಕಾಂಗ್ರೆಸ್‌ನಿಂದ ಆಯ್ಕೆಯಾದ ಬಿ.ಕೆ.ಹರಿಪ್ರಸಾದ್, ತಿಪ್ಪಣ್ಣ ಕಮಕನೂರು, ಪಿ.ವಿ.ಮೋಹನ್, ಬಿ.ಎಸ್.ಶಿವಣ್ಣ, ವಿನಯ್‌ಕಾರ್ತಿಕ್ ಅವರನ್ನು ಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಸುರ್ಜೇವಾಲ ಅವರು ಅಭಿನಂದಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್‌ನ ಹಿರಿಯ ಮುಖಂಡರುಗಳು ಉಪಸ್ಥಿತರಿದ್ದರು.

# ಅಧಿಕಾರಿಗಳ ಎತ್ತಂಗಡಿ..!

ಬೆಂಗಳೂರು: ಕರ್ನಾಟಕ ಸರ್ಕಾರ ಇಂದು ತುರ್ತಾಗಿ ಅಧಿಸೂಚನೆಯೊಂದನ್ನು ಹೊರಡಿಸಿದ್ದು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಮೇಜರ್ ಮಣಿವಣ್ಣನ್ ಪಿ., ಅವರಿಗೆ ಬೆಂಗಳೂರು ನಗರ ಭೂ ಸಾರಿಗೆ ನಿರ್ದೇಶನಾಲಯದ ಆಯುಕ್ತರ ಹುದ್ದೆಯ ಸಹವರ್ತಿ ಉಸ್ತುವಾರಿ ವಹಿಸಲಾಗಿದೆ. ಇಮ್‌ಕಾಂಗ್ಲಾ ಜಮೀರ್ ಎಂ., ಕರ್ನಾಟಕ ಭವನ, ನವದೆಹಲಿ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾಯಿಸಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಕಾರ್ಯದರ್ಶಿ (ಸಮನ್ವಯ), ಕರ್ನಾಟಕ ಭವನ, ನವದೆಹಲಿ ಎಂದು ವರ್ಗಾವಣೆ ಮಾಡಲಾಗಿದೆ.

ಪೋಸ್ಟಿಂಗ್‌ಗಾಗಿ ಕಾಯುತ್ತಿರುವ ಡಾ. ಪ್ರಸಾದ್ ಎನ್ ವಿ., ಬೆಂಗಳೂರಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿಯಾಗಿ ಮುಂದಿನ ಆದೇಶದವರೆಗೆ ವರ್ಗಾವಣೆ ಮಾಡಲಾಗಿದೆ.

ಬೆಂಗಳೂರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲಾ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ. ಮುಂದಿನ ಆದೇಶದವರೆಗೆ ಸರ್ಕಾರಿ ಆಯುಕ್ತರಾಗಿ, ಕರ್ನಾಟಕ ಭವನ, ನವದೆಹಲಿ ಉಪ ಆಯುಕ್ತರಾಗಿ ಇಮ್ಕೊಂಗ್ಲಾ ಜಮೀರ್ ಎಂ., ವರ್ಗಾವಣೆ ಮಾಡಲಾಗಿದೆ.

ಬೆಂಗಳೂರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ತುಳಸಿ ಮದ್ದಿನೇನಿ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಸರ್ಕಾರದ ಕಾರ್ಯದರ್ಶಿಯಾಗಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬೆಂಗಳೂರು ಆಗಿ ಖುಷ್ಬೂ ಜಿ. ಚೌಧರಿ ಅವರನ್ನು ಸಮಕಾಲೀನ ಪ್ರಭಾರದಿಂದ ಬಿಡುಗಡೆ ಮಾಡಲಾಗಿದೆ. ಬೆಂಗಳೂರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಸರ್ಕಾರಿ ಕಾರ್ಯದರ್ಶಿಯಾಗಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿಯಾಗಿ, ಬೆಂಗಳೂರಿನ ಉಪ ಕಾರ್ಯದರ್ಶಿಯಾಗಿ ಸಮೀರ್ ಶುಕ್ಲಾ ಅವರನ್ನು ವರ್ಗಾವಣೆ ಮಾಡಲಾಗಿದೆ.

ರಂದೀಪ್ ಡಿ., ಅವರನ್ನು ಬೆಂಗಳೂರಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರಿ ಕಾರ್ಯದರ್ಶಿ (ಪಂಚಾಯತ್ ರಾಜ್) ಹುದ್ದೆಯ ಸಮಕಾಲೀನ ಪ್ರಭಾರದಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಇರಿಸಲಾಗಿದೆ. ಶಿವಕುಮಾರ್ ಕೆ. ಬಿ., ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ನಿಗಮ, ಬೆಂಗಳೂರು ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾಯಿಸಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ), ಬೆಂಗಳೂರು ವ್ಯವಸ್ಥಾಪಕ ನಿರ್ದೇಶಕರಾಗಿ ನೇಮಿಸಲಾಗಿದೆ.

# ಟೆಲಿಗ್ರಾಂ ನಿಷೇಧ: ಆದೇಶ ಕಾಯ್ದಿರಿಸಿದ ಕೋರ್ಟ್

ನವದೆಹಲಿ: ಜೂನ್ 21 ರಂದು ನಡೆಯಲಿರುವ ನೀಟ್ ಮರು ಪರೀಕ್ಷೆಗೆ ಮುನ್ನ ಪತ್ರಿಕೆ ಸೋರಿಕೆಯನ್ನು ತಡೆಗಟ್ಟಲು ಜೂನ್ 22 ರವರೆಗೆ ಭಾರತದಲ್ಲಿ ಟೆಲಿಗ್ರಾಂ ಆಪ್ ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್ ತೀರ್ಪನ್ನು ಕಾಯ್ದಿರಿಸಿದೆ.

ವಿಚಾರಣೆಯ ಸಮಯದಲ್ಲಿ, ನ್ಯಾಯಮೂರ್ತಿ ತೇಜಸ್ ಕರಿಯಾ ಅವರು, ನೀಟ್ ಆಕಾಂಕ್ಷಿಗಳು ಪರೀಕ್ಷೆಗೆ ಹಾಜರಾಗುತ್ತಿದ್ದಾರೆ ಎಂಬ ಕಾರಣಕ್ಕಾಗಿ 150 ಮಿಲಿಯನ್ ಬಳಕೆದಾರರ ಹಕ್ಕುಗಳನ್ನು ನಿರ್ಬಂಧಿಸಬಹುದೇ ಎಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದರು. ಇದೇ ಸಮಯದಲ್ಲಿ ಆಪಾದಿತ ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಗಟ್ಟಲು ಟೆಲಿಗ್ರಾಮ್ ನೈಜ-ಸಮಯದ ಮೇಲ್ವಿಚಾರಣೆಯಂತಹ ಸಾಕಷ್ಟು ಕ್ರಮಗಳನ್ನು ತೆಗೆದುಕೊಂಡಿದೆಯೇ ಎಂದು ನ್ಯಾಯಾಧೀಶರು ಕೇಳಿದರು.

ಟೆಲಿಗ್ರಾಂನ ಪರವಾಗಿ ಹಿರಿಯ ವಕೀಲ ಧ್ರುವ ಮೆಹ್ತಾ ವಾದ ಮಂಡಿಸಿದರು. ಕೇಂದ್ರವು ಆಕ್ಷೇಪಾರ್ಹ ಪೋಸ್ಟ್‌ಗಳನ್ನು ತೆಗೆದುಹಾಕಲು ಪ್ರಯತ್ನಿಸಬಹುದು. ಇಡೀ ಆಪ್ ಮೇಲೆ ನಿಷೇಧ ಹೇರಲು ಸಾಧ್ಯವಿಲ್ಲ. ಇದರಿಂದ ಬಳಕೆದಾರರ ವಾಕ್ ಸ್ವಾತಂತ್ರಕ್ಕೆ ಧಕ್ಕೆಯಾಗುತ್ತದೆ ಎಂದರು.

# ನಿಯಮ ಮೀರಿದ್ರೆ ದಾಳಿ ಮಾಡ್ತೀವಿ

ವಾಷಿಂಗ್ಟನ್: ಅಮೆರಿಕ ಮತ್ತು ಇರಾನ್ ನಡುವಿನ ಕದನ ವಿರಾಮ ಒಪ್ಪಂದದ ಬಳಿಕ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ಗೆ ಮತ್ತೊಮ್ಮೆ ಕಠಿಣ ಎಚ್ಚರಿಕೆ ನೀಡಿದ್ದಾರೆ. ಒಪ್ಪಂದ ಉಲ್ಲಂಘಿಸಿದರೆ ಬಾಂಬ್ ದಾಳಿ ನಡೆಸುವುದಾಗಿ ಅವರು ಹೇಳಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಟ್ರಂಪ್, ಇರಾನ್ ಒಪ್ಪಂದವನ್ನು ಗೌರವಿಸಬೇಕು. ಒಪ್ಪಂದ ಉಲ್ಲಂಘಿಸಿದರೆ ನಾವು ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ. ಅಮೆರಿಕ ಮತ್ತು ಇರಾನ್ ಅಧ್ಯಕ್ಷರು ಬುಧವಾರ ಮಧ್ಯಂತರ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ.

ಫ್ರಾನ್ಸ್‌ನಲ್ಲಿ ನಡೆದ ಜಿ7 ಶೃಂಗಸಭೆಯ ವೇಳೆ ಮಾತನಾಡಿದ ಟ್ರಂಪ್, ಇರಾನ್ ಒಪ್ಪಂದದ ಷರತ್ತುಗಳನ್ನು ಪಾಲಿಸದಿದ್ದರೆ ಅಮೆರಿಕ ಮತ್ತೆ ಸೇನಾ ಕ್ರಮಕ್ಕೆ ಮುಂದಾಗಲಿದೆ ಎಂದು ಹೇಳಿದ್ದಾರೆ. ಮುಂದಿನ 60 ದಿನಗಳ ಮಾ ತು ಕತೆ ಶಾಶ್ವತ ಶಾಂತಿ ಒಪ್ಪಂದಕ್ಕೆ ದಾರಿ ಮಾಡಿಕೊಡಲಿದೆ ಎಂಬ ವಿಶ್ವಾಸವನ್ನೂ ವ್ಯಕ್ತಪಡಿಸಿದ್ದಾರೆ.

ಇರಾನ್ ಕ್ಷಿಪಣಿ ಸಾಮರ್ಥ್ಯದ ಬಗ್ಗೆ ಟ್ರಂಪ್ ತಮ್ಮ ಹಿಂದಿನ ನಿಲುವಿನಿಂದ ಸ್ವಲ್ಪ ಮೃದು ಧೋರಣೆ ತೋರಿದ್ದಾರೆ. ಕೆಲವು ಭದ್ರತಾ ಸಾಮರ್ಥ್ಯಗಳನ್ನು ಹೊಂದಿರುವುದು ಅಕ್ರಮವಲ್ಲ ಎಂದು ಹೇಳಿದ್ದಾರೆ.

ಇರಾನ್ ನಾಯಕರು ಟ್ರಂಪ್ ಹೇಳಿಕೆಗೆ ತಕ್ಷಣದ ಪ್ರತಿಕ್ರಿಯೆ ನೀಡಿಲ್ಲ. ಆದರೆ, ಒಪ್ಪಂದಕ್ಕೆ ಸಹಿ ಹಾಕಿರುವ ಚಿತ್ರಗಳನ್ನು ಬಿಡುಗಡೆ ಮಾಡಿ ಒಪ್ಪಂದವನ್ನು ಸ್ವಾಗತಿಸಿದ್ದಾರೆ. ಇರಾನ್‌ನ ಮುಖ್ಯ ಸಮಾಲೋಚಕ ಮೊಹಮ್ಮದ್ ಬಕರ್ ಖಲೀಬಾಫ್ ಯುದ್ಧದ ಮೂಲಕ ಪಡೆಯಲು ಯತ್ನಿಸಿದ್ದಕ್ಕಿಂತ ಹೆಚ್ಚು ಲಾಭವನ್ನು ನಾವು ಮಾತುಕತೆಯ ಮೂಲಕ ಪಡೆದಿದ್ದೇವೆ. ಈ ಒಪ್ಪಂದದ ಭಾಗವಾಗಿ ಇರಾನ್‌ನ ಸ್ಥಗಿತಗೊಂಡಿದ್ದ ಸಾವಿರಾರು ಕೋಟಿ ಡಾಲರ್ ಮೌಲ್ಯದ ಆಸ್ತಿಗಳ ಬಿಡುಗಡೆಗೂ ಅವಕಾಶ ದೊರೆಯಲಿದೆ ಎಂದು ಹೇಳಿದ್ದಾರೆ.

ಫೆಬ್ರವರಿ 28ರಂದು ಅಮೆರಿಕ ಮತ್ತು ಇಸ್ರೇಲ್ ದೇಶಗಳು ಇರಾನ್ ಮೇಲೆ ದಾಳಿ ನಡೆಸಿದ ಬಳಿಕ ಸಂಘರ್ಷ ಆರಂಭವಾಗಿತ್ತು. ನಂತರ ಅದು ಪ್ರಾದೇಶಿಕ ಯುದ್ಧವಾಗಿ ವಿಸ್ತರಿಸಿತು. ಈ ಯುದ್ಧದಲ್ಲಿ 7,000ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ. ಹೆಚ್ಚಿನ ಸಾವುಗಳು ಇರಾನ್ ಮತ್ತು ಲೆಬನಾನ್‌ನಲ್ಲಿ ವರದಿಯಾಗಿವೆ. ಯುದ್ಧದಿಂದ ಜಾಗತಿಕ ಇಂಧನ ಬೆಲೆ ಏರಿಕೆಯಾಗಿತ್ತು. ಹಣದುಬ್ಬರ ಹೆಚ್ಚಳವಾಗಿತ್ತು.

ಹಲವು ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ ಆಹಾರ ಭದ್ರತೆ ಕುರಿತ ಆತಂಕವೂ ಹೆಚ್ಚಾಗಿತ್ತು. ಇದೀಗ ಶಾಂತಿ ಒಪ್ಪಂದದಿಂದ ಮಧ್ಯಪ್ರಾಚ್ಯದಲ್ಲಿ ಶಾಂತಿಯ ನಿರೀಕ್ಷೆ ಮೂಡಿದೆ.

# ಅಡ್ಡಮತದಾನ: ಶಿಸ್ತುಕ್ರಮ ನಿಶ್ಚಿತ

ಬೆಂಗಳೂರು: ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿಯ ಮೂವರು ಶಾಸಕರಿಂದ ಅಡ್ಡಮತದಾನ ಆಗಿದೆ. ಅವರ ವಿರುದ್ಧ ಶಿಸ್ತುಕ್ರಮ ನಿಶ್ಚಿತ ಎಂದು ವಿಪಕ್ಷ ನಾಯಕ ಆರ್.ಅಶೋಕ್ ತಿಳಿಸಿದರು.

ಮೇಲ್ಮನೆ ಚುನಾವಚಣೆ ಫಲಿತಾಂಶ ಪ್ರಕಟವಾದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯಿಂದ ಲಿಂಗರಾಜು ಪಾಟೀಲ್, ರಘು ಕೌಟಿಲ್ಯ ಗೆದ್ದಿದ್ದಾರೆ. ನಮ್ಮ ಮೂರು ವೋಟುಗಳು ಕ್ರಾಸ್ ಆಗಿದೆ ಅಂತ ಮಾಹಿತಿ ಬಂದಿದೆ. ಯಾರು ಕ್ರಾಸ್ ವೋಟು ಹಾಕಿದ್ದಾರೆ ಅಂತ ಗೊತ್ತಾಗುತ್ತೆ. ಅವರ ವಿರುದ್ಧ ಪಕ್ಷದಿಂದ ಶಿಸ್ತು ಕ್ರಮ ನಿಶ್ಚಿತ. ನಮ್ಮ ಒಂದು ಮತ ಅಸಿಂಧು ಆಗಿದೆ. ನಾಲ್ಕು ವೋಟು ಜೆಡಿಎಸ್‌ಗೆ ಕೊಟ್ಟಿದ್ದೀವಿ ಎಂದು ಹೇಳಿದರು.

ನಮ್ಮಿಂದ ಮೂರು ಮತ ಕ್ರಾಸ್ ಆಗಿರೋದು ನಮಗೆ ಖಚಿತ ಆಗಿದೆ. ಅವರ ವಿರುದ್ಧ ಶಿಸ್ತು ಕ್ರಮ ಆಗುತ್ತೆ. ಯಾರು ಕ್ರಾಸ್ ವೋಟು ಹಾಕಿದ್ದಾರೆ ಅಂತ ಚರ್ಚೆ ಮಾಡ್ತೇವೆ.

# ಸಣ್ಣ ಉದ್ದಿಮೆದಾರರ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಪ್ರತಿಭಟನೆ

ಸಣ್ಣ ವ್ಯಾಪಾರಿಗಳ ಮೇಲೆ ಅಧಿಕಾರಿಗಳು ನಿರಂತರವಾಗಿ ದಂಡ ವಿಧಿಸುವುದು, ಅನಗತ್ಯ ಕಿರುಕುಳ ನೀಡುವುದು, ಪರವಾನಗಿ ಪಡೆಯುವಲ್ಲಿ ಉಂಟಾಗುತ್ತಿರುವ ತೊಂದರೆಗಳು ಹಾಗೂ ಜೀವನೋಪಾಯಕ್ಕೆ ಧಕ್ಕೆಯಾಗುತ್ತಿರುವ ವಿವಿಧ ಸಮಸ್ಯೆಗಳ ಕುರಿತು ಸರ್ಕಾರ ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಬೆಂಗಳೂರು: ಜಿಬಿಎ ಹಾಗೂ ಪೊಲೀಸ್ ಅಧಿಕಾರಿಗಳಿಂದ ನಡೆಯುತ್ತಿರುವ ಕಿರುಕುಳ, ದಂಡದ ಹಾವಳಿ ಮತ್ತು ಪರವಾನಗಿ ಸಮಸ್ಯೆಗಳನ್ನು ಖಂಡಿಸಿ ಸಣ್ಣ ಉದ್ದಿಮೆದಾರರು, ಬೇಕರಿ ಮಾಲೀಕರು ಹಾಗೂ ಬೀದಿ ಬದಿ ವ್ಯಾಪಾರಿಗಳು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ಕಾರ್ಮಿಕ ಪರಿಷತ್ತಿನ ರಾಜ್ಯಾಧ್ಯಕ್ಷ ಡಾ. ರವಿಶೆಟ್ಟಿ ಬೈಂದೂರ್, ಸಣ್ಣ ಉದ್ದಿಮೆದಾರರ 27 ನ್ಯಾಯಸಮ್ಮತ ಬೇಡಿಕೆಗಳನ್ನು ಸರ್ಕಾರ ತಕ್ಷಣ ಈಡೇರಿಸಬೇಕು ಎಂದು ಆಗ್ರಹಿಸಿದರು.

ಸಣ್ಣ ವ್ಯಾಪಾರಿಗಳ ಮೇಲೆ ಅಧಿಕಾರಿಗಳು ನಿರಂತರವಾಗಿ ದಂಡ ವಿಧಿಸುವುದು, ಅನಗತ್ಯ ಕಿರುಕುಳ ನೀಡುವುದು, ಪರವಾನಗಿ ಪಡೆಯುವಲ್ಲಿ ಉಂಟಾಗುತ್ತಿರುವ ತೊಂದರೆಗಳು ಹಾಗೂ ಜೀವನೋಪಾಯಕ್ಕೆ ಧಕ್ಕೆಯಾಗುತ್ತಿರುವ ವಿವಿಧ ಸಮಸ್ಯೆಗಳ ಕುರಿತು ಸರ್ಕಾರ ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.



ಸಣ್ಣ ವ್ಯಾಪಾರಿಗಳು ರಾಜ್ಯದ ಆರ್ಥಿಕ ವ್ಯವಸ್ಥೆಯ ಪ್ರಮುಖ ಭಾಗವಾಗಿದ್ದು, ಅವರ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಮತ್ತು ಸಂಬಂಧಿತ ಇಲಾಖೆಗಳು ಸ್ಪಂದಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಬೇಳೂರು ರಾಘವೇಂದ್ರ ಶೆಟ್ಟಿ, ಗಂಡಸಿ ಸದಾನಂದ ಸ್ವಾಮಿ, ಮಹಿಳಾ ಘಟಕದ ಅಧ್ಯಕ್ಷೆ ಪೂಜಾ ಶೆಟ್ಟಿ, ಸುರೇಂದ್ರ ಶೆಟ್ಟಿ ಸೇರಿದಂತೆ ಅನೇಕ ಬೇಕರಿ ಮಾಲೀಕರು, ಬೀದಿ ಬದಿ ವ್ಯಾಪಾರಿಗಳು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಕ್ರಮದ ಭರವಸೆ

ಬೆಂಗಳೂರು: ಬೇಕರಿ, ಕಾಂಡಿಮೆಂಟ್ಸ್ ಮತ್ತಿತರೆ ಅಂಗಡಿ ಮುಂಗಟ್ಟುಗಳಿಗೆ ಜಿಬಿಎ, ಆರೋಗ್ಯ ಮತ್ತು ಪೊಲೀಸ್ ಇಲಾಖೆಯಿಂದ ನೀಡುತ್ತಿರುವ ಕಿರುಕುಳ ತಪ್ಪಿಸಲು ಶೀಘ್ರದಲ್ಲೇ ಸಭೆ ಕರೆಯುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಭರವಸೆ ನೀಡಿದ್ದಾರೆ.

ನಗರದ ಫ್ರೀಡಂ ಪಾರ್ಕ್ ನಲ್ಲಿ ಪ್ರತಿನಿತ್ಯ ಕಿರುಕುಳ ನೀಡುತ್ತಿರುವುದನ್ನು ಖಂಡಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಬೃಹತ್ ಪ್ರತಿಭಟನೆಯಲ್ಲಿ ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿ ಮಾತ ನಾಡಿದ ಸಚಿವರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಆರೋಗ್ಯ ಮತ್ತು ಪೊಲೀಸ್ ಅಧಿಕಾರಿಗಳ ಕಿರುಕುಳ ಕುರಿತು ಸಭೆ ಕರೆದು ಚರ್ಚಿಸಿ ಸೂಕ್ತ ಪರಿಹಾರ ರೂಪಿಸುವುದಾಗಿ ಹೇಳಿದರು.

ಪ್ರತಿಭಟನಾಕಾರರನ್ನುದ್ದೇಶಿಸಿ ಮಾತ ನಾಡಿದ ಕರ್ನಾಟಕ ರಾಜ್ಯ ಕಾರ್ಮಿಕ ಪರಿಷತ್ತಿನ ರಾಜ್ಯಾಧ್ಯಕ್ಷ ರವಿಶೆಟ್ಟಿ ಬೈಂದೂರ್, ಸಣ್ಣ ಉದ್ದಿಮೆದಾರರ 27 ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಗುತ್ತಿದೆ. ಕಿರುಕುಳ ಮುಂದುವರೆದರೆ ಹೋರಾಟ ತೀವ್ರಗೊಳಿಸುತ್ತೇವೆ. ನಮ್ಮ ಸಮಸ್ಯೆಗಳಿಗೆ ಸರ್ಕಾರ ಕೂಡಲೇ ಸ್ಪಂದಿಸಬೇಕು ಎಂದರು.

ಸಣ್ಣ ವ್ಯಾಪಾರಿಗಳ ಮೇಲೆ ನಡೆಯುತ್ತಿರುವ ದಂಡದ ಹಾವಳಿ, ಅಧಿಕಾರಿಗಳ ಕಿರುಕುಳ, ಪರವಾನಗಿ ಸಮಸ್ಯೆಗಳು ಹಾಗೂ ಜೀವನೋಪಾಯಕ್ಕೆ ಧಕ್ಕೆಯಾಗುತ್ತಿದೆ. ವ್ಯಾಪಾರಿಗಳು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
19/06/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 'ನೋಂದಣಿ ಕಡ್ಡಾಯ ಯಾವ ಕಾನೂನಿನಲ್ಲಿದೆ..?'

ಮುಖಪುಟದಿಂದ...

ಹೈಕೋರ್ಟ್ ತೀರ್ಪು ನೀಡಿದೆ ಎಂದು ಅವರು ವಿವರಿಸಿದರು. ಮಹಾತ್ಮ ಗಾಂಧಿಯವರ ಹತ್ಯೆಯ ನಂತರವೂ ಆರ್‌ಎಸ್‌ಎಸ್ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುವ ಪ್ರವೃತ್ತಿ ಮುಂದುವರೆದಿದೆ ಎಂದು ಕಾಂಗ್ರೆಸ್ ಅನ್ನು ಗುರಿಯಾಗಿಸಿಕೊಂಡ ಅಲೋಕ್ ಕುಮಾರ್ ಹೇಳಿದರು. ಕಾಂಗ್ರೆಸ್ ಬಹಳ ಹಿಂದಿನಿಂದಲೂ ಆರ್‌ಎಸ್‌ಎಸ್ ಅನ್ನು ದೂಷಿಸುವ ರಾಜಕೀಯದಲ್ಲಿ ತೊಡಗಿಸಿಕೊಂಡಿದೆ. ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಆ ಪ್ರವೃತ್ತಿಯ ಭಾಗವಾಗಿದೆ. ಅವರ ಪ್ರಕಾರ, ಇದು ಆರ್‌ಎಸ್‌ಎಸ್‌ನ ವಿಶ್ವಾಸಾರ್ಹತೆಗೆ ಹಾನಿ ಮಾಡುವ ಗುರಿಯನ್ನು ಹೊಂದಿರುವ ಹಗುರವಾದ ರಾಜಕೀಯ ದಾಳಿಯಾಗಿದೆ ಎಂದರು.

ಯಾವುದೇ ಸಂಸ್ಥೆ ನಿಯಮಿತವಾಗಿ ಚುನಾವಣೆಗಳನ್ನು ನಡೆಸಿದರೆ, ಸಕ್ರಿಯ ಸದಸ್ಯರ ಪಟ್ಟಿಯನ್ನು ನಿರ್ವಹಿಸುವುದು ಅತ್ಯಗತ್ಯ ಎಂದು ಅಲೋಕ್ ಕುಮಾರ್ ಹೇಳಿದರು. ಆರ್‌ಎಸ್‌ಎಸ್‌ನಲ್ಲಿ ಪ್ರತಿ ಮೂರು ವರ್ಷಗಳಿಗೊಮ್ಮೆ ಚುನಾವಣೆಗಳು ನಡೆಯುತ್ತವೆ, ಆದ್ದರಿಂದ ಸ್ವಯಂಸೇವಕರ ದಾಖಲೆಯನ್ನು ನಿರ್ವಹಿಸಲಾಗುತ್ತದೆ. ಸಂಘವು ಸಂಘಟಿತ ಮತ್ತು ಶಿಸ್ತಿನ ಸಂಘಟನೆಯಾಗಿದ್ದು, ಅದರ ವಿರುದ್ಧದ ಆರೋಪಗಳು ಸತ್ಯಗಳನ್ನು ಆಧರಿಸಿವೆ ಮತ್ತು ರಾಜಕೀಯ ಪ್ರೇರಿತವಾಗಿವೆ ಎಂದು ಅವರು ಹೇಳಿದರು. ಕರ್ನಾಟಕ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರ್‌ಎಸ್‌ಎಸ್ ತನ್ನನ್ನು ನೋಂದಾಯಿಸಿಕೊಳ್ಳಬೇಕು. ಅದರ ಕಾನೂನು ಸ್ಥಿತಿಯನ್ನು ಸ್ಪಷ್ಟಪಡಿಸಬೇಕು. ಅದರ ಹಣಕಾಸು, ಆದಾಯ, ವೆಚ್ಚಗಳು ಮತ್ತು ಆಸ್ತಿಗಳ ಮೂಲಗಳನ್ನು ಬಹಿರಂಗಪಡಿಸಬೇಕು ಎಂದು ಕೇಳಿಕೊಂಡಿದ್ದಾರೆ.

ಆರ್‌ಎಸ್‌ಎಸ್ ಪಾರದರ್ಶಕತೆ ಮತ್ತು ಸಾಂವಿಧಾನಿಕ ಹೊಣೆಗಾರಿಕೆಯನ್ನು ಕಾಯ್ದುಕೊಳ್ಳಬೇಕು ಎಂದು ಅವರು ಹೇಳಿದರು.

# ಕಲಾವಿದನ ಬದುಕು ಅತಂತ್ರ: ಬಾನಂದೂರು ಕೆಂಪಯ್ಯ

ಕೋಲಾರ

ಆಧುನಿಕತೆಯ ಭರಾಟೆಯಲ್ಲಿ ಜಾನಪದ ಕಲೆಗಳು ನಶಿಸಿ ಹೋಗುತ್ತಿವೆ ಎಂದು ಖ್ಯಾತ ಜಾನಪದ ಅಕಾಡೆಮಿಯ ಮಾಜಿ ಅಧ್ಯಕ್ಷ ಬಾನಂದೂರು ಕೆಂಪಯ್ಯ ಅಭಿಪ್ರಾಯಪಟ್ಟರು.

ಕೋಲಾರ ನಗರದ ಕನ್ನಡ ಭವನದಲ್ಲಿ ಈನೆಲ ಈಜಲ ಕಲೆ ಮತ್ತು ಸಾಂಸ್ಕೃತಿಕ ಸಂಸ್ಥೆ ಹಮ್ಮಿಕೊಂಡಿದ್ದ ಕರ್ನಾಟಕದ ಖ್ಯಾತ ಜಾನಪದ ಹಾಡುಗಾರ ಬಾನಂದೂರು ಕೆಂಪಯ್ಯ ಅವರ 75 ಜನ್ಮ ದಿನಾಚರಣೆ ಅಂಗವಾಗಿ ಮೂಡಲಸೀಮೆಯ ಕಾಲವಿದರಿಂದ ಗೀಯಗಾಯನ ಗುಚ್ಚ ಹಾಗೂ ಪ್ರಶಸ್ತಿ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಜಾನಪದ ಕಲೆಯನ್ನೇ ನಂಬಿ ಬದುಕುತ್ತಿದ್ದ ಇಂತಹ ಬೆಳೆಯುತ್ತಿರುವ ಕಲಾವಿದರ ಬದುಕು ಅತಂತ್ರ ಸ್ಥಿತಿಯಾಗಿದೆ. ಒಬ್ಬ ಕಲಾವಿದ ಇಂತಹ ದೊಡ್ಡ ಕಾರ್ಯಕ್ರಮವನ್ನು ಸ್ವಂತ ಖರ್ಚಿನಲ್ಲಿ ಮಾಡಬಹುದಾದರೆ ಅವರು ಪಟ್ಟ ಪಾಡು ಹೇಳತೀರದು. ಹಾಗಾಗಿ ಕಲಾವಿದರೆಲ್ಲರೂ ಒಗ್ಗಟ್ಟಾದಾಗ ನಾವು ನಮ್ಮ ಕಲೆಯನ್ನು ಮತ್ತು ಜೀವನವನ್ನು ತೃಪ್ತಿಕರವಾಗಿ ನಡೆಸಲು ಸಾಧ್ಯ. ಇಂದಿನ ಆಧುನಿಕತೆಯ ಜಗತ್ತಿನಲ್ಲಿ ಕಲಾವಿದರ ಬದುಕು ಮೂರಾಬಟ್ಟೆಯಾಗುತ್ತಿರುವ ಸಂದರ್ಭದಲ್ಲಿ ಸಂಸ್ಥೆಗಳು ಹಾಗೂ ಸರ್ಕಾರಿ ಅಕಾಡೆಮಿಗಳು ಇಂತಹ ಮೂಲೆಗುಂಪಾದ ಒಳ್ಳೆಯ ಜಾನಪದ ಕಲಾವಿದರನ್ನು ಗುರುತಿಸಿ ಅವರಿಗೆ ಸೂಕ್ತ ಸ್ಥಾನಮಾನವನ್ನು ನೀಡಿದಾಗ ಜಾನಪದ ಕಲೆಗಳು ಉಳಿಬಹುದೆಂದು ಹೇಳುತ್ತಾ, ಎಲ್ಲೋ ಜೋಗಪ್ಪ, ತರವಲ್ಲ ತಗಿ ನಿನ ತಂಬೂರಿ, ತನುವಿನೊಳಗನುದಿನವಿದ್ದು ಮುಂತಾದ ಜಾನಪದ ಹಾಡುಗಳನ್ನು ಹೇಳುತ್ತಾ ಎಲ್ಲರನ್ನೂ ಬೆರಗುಗೊಳಿಸಿದರು.




ಪತ್ರಕರ್ತ ಗಣೇಶ್ ಬಾನಂದೂರು ಕೆಂಪಯ್ಯ ಅವರ ಕುರಿತು ಅಭಿನಂದನಾ ಭಾಷಣವನ್ನು ಮಾತಾನಾಡುತ್ತಾ ತಂದೆ ತಾಯಿಯಿಂದ ಜಾನಪದ ಹಾಡುಗಳು ರಕ್ತಗರ್ಭಿತವಾಗಿ ಪಡೆದುಕೊಂಡ ಕೆಂಪಯ್ಯ ಜಾನಪದ ಕ್ಷೇತ್ರದಲ್ಲಿ ಗಗನಕ್ಕೇರಿರುವುದು ಅದ್ಬುತವಾದ ಸಾಧನೆ ಮಾಡಿದ್ದಾರೆ.

ಕೇವಲ ಗಾಯಕರಾಗದೆ ಶಿಕ್ಷಣ ಕ್ಷೇತ್ರದಲ್ಲಿಯೂ ಡಾಕ್ಟರೇಟ್ ಪಡೆದು ಎಲ್ಲಾ ಜಾನಪದ ಕಲಾವಿದರನ್ನು ಬೆಳಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಅಕಾಡೆಮಿಯ ಅಧ್ಯಕ್ಷರಾದ ಸಮಯದಲ್ಲಿ ಕಲಾವಿದ ಬದುಕನ್ನು, ಅವರ ಸಾಧನೆಗಳನ್ನು ಕುರಿತು ಹೊರತಂದ ಗ್ರಂಥ ಇಂದಿಗೂ ಮಾದರಿಯಾಗಿದೆ. ಅವರ ಹಾದಿಯಲ್ಲಿ ಕೋಲಾರದ ಕಲಾವಿದರೆಲ್ಲರೂ ಬೆಳೆದಿರುವುದು ಸಂತಸದ ಸಂಗತಿ ಎಂದರು.

ಖ್ಯಾತ ಜಾನಪದ ಕಲಾವಿದ ವೇಮಗಲ್ ನಾರಾಯಣಸ್ವಾಮಿ ಮಾತಾನಾಡಿ ಕೋಲಾರದಲ್ಲಿ ಬಹಳಷ್ಟು ಕಲಾವಿದರಿದ್ದಾರೆ. ಅವರಿಗೆ ಸೂಕ್ತ ಅವಕಾಶಗಳು ದೊರಕಬೇಕಾಗಿದೆ. ಹಿರಿಯ ಕಲಾವಿದರು ಅವರನ್ನು ಬೆಳೆಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು.

ಕರ್ನಾಟಕದಲ್ಲಿ ಕೋಲಾರ ಜಾನಪದದ ಮಣ್ಣಿನ ವಾಸನೆಯನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದ ಮತ್ತು ಕೊಂಡೊಯ್ಯುತ್ತಿರುವ ಅನೇಕ ಪ್ರಮುಖ ಕಲಾವಿದರಿದ್ದಾರೆ. ನಮ್ಮ ಪರಂಪರೆಯನ್ನು ಮುಂದುವರಿಸುವ ಪ್ರಯತ್ನ ಹಿರಿಯ ಕಲಾವಿದರು ಮಾಡಬೇಕೆಂದು ಹೇಳುತ್ತಾ ಉತ್ತರ ಕರ್ನಾಟಕದ ಮೂಲ ಜಾನಪದ ಹಾಡುಗಳನ್ನು ಹೇಳಿ ಎಲ್ಲರ ಮನ ರಂಜಿಸಿದರು.

ಕರ್ನಾಟಕ ಸಂಗೀತ, ನೃತ್ಯ ಕಲಾ ಅಕಾಡಮಿ ಸದಸ್ಯರಾದ ಡಿ ಆರ್ ರಾಜಪ್ಪ ಮಾತಾನಾಡಿಆಧುನಿಕತೆಯ ಪ್ರಭಾವದಿಂದ ಜಾನಪದ ಕಲೆಗಳು ಮರೆಯಾಗುತ್ತಿದ್ದು, ಈ ಕಲೆಯನ್ನು ನಂಬಿ ಬದುಕುವ ಕಲಾವಿದರ ಜೀವನ ಕೆಲವೊಮ್ಮೆ ಅತಂತ್ರವಾಗುವ ಸಾಧ್ಯತೆಯೂ ಇದೆ. ಇಂತಹ ಕಲಾವಿದರನ್ನು ಪ್ರೋತ್ಸಾಹಿಸಲು ಕರ್ನಾಟಕ ಜಾನಪದ ಅಕಾಡೆಮಿಯು ಜನಪದ ಕಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಶ್ರಮಿಸಬೇಕು.

ಹಾಗಾಗಿ ಇಂತಹ ಕೋಲಾರದಂತಹ ಕಲಾವಿದರನ್ನು ಬೆಳೆಸಿದ ಬಾನಂದೂರು ಅವರನ್ನು ನೆನಪಿಸುತ್ತಾ ಅವರ ಪ್ರೊತ್ಸಾಹ ಮತ್ತು ಪ್ರೇರಣೆ ಮರೆಯಲು ಸಾಧ್ಯವಿಲ್ಲ ಎನ್ನುತ್ತಾ ವೇದಿಕೆಯಲ್ಲಿ ಜಾನಪದ ಹಾಡುಗಳನ್ನು ಹೇಳಿದರು.

ಕರ್ನಾಟಕ ಸಂಗೀತ ನೃತ್ಯ ಕಲಾ ಅಕಾಡಮಿ ಸದಸ್ಯರಾದ ಮದ್ದೇರಿ ಮುನಿರೆಡ್ಡಿ ಮಾತಾನಾಡಿ ಕೋಲಾರ ಜಾನಪದ ಕಲಾವಿದರು ಕರ್ನಾಟಕದಲ್ಲಿರುವ ಪ್ರತಿಯೊಂದು ಹಳ್ಳಿಗಳ ಮಣ್ಣಿನ ವಾಸನೆಯನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದ ಅನೇಕ ಕಲಾವಿದ್ದಾರೆ. ಇಂತಹ ಸಾಲಿನಲ್ಲಿ ಇದೀಗ ವೆಂಕಟಾಚಲಪತಿ ಅವರು ಒಂದು ಒಳ್ಳೆಯ ಕಾರ್ಯಕ್ರಮ ಮಾಡಿ ಕೋಲಾರ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸುವಂತೆ ಮಾಡಿದ್ದಾರೆ ಹಾಗಾಗಿ ಅವರನ್ನು ಶ್ಲಾಘಿಸುತ್ತಾ ಇನ್ನೂ ಉತ್ತರದ ಕಾರ್ಯಕ್ರಮಗಳನ್ನು ಮಾಡಲಿ ಎಂದರು.

ಪ್ರಾಸ್ತಾವಿಕವಾಗಿ ಮಾತಾನಾಡಿದ ಕವಿ ಡಾ. ಶರಣಪ್ಪ ಗಬ್ಬೂರು ಕೋಲಾರದ ಕಲಾವಿದರು ಇನ್ನೂ ಬಡತನದಲ್ಲಿಯೇ ಜೀವಂತವಾಗಿದ್ದಾರೆ ಎನ್ನುವುದಕ್ಕೆ ಉತ್ತಮ ಉದಾಹರಣೆ ಎಂದರೆ ವೆಂಕಟಾಚಲಪತಿ ಕಲಾವಿದನೇ ಸಾಕ್ಷಿಯಾಗುತ್ತಾರೆ. ಒಳ್ಳೆಯ ಮನಸ್ಸಿನಿಂದ ನಾಡಿನ ಹೆಸರಾಂತ ಹಾಡುಗಾರರನ್ನು ಇಲ್ಲಿ ಗೌವರಿಸುವ ಕಾರ್ಯ ಮಾಡುತ್ತಿರುವುದು ಕೋಲಾರ ಜಿಲ್ಲೆಯ ಕೀರ್ತಿ ಇಡೀ ನಾಡಿಗೆ ಪರಿಚಯಿಸುವ ಕೆಲಸ ನಮ್ಮ ವೆಂಕಟಾಚಲಪತಿ ಮಾಡಿದ್ದಾರೆ ಎಂದರು.

ಸಮಾರಂಭದಲ್ಲಿ ಕವಿ ಲಕ್ಷ್ಮಯ್ಯ, ಅರಿನಾಗನಹಳ್ಳಿ, ಮುನಿವೆಂಕಟಮ್ಮ, ಶ್ರೀ ನಿಜನಾನಂದ ಸುಬ್ಬಾರೆಡ್ಡಿ ಸ್ವಾಮಿ, ಗಮನ ಶಾಂತಮ್ಮ, ಬುದ್ಧಿಮಾಂದ್ಯ ಶಾಲೆಯ ಶಂಕರ್, ಎಂ.ಎಸ್ ಶೇಖರ್ ಸೋಮಣ್ಣ ಮುಂತಾದವರಿಗೆ ಶ್ರೀ ಬಾನಂದೂರು ಕೆಂಪಯ್ಯ ಹೆಸರಿನಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಯನ್ನು ನೀಡಿ

# ಅರ್ಹ ಫಲಾನುಭವಿಗಳಿಗಷ್ಟೇ ಗ್ಯಾರಂಟಿ ಯೋಜನೆಗಳ ಸೌಲಭ್ಯ ಒದಗಿಸಿ

ರಾಮನಗರ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳು ಎಲ್ಲಾ ಅರ್ಹ ಫಲಾನುಭವಿಗಳಿಗೆ ತಲುಪಬೇಕು ಹಾಗೂ ಅರ್ಹರಿರುವ ಯಾವೊಬ್ಬ ಫಲಾನುಭವಿಯೂ ಈ ಯೋಜನೆಗಳಿಂದ ಹೊರಗುಳಿಯದಂತೆ ಎಚ್ಚರ ವಹಿಸಬೇಕೆಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು ಅವರು ನಿರ್ದೇಶನ ನೀಡಿದರು.

ಅವರು ಜೂ.16ರ ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸರ್ಕಾರದ ಮಾನದಂಡಗಳಿಗೆ ಒಳಪಡದೇ ಇರುವುದರಿಂದ ಜಿಲ್ಲೆಯ 937 ಅಂತ್ಯೋದಯ ಪಡಿತರ ಚೀಟಿಗಳನ್ನು ಎಪಿಎಲ್ ಪಡಿತರ ಚೀಟಿಗೆ ಪರಿವರ್ತಿಸಲಾಗಿದೆ. ಅದರಲ್ಲಿ ಚನ್ನಪಟ್ಟಣ ತಾಲ್ಲೂಕಿನಲ್ಲಿ 134, ಕನಕಪುರ ತಾಲ್ಲೂಕಿನಲ್ಲಿ 209, ಹಾರೋಹಳ್ಳಿ ತಾಲ್ಲೂಕಿನಲ್ಲಿ 71, ಮಾಗಡಿ ತಾಲ್ಲೂಕಿನಲ್ಲಿ 285 ಹಾಗೂ ಚನ್ನಪಟ್ಟಣ ತಾಲ್ಲೂಕಿನಲ್ಲಿ 238 ಎಎವೈ ಪಡಿತರ ಚೀಟಿಯಿಂದ ಎಪಿಎಲ್‌ಗೆ ಪರಿವರ್ತಿಸಲಾಗಿದೆ. ಅನರ್ಹ ಪಡಿತರ ಚೀಟಿಗಳಿಂದ ಸರ್ಕಾರದ ಆರ್ಥಿಕ ಹೊರೆ ತಗ್ಗಲಿದೆ ಎಂದರು.

ಜಿಲ್ಲೆಯ 225 ಎಪಿಎಲ್ ಪಡಿತರ ಚೀಟಿಗಳನ್ನು ಬಿಪಿಎಲ್‌ಗೆ ಪರಿವರ್ತಿಸಲಾಗಿದೆ. ಅನ್ನಭಾಗ್ಯ ಯೋಜನೆಯಡಿ 2025ರ ಫೆಬ್ರವರಿ ಮಾಹೆಯಿಂದ 2026ರ ಜೂನ್ ಮಾಹೆಯವರೆಗೆ ಪಡಿತರ ಚೀಟಿ ಫಲಾನುಭವಿಗಳಿಗೆ ಒಟ್ಟು 7,37,670 ಕ್ವಿಂಟಾಲ್ ಅನ್ನಭಾಗ್ಯ ಅಕ್ಕಿ ಹಂಚಿಕೆ ಮಾಡಲಾಗಿದೆ ಎಂದು ಸಂಬಂಧಿಸಿದ ಇಲಾಖೆಯ ಉಪನಿರ್ದೇಶಕರು ಸಭೆಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಮುಖ್ಯಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳ ಭಾವಚಿತ್ರಗಳನ್ನು ಅಳವಡಿಸಲು ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರಿಗೆ ಪತ್ರ ಬರೆಯಲಾಗಿದ್ದು, ನಿರ್ದೇಶನ ಬಂದ ನಂತರ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದ ಅವರು ಪಡಿತರ ಚೀಟಿಗಳನ್ನು ಪರಿವರ್ತಿಸುವ ಸಂದರ್ಭದಲ್ಲಿ ಅಧಿಕಾರಿಗಳು ಕೂಲಂಕುಷವಾಗಿ ಪರಿಶೀಲಿಸಬೇಕು, ಅರ್ಹ ಫಲಾನುಭವಿಗಳು ಅನ್ನಭಾಗ್ಯ ಯೋಜನೆಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ವಹಿಸಬೇಕು ಎಂದು ನಿರ್ದೇಶಿಸಿದರು.

ಚನ್ನಪಟ್ಟಣ, ರಾಮನಗರದಿಂದ ಬೆಂಗಳೂರಿಗೆ ಪ್ರಯಾಣಿಸಲು ಪ್ರತೀ ಭಾನುವಾರ ಸಂಜೆ 4 ರಿಂದ 6 ಗಂಟೆಯವರೆಗೂ ಹಾಗೂ ಸೋಮವಾರ ಬೆಳಿಗ್ಗೆ 11 ಗಂಟೆಯವರೆಗೆ ಹೆಚ್ಚುವರಿ ಬಸ್‌ಗಳನ್ನು ನಿಯೋಜಿಸಬೇಕು. ಈ ಸಮಯದಲ್ಲಿ ಜನದಟ್ಟಣೆ ಹೆಚ್ಚಿದ್ದು, ಪ್ರಯಾಣಿಕರಿಗೆ ತೊಂದರೆಯಾಗುತ್ತಿದೆ, ಅದರಂತೆ ಪ್ರತೀ ದಿನ ಬೆಳಿಗ್ಗೆ ಹಾಗೂ ಸಂಜೆ ಜನಸಂದಣಿಯ ಸಮಯದಲ್ಲಿ ಪ್ರಯಾಣಿಕರ ಅನುಕೂಲಕ್ಕೆ ತಕ್ಕಂತೆ ಬಸ್‌ಗಳನ್ನು ಓಡಿಸಬೇಕೆಂದರು.

ಶಾಲಾ-ಕಾಲೇಜುಗಳು ಆರಂಭಗೊಂಡಿದ್ದು, ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಜಿಲ್ಲೆಯಲ್ಲಿ ಅವಶ್ಯವಿರುವ ಗ್ರಾಮಗಳಿಗೆ ಬಸ್ ವ್ಯವಸ್ಥೆ ಹಾಗೂ ಜನದಟ್ಟಣೆ ಸಮಯದಲ್ಲಿ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಬೇಕು ಎಂದರು.

# ಮಹಾರಾಜ ಟ್ರೋಫಿ ಟಿ20: ಹಬ್ಬಿ ಟೈಗರ್ಸ್ ತಂಡದ ನಾಯಕನಾಗಿ ಅನೀಶ್ವರ್ ಗೌತಮ್ ನೇಮಕ

ಬೆಂಗಳೂರು: ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20 ಟೂರ್ನಿಯ ಐದನೇ ಆವೃತ್ತಿಗೆ ಹುಬ್ಬಳ್ಳಿ ಟೈಗರ್ಸ್ ತಂಡದ ನಾಯಕನಾಗಿ ಅನೀಶ್ವರ್ ಗೌತಮ್ ಅವರನ್ನು ಗುರುವಾರ ಅಧಿಕೃತವಾಗಿ ಘೋಷಿಸಲಾಯಿತು. ಇದೇ ವೇಳೆ ತಂಡದ ಹೊಸ ಜೆರ್ಸಿಯನ್ನು ಅನಾವರಣಗೊಳಿಸಿ, ಹಬ್ಬಿ ಟೈಗರ್ಸ್ ತಂಡದ ಅಧಿಕೃತ ಗೀತೆಯನ್ನು ಬಿಡುಗಡೆ ಮಾಡಲಾಯಿತು.




ಕಾರ್ಯಕ್ರಮದಲ್ಲಿ ಕೆಎಸ್‌ಸಿಎ ಉಪಾಧ್ಯಕ್ಷ ಸುಜಿತ್ ಸೋಮಸುಂದರ್, ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20 ಆಡಳಿತ ಮಂಡಳಿ ಅಧ್ಯಕ್ಷ ಎಂ.ಎಸ್. ಕೇಶವ, ಕೆಎಸ್‌ಸಿಎ ಖಜಾಂಚಿ ಬಿ.ಎನ್. ಮಧುಕರ್, ಹಬ್ಬಿ ಟೈಗರ್ಸ್ ಮಾಲೀಕರಾದ ಶಿವೇಕ್ ಜಿಂದಾಲ್ ಹಾಗೂ ಸುಶೀಲ್ ಕುಮಾರ್ ಜಿಂದಾಲ್, ಆಟಗಾರರು, ತರಬೇತಿ ಸಿಬ್ಬಂದಿ ಮತ್ತು ತಂಡದ ಆಡಳಿತ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

ನಾಯಕತ್ವದ ಜವಾಬ್ದಾರಿ ಸ್ವೀಕರಿಸಿದ ಬಳಿಕ ಮಾತನಾಡಿದ ಅನೀಶ್ವರ್ ಗೌತಮ್, ತಂಡದ ನಾಯಕನಾಗಿ ಆಯ್ಕೆಯಾಗಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

"ನಾಯಕತ್ವದ ಕುರಿತು ಮೊದಲ ಬಾರಿ ಮಾತುಕತೆ ನಡೆದಾಗ ಸ್ವಲ್ಪ ಆತಂಕವಿತ್ತು. ಆದರೆ ಮುಖ್ಯ ಕೋಚ್ ವಿನಯ್ ಕುಮಾರ್ ಹಾಗೂ ತರಬೇತಿ ಸಿಬ್ಬಂದಿ ನನ್ನಲ್ಲಿ ಆತ್ಮವಿಶ್ವಾಸ ತುಂಬಿದರು. ತಂಡದ ಆಟಗಾರರಿಂದಲೂ ಉತ್ತಮ ಬೆಂಬಲ ದೊರೆತಿದೆ. ಹಬ್ಬಿ ಟೈಗರ್ಸ್ ತಂಡವನ್ನು ಮುನ್ನಡೆಸುವುದು ನನಗೆ ಗೌರವದ ವಿಷಯ. ಪ್ರತಿ ಹರಾಜಿನಲ್ಲೂ ಇದೇ ತಂಡ ನನ್ನನ್ನು ಆಯ್ಕೆ ಮಾಡಲಿ ಎಂಬ ಆಶಯ ಇತ್ತು. ಈಗ ಇದೇ ತಂಡದ ನಾಯಕನಾಗಿರುವುದು ವಿಶೇಷ ಸಂತಸ ತಂದಿದೆ," ಎಂದು ಹೇಳಿದರು.

ತಂಡದ ಮುಖ್ಯ ಕೋಚ್ ವಿನಯ್ ಕುಮಾರ್ ಮಾತನಾಡಿ, ಹಬ್ಬಿ ಟೈಗರ್ಸ್ ಫ್ರಾಂಚೈಸಿಯ ವೃತ್ತಿಪರ ನಿರ್ವಹಣೆ ಮತ್ತು ಬೆಂಬಲವನ್ನು ಶ್ಲಾಘಿಸಿದರು.

"ಈ ಫ್ರಾಂಚೈಸಿ ಐಪಿಎಲ್ ತಂಡಗಳ ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತದೆ. ನಿರ್ವಹಣಾ ಮಂಡಳಿ ತರಬೇತಿ ಸಿಬ್ಬಂದಿಗೆ ಸಂಪೂರ್ಣ ಸ್ವಾತಂತ್ರ್ಯ ಮತ್ತು ಅಗತ್ಯ ಸಹಕಾರ ಒದಗಿಸುತ್ತದೆ. ಆರಂಭದಿಂದಲೂ ಫ್ರಾಂಚೈಸಿಯ ಯಶಸ್ಸಿಗೆ ಅವರು ಪ್ರಮುಖ ಶಕ್ತಿಯಾಗಿದ್ದಾರೆ. ಈ ಬಾರಿ ಅನುಭವಿಗಳ ಜೊತೆಗೆ ಯುವ ಪ್ರತಿಭೆಗಳ ಸಮತೋಲನ ಹೊಂದಿರುವ ಬಲಿಷ್ಠ ತಂಡವನ್ನು ಕಟ್ಟಿದ್ದೇವೆ. ಆಟಗಾರರು ತಮ್ಮ ಸಾಮರ್ಥ್ಯಕ್ಕೆ ತಕ್ಕ ಪ್ರದರ್ಶನ ನೀಡಿ ಪ್ರಶಸ್ತಿಗಾಗಿ ಹೋರಾಡಬೇಕು," ಎಂದು ಹೇಳಿದರು.

ಹೊಸ ನಾಯಕತ್ವದೊಂದಿಗೆ ಹಬ್ಬಿ ಟೈಗರ್ಸ್ ತಂಡ ಈ ಬಾರಿಯ ಮಹಾರಾಜ ಟ್ರೋಫಿ ಟಿ20 ಟೂರ್ನಿಯಲ್ಲಿ ಉತ್ತಮ ಪ್ರದರ್ಶನ ನೀಡುವ ವಿಶ್ವಾಸ ವ್ಯಕ್ತಪಡಿಸಿದೆ.

# ಘನತ್ಯಾಜ್ಯ ಕುರಿತು ಜಾಗೃತಿ

ಮಾಲೂರು

ನಗರಸಭೆ ಹಾಗೂ ಆರೋಗ್ಯ ಶಾಖೆಯ ಸಿಬ್ಬಂದಿಯವರು ಮಾಲೂರು ಪಟ್ಟಣದ ವ್ಯಾಪ್ತಿಯಲ್ಲಿ ಬರುವ 27 ವಾರ್ಡ್‌ಗಳಲ್ಲಿ ಘನತ್ಯಾಜ್ಯ ವಸ್ತುಗಳ ನಿರ್ವಹಣೆ ನಿಯಮಗಳು 2026 ರನ್ನು ಅನುಷ್ಠಾನಗೊಳಿಸುವ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಸಲುವಾಗಿ ನಗರದ ವಾರ್ಡುಗಳಲ್ಲಿ ಕಾರ್ಯಾಕ್ರಮದ ವೇಳಾಪಟ್ಟಿಯನ್ನು ನಿಗದಿಪಡಿಸಿಕೊಳ್ಳಲಾಗಿದೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಘನ ತ್ಯಾಜ್ಯ ವಸ್ತುಗಳ ನಿರ್ವಹಣೆಯ ಹೊಸ ನಿಯಮಗಳ ಅರಿವು ಪಡೆಯುವಂತೆ ನಗರಸಭೆ ಪೌರಾಯುಕ್ತ ಎಂಎಸ್ ಮಹದೇವ್ ಹೇಳಿದರು.

ಅವರು ನಗರದ ನಗರ ಸಭೆಯ ಅವರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಘನತ್ಯಾಜ್ಯ ವಸ್ತುಗಳ ನಿರ್ವಹಣೆ ನಿಯಮಗಳು 2026 ರನ್ನು ಅನುಷ್ಠಾನಗೊಳಿಸುವ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಸಲುವಾಗಿ ನಗರದ ವಾರ್ಡುಗಳಲ್ಲಿ ಕಾರ್ಯಕ್ರಮದ ವೇಳಾಪಟ್ಟಿಯನ್ನು ನಿಗದಿಪಡಿಸಿಕೊಳ್ಳಲಾಗಿದೆ ನಗರದ ಅಂಬೇಡ್ಕರ್ ಭವನದ ಜೂನ್ 18 ರಂದು 01, 02, ಮತ್ತು 12, ಜೂನ್ 20 ವಾರ್ಡ್ ನಂಬರ್ 03,04 ಮತ್ತು 05 ಕುಂಬೇಶ್ವರ ಕಲ್ಯಾಣ ಮಂಟಪ, ಜೂನ್ 22 ವಾರ್ಡ್ ನಂಬರ್ 06,07,08,09,10 ಮತ್ತು 11 ಕುಪಟ್ಟಶೇಟ್ಟಿ ಬಾವಿ ಬಯಲು ರಂಗಮಂದಿರ, ಜೂನ್ 24 ವಾರ್ಡ್ ನಂಬರ್ 17, 18,19,20 ಮತ್ತು 21, ಎಡಿ ಕಾಲೋನಿ ಸಮುದಾಯ ಭವನ, ಜೂನ್ 29 ವಾರ್ಡ್ ನಂಬರ್ 13,14,15 ಮತ್ತು 16, ತಿರುಮಲ ಕಲ್ಯಾಣ ಮಂಟಪ, ಜುಲೈ 01 ವಾರ್ಡ್ ನಂಬರ್ 22,23,24,25,26 ಮತ್ತು 27 ಹೆಚ್.ವಿ.ಆರ್. ಕಲ್ಯಾಣಮಂಟಪದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ 2026ರ ಘನತ್ಯಾಜ್ಯ ವಸ್ತುಗಳ ನಿರ್ವಹಣೆ ನಿಯಮಗಳ ಬಗ್ಗೆ ಜಾಗೃತಿ ಪಡೆಯುವಂತೆ ಹೇಳಿದ್ದಾರೆ.

# 'ದುಡಿಮೆಗೆ ದೂಡಿ ಮಕ್ಕಳ ಕನಸುಗಳನ್ನು ಚಿವುಟಬೇಡಿ'

ದೇವನಹಳ್ಳಿ

ಮಕ್ಕಳು ಆಟವಾಡುತ್ತಾ ಕಲಿಯುವ ವಯಸ್ಸಿನಲ್ಲಿ ಉತ್ತಮ ಶಿಕ್ಷಣ ಪಡೆದು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು. ಶಿಕ್ಷಣವೇ ಮಕ್ಕಳ ಉಜ್ವಲ ಭವಿಷ್ಯಕ್ಕೆ ಪ್ರಮುಖ ಸಾಧನವಾಗಿದ್ದು, ಅವರ ವ್ಯಕ್ತಿತ್ವ ಮತ್ತು ಬದುಕಿನ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಕಾನೂನು ಸ್ವಯಂಸೇವಕಿ ದೀಪಿಕಾ ದೇವರಾಜ್ ಹೇಳಿದರು.

ದೇವನಹಳ್ಳಿ ತಾಲೂಕು ಕಾನೂನು ಸೇವಾ ಸಮಿತಿ ಹಾಗೂ ಪರಿವರ್ತನಾ ಕಲಾ ಸಂಸ್ಥೆ, ಟಿ. ಅಗ್ರಹಾರ, ದೇವನಹಳ್ಳಿ ಇವರ ಸಂಯುಕ್ತ ಆಶ್ರಯದಲ್ಲಿ ಚನ್ನಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ವಿಶ್ವ ಬಾಲಕಾರ್ಮಿಕ ವಿರೋಧಿ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಮಕ್ಕಳ ಜಾಗೃತಿ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಬಡತನ ಮತ್ತು ಬಲವಂತದ ಕಾರಣದಿಂದ ಕೆಲವು ಪೋಷಕರು ಮಕ್ಕಳನ್ನು ದುಡಿಮೆಗೆ ದೂಡಿ ಅವರ ಹಕ್ಕುಗಳನ್ನು ಕಸಿದುಕೊಳ್ಳುವ ಹೀನ ಸಂಸ್ಕೃತಿ ಸಮಾಜದಲ್ಲಿ ಇನ್ನೂ ಮುಂದುವರಿದಿದೆ. ಇಂತಹ ಅನಿಷ್ಟ ಪದ್ಧತಿಯನ್ನು ನಿರ್ಮೂಲನೆ ಮಾಡಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು.

"ಮಕ್ಕಳ ಮನಸ್ಸು ಹೂವಿನಂತೆ ಕೋಮಲವಾಗಿರುತ್ತದೆ. ಅವರಿಗೆ ಶಿಕ್ಷಣದ ಮೂಲಕ ಉತ್ತಮ ಮೌಲ್ಯಗಳು ಮತ್ತು ಧನಾತ್ಮಕ ಚಿಂತನೆಗಳನ್ನು ನೀಡಿದರೆ, ಅವರು ಮುಂದಿನ ದಿನಗಳಲ್ಲಿ ದೇಶದ ರೂವಾರಿಗಳಾಗಿ ಬೆಳೆಯುತ್ತಾರೆ. ಆದ್ದರಿಂದ ಮಕ್ಕಳನ್ನು ದುಡಿಮೆಗೆ ದೂಡದೆ, ಅವರ ಕನಸುಗಳನ್ನು ಚಿವುಟದೆ ಶಿಕ್ಷಣದ ಮೂಲಕ ಸತ್ಪ್ರಜೆಗಳನ್ನಾಗಿ ರೂಪಿಸುವ ಜವಾಬ್ದಾರಿ ಎಲ್ಲರ ಮೇಲಿದೆ" ಎಂದು ಹೇಳಿದರು.



ಈ ಸಂದರ್ಭದಲ್ಲಿ ಪರಿವರ್ತನಾ ಕಲಾ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರು, ನಟ ಹಾಗೂ ನಿರ್ದೇಶಕರಾದ ಡಾ. ದೇವನಹಳ್ಳಿ ದೇವರಾಜ್ ಮಾತನಾಡಿ, ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಸರ್ಕಾರ 1098 ಮಕ್ಕಳ ಸಹಾಯವಾಣಿ ಸೇವೆಯನ್ನು ಆರಂಭಿಸಿದೆ. ಯಾವುದೇ ಕ್ಷೇತ್ರದಲ್ಲಿ ಬಾಲಕಾರ್ಮಿಕತೆ ಕಂಡುಬಂದರೆ ತಕ್ಷಣ ಸಹಾಯವಾಣಿಗೆ ಮಾಹಿತಿ ನೀಡುವ ಮೂಲಕ ಮಕ್ಕಳ ಹಕ್ಕುಗಳ ರಕ್ಷಣೆಗೆ ಸಾರ್ವಜನಿಕರು ಮುಂದಾಗಬೇಕು ಎಂದು ತಿಳಿಸಿದರು.

ಬಾಲಕಾರ್ಮಿಕರನ್ನು ದುಡಿಮೆಗೆ ದೂಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದ್ದು, ಮೊದಲ ಬಾರಿಗೆ ಅಪರಾಧ ಸಾಬೀತಾದರೆ ಕನಿಷ್ಠ ಆರು ತಿಂಗಳ ಜೈಲು ಶಿಕ್ಷೆ ಹಾಗೂ ರೂ.10,000 ದಂಡ ವಿಧಿಸಲಾಗುತ್ತದೆ. ಮರುಕಳಿಸಿದರೆ ಇನ್ನಷ್ಟು ಕಠಿಣ ಕ್ರಮ ಜರುಗಿಸಲಾಗುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಮುನಿರಾಜು ಮಾತನಾಡಿ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕೇವಲ ಸರ್ಕಾರ ಅಥವಾ ಸಂಘ-ಸಂಸ್ಥೆಗಳ ಜವಾಬ್ದಾರಿಯಲ್ಲ. ಇದು ಸಮಾಜದ ಪ್ರತಿಯೊಬ್ಬರ ಹೊಣೆಗಾರಿಕೆಯಾಗಿದೆ. ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಅಭಿಪ್ರಾಯಪಟ್ಟರು.

ಕನ್ನಡ ಶಿಕ್ಷಕ ಬೀರ ಹನುಮಂತಯ್ಯ ಅವರು ಮಕ್ಕಳಿಂದ ಬಾಲಕಾರ್ಮಿಕ ವಿರೋಧಿ ಘೋಷಣೆಗಳನ್ನು ಕೂಗಿಸುವ ಮೂಲಕ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಸಹಶಿಕ್ಷಕರಾದ ಸುರೇಖಾ, ಬಸವರಾಜು, ಬೀರ ಹನುಮಂತಯ್ಯ, ರಾಮಾನುಗೌಡ, ಮೆಹಬೂಬ್ ಸುಭಾನ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಿರಪ್ ಖರೀದಿಗೆ ನಿರ್ಬಂಧ

ನವದೆಹಲಿ

ಮೆಡಿಕಲ್ ಶಾಪ್‌ಗಳಲ್ಲಿ ಇನ್ಮುಂದೆ ಸಾರ್ವಜನಿಕರು ನೇರವಾಗಿ ಸಿರಪ್ ಖರೀದಿ ಮಾಡುವಂತಿಲ್ಲ ಎಂದು ಕೇಂದ್ರ ಆರೋಗ್ಯ ಇಲಾಖೆ ಆದೇಶ ಹೊರಡಿಸಿದೆ.

ವೈದ್ಯರ ಶಿಫಾರಸು ಇಲ್ಲದೇ ಯಾವುದೇ ಸಿರಪ್‌ಗಳನ್ನು ಖರೀದಿಸುವಂತಿಲ್ಲ. ಎಲ್ಲಾ ಸಿರಪ್‌ಗಳಿಗೆ ವೈದ್ಯರ ಪ್ರಿಸ್ಕ್ರಿಪ್ಷನ್ ಕಡ್ಡಾಯ. ಕೆಮ್ಮಿನ ಸಿರಪ್‌ಗೂ ವೈದ್ಯರ ಶಿಫಾರಸು ಅಗತ್ಯ ಎಂದು ಕೇಂದ್ರ ಸೂಚನೆ ನೀಡಿದೆ. ಕೇಂದ್ರವು 1945ರ ಔಷಧ ನಿಯಮಗಳನ್ನು ತಿದ್ದುಪಡಿ ಮಾಡಿದೆ.

ವೇಳಾಪಟ್ಟಿ ಅಡಿಯಲ್ಲಿ ಪಟ್ಟಿ ಮಾಡಲಾದ ವಿನಾಯಿತಿ ಪಡೆದ ಔಷಧಿಗಳ ವರ್ಗದಿಂದ 'ಸಿರಪ್‌ಗಳು' ಎಂಬ ಪದವನ್ನು ತೆಗೆದುಹಾಕಿದೆ.

ಇದು ಸಿರಪ್ ಆಧಾರಿತ ಸೂತ್ರೀಕರಣಗಳ ಮೇಲೆ ಬಿಗಿಯಾದ ನಿಯಂತ್ರಕ ಮೇಲ್ವಿಚಾರಣೆಯನ್ನು ಸೂಚಿಸುತ್ತದೆ.

# ಬಂಗಾರಪೇಟೆ ಸರ್ಕಾರಿ ಆಸ್ಪತ್ರೆ ಅವ್ಯವಸ್ಥೆಗೆ ಡಾ.ಆರ್.ರವಿ ಅಸಮಾಧಾನ

ಬಂಗಾರಪೇಟೆ

ಸರ್ಕಾರಿ ಆಸ್ಪತ್ರೆಯ ಸೇವೆಗಳ ಗುಣಮಟ್ಟ ಹಾಗೂ ಮೂಲಸೌಕರ್ಯಗಳ ನಿರ್ವಹಣೆ ಕುರಿತು ಪರಿಶೀಲನೆ ನಡೆಸಿದ ವಿಭಾಗೀಯ ಸಹ ನಿರ್ದೇಶಕ ಡಾ. ಆರ್. ರವಿ ಅವರು ಆಸ್ಪತ್ರೆ ಆಡಳಿತದ ಕಾರ್ಯವೈಖರಿಯ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಮಂಗಳವಾರ ಅನಿರೀಕ್ಷಿತವಾಗಿ ಬಂಗಾರಪೇಟೆ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದ ಅವರು, ಆಸ್ಪತ್ರೆಯ ವಿವಿಧ ವಿಭಾಗಗಳನ್ನು ಪರಿಶೀಲಿಸಿದರು. ಈ ವೇಳೆ ಆಸ್ಪತ್ರೆಯ ಮುಖ್ಯ ದ್ವಾರದ ಮುಂದೆ ಅಸಮರ್ಪಕವಾಗಿ ನಿಲ್ಲಿಸಿದ್ದ ಬೈಕ್‌ಗಳನ್ನು ಗಮನಿಸಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

"ಇದೇನು ಸಂತೆಯಾ? ಆಸ್ಪತ್ರೆ ಪ್ರವೇಶ ದ್ವಾರವನ್ನು ವಾಹನಗಳಿಂದ ಮುಚ್ಚಿಡಬಾರದು. ತಕ್ಷಣವೇ ಬೈಕ್‌ಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು," ಎಂದು ಸೂಚನೆ ನೀಡಿದರು.

ಪರಿಶೀಲನೆ ವೇಳೆ ಎಪಿಎಲ್ ಹಾಗೂ ಬಿಪಿಎಲ್ ವರ್ಗದ ಹೆರಿಗೆ ರೋಗಿಗಳಿಗೆ ನೀಡಲಾಗುತ್ತಿರುವ ಸೇವೆಗಳ ಕುರಿತು ಮಾಹಿತಿ ಪಡೆದ ಅವರು, ಆಸ್ಪತ್ರೆಗೆ ಬರುವ ಎಲ್ಲಾ ಹೆರಿಗೆ ರೋಗಿಗಳಿಗೆ ಅಗತ್ಯ ಪ್ರಯೋಗಾಲಯ ಪರೀಕ್ಷೆಗಳನ್ನು ಉಚಿತವಾಗಿ ಹಾಗೂ ತ್ವರಿತವಾಗಿ ನಡೆಸಬೇಕು ಎಂದು ಸೂಚಿಸಿದರು.




ಗರ್ಭಿಣಿಯರು ಸೇರಿದಂತೆ ಎಲ್ಲಾ ಒಳರೋಗಿಗಳಿಗೆ ಸರ್ಕಾರದ ನಿಯಮಾನುಸಾರ ಸಮಯಕ್ಕೆ ಸರಿಯಾಗಿ ಆಹಾರ ಒದಗಿಸಬೇಕು. ಊಟ ನೀಡದಿರುವುದು ಗಂಭೀರ ನಿರ್ಲಕ್ಷ್ಯ ಎಂದು ಎಚ್ಚರಿಕೆ ನೀಡಿದರು.

ಆಸ್ಪತ್ರೆಯಲ್ಲಿ ಔಷಧಿಗಳ ಕೊರತೆ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದ ಡಾ. ರವಿ, ಒಂದು ವಾರದೊಳಗೆ ಸಮಸ್ಯೆಯನ್ನು ಸಂಪೂರ್ಣವಾಗಿ ಇತ್ಯರ್ಥಗೊಳಿಸುವಂತೆ ಸೂಚಿಸಿದರು. ಅಗತ್ಯ ಔಷಧಿಗಳ ಬೇಡಿಕೆಯನ್ನು ಈಗಾಗಲೇ ಸಲ್ಲಿಸಲಾಗಿದ್ದು, ಶೀಘ್ರದಲ್ಲೇ ಸರಬರಾಜು ವ್ಯವಸ್ಥೆ ಸುಧಾರಿಸಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಆಸ್ಪತ್ರೆಯ ಸ್ವಚ್ಛತೆ ಕುರಿತು ವಿಶೇಷ ಗಮನ ಹರಿಸಿದ ಅವರು, ಬಾತ್‌ರೂಮ್ ಹಾಗೂ ಶೌಚಾಲಯಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಬೇಕು, ಅಗತ್ಯವಿರುವೆಡೆ ವೇಸ್ಟ್‌ಬಿನ್‌ಗಳನ್ನು ಅಳವಡಿಸಬೇಕು ಹಾಗೂ ಕಾರಿಡಾರ್‌ಗಳಲ್ಲಿ ಸ್ವಚ್ಛತಾ ವ್ಯವಸ್ಥೆಯನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಸೂಚಿಸಿದರು. ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ಮೂಲಸೌಕರ್ಯಗಳ ಕೊರತೆ ಬಗ್ಗೆ ದೂರುಗಳು ಬಾರದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು, "ಮುಂದಿನ ತಿಂಗಳ 12ರಂದು ಮತ್ತೆ ಆಸ್ಪತ್ರೆಗೆ ಭೇಟಿ ನೀಡುತ್ತೇನೆ. ಆ ವೇಳೆಗೆ ಯಾವುದೇ ದೂರುಗಳು ಬರಬಾರದು. ರೋಗಿಗಳಿಗೆ ಉತ್ತಮ ಸೇವೆ ಒದಗಿಸುವುದು ಆಸ್ಪತ್ರೆಯ ಎಲ್ಲಾ ಸಿಬ್ಬಂದಿಯ ಜವಾಬ್ದಾರಿ," ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಭಾರತಿ, ಆರೋಗ್ಯ ಅಧಿಕಾರಿ ಸುನಿಲ್, ಹಿರಿಯ ಆರೋಗ್ಯ ನಿರೀಕ್ಷಕ ಆರ್. ರವಿ ಸೇರಿದಂತೆ ವಿವಿಧ ವಿಭಾಗಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಆಸ್ಪತ್ರೆ ಪರಿಶೀಲನೆ ವೇಳೆ ಹೆರಿಗೆ ಪ್ರಕರಣಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬೇರೆ ಆಸ್ಪತ್ರೆಗಳಿಗೆ ರೆಫರ್ ಮಾಡುತ್ತಿರುವ ಕುರಿತು ವಿಭಾಗೀಯ ಸಹ ನಿರ್ದೇಶಕ ಡಾ. ಆರ್. ರವಿ ಸಂಬಂಧಿಸಿದ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು.

ಈ ವೇಳೆ ತಮ್ಮ ಅಸಮಾಧಾನ ವ್ಯಕ್ತಪಡಿಸಿದ ಶುಶ್ರೂಷಕಿಯೊಬ್ಬರು ಭಾವುಕರಾಗಿ ಕಣ್ಣೀರು ಸುರಿಸಿದರು.

"ಆಸ್ಪತ್ರೆಗೆ ಬರುವ ಹೆರಿಗೆ ಪ್ರಕರಣಗಳನ್ನು ವೈದ್ಯರ ಸೂಚನೆಯಂತೆ ಬೇರೆ ಆಸ್ಪತ್ರೆಗೆ ರೆಫರ್ ಮಾಡಲಾಗುತ್ತಿದೆ. ಆದರೆ ನಂತರ ರೆಫರ್ ಪ್ರಕರಣಗಳ ಸಂಖ್ಯೆಯನ್ನು ಆಧಾರವನ್ನಾಗಿ ಮಾಡಿಕೊಂಡು ನಮ್ಮ ಮೇಲೆಯೇ ಲೋಪದೋಷಗಳ ಆರೋಪ ಮಾಡಲಾಗುತ್ತಿದೆ. ನಾವು ವೈದ್ಯರು ಹೇಳಿದಂತೆ ಕರ್ತವ್ಯ ನಿರ್ವಹಿಸುತ್ತಿದ್ದೇವೆ," ಎಂದು ಅವರು ಅಳಲು ತೋಡಿಕೊಂಡರು.

# ಯೋಜನೆಯ ಸದುಪಯೋಗಕ್ಕೆ ಕರೆ

ರಾಮನಗರ

ಭಾರತ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) 2.0 ಯೋಜನೆಯನ್ನು ಸರ್ವರಿಗೂ ಸೂರು ಅಭಿಯಾನದಡಿ ದಿನಾಂಕ: 01–09–2024 ರಿಂದ ಜಾರಿಗೆ ತಂದಿರುತ್ತೆ. ಈ ಯೋಜನೆಯಡಿ ಕೊಳಚೆ ನಿವಾಸಿಗಳನ್ನು ಒಳಗೊಂಡಂತೆ ನಗರ ಪ್ರದೇಶದ ವಸತಿ ರಹಿತ ಬಡವರು ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸುವ ಉದ್ದೇಶ ಹೊಂದಲಾಗಿದ್ದು, ಮುಂದಿನ 5 ವರ್ಷಗಳಲ್ಲಿ ದೇಶಾದ್ಯಂತ ಒಂದು ಕೋಟಿ ನಗರ ಕುಟುಂಬಗಳಿಗೆ ಸಹಾಯಧನ ಮೂಲಕ ಸೂರು ಒದಗಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿರುತ್ತದೆ.

ಈ ಯೋಜನೆಯ ಮಾರ್ಗಸೂಚಿಗಳನ್ವಯ ವಸತಿ ರಹಿತ ಫಲಾನುಭವಿಗಳ ಸಮೀಕ್ಷೆ ಕೈಗೊಳ್ಳಲು ಸೂಚಿಸಿರುವ ಮೇರೆಗೆ ಬಿಡದಿ ಪುರಸಭಾ ವ್ಯಾಪ್ತಿಯ ಸಾರ್ವಜನಿಕರು ಈ ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳಬಹುದು.

ವಸತಿರಹಿತ ಫಲಾನುಭವಿಗಳು ಸ್ವಂತ ನಿವೇಶನ/ಕಚ್ಚಾಮನೆ ಹೊಂದಿದ್ದಲ್ಲಿ / ಹಕ್ಕುಪತ್ರ/ ಕ್ರಯಪತ್ರ/ ದಾನಪತ್ರ/ ಉಡುಗೊರೆಪತ್ರ/ ಖಾತಾ ಪತ್ರಗಳಲ್ಲಿ ಯಾವುದಾದರೂ ದಾಖಲೆಯನ್ನು ಹೊಂದಿರಬೇಕು. ಪ್ರಧಾನ ಮಂತ್ರಿ ಆವಾಸ್ ನಗರ 1.0 ಯೋಜನೆಯ ಸಮೀಕ್ಷೆಯಲ್ಲಿ ಸೇರಿ ವಸತಿ ಸೌಲಭ್ಯ ಪಡೆಯದೆ ಉಳಿದಿರುವ ಎಲ್ಲಾ ಅರ್ಹ ಫಲಾನುಭವಿಗಳನ್ನು ಪ್ರದಾನ ಮಂತ್ರಿ ಆವಾಸ್ ನಗರ 2.0 ಸಮೀಕ್ಷೆಯಲ್ಲಿ ಸೇರಬಹುದು. ಈ ಹಿಂದೆ ಪ್ರದಾನ ಮಂತ್ರಿ ಆವಾಸ್ ನಗರ ಯೋಜನೆಯಡಿ ಆಯ್ಕೆಯಾಗಿ ಮನೆ ನಿರ್ಮಿಸದೇ ದಿನಾಂಕ: 31.12.2023ರ ನಂತರ ಕೇಂದ್ರ ಸರ್ಕಾರದಿಂದ ಮನೆ ರದ್ದುಗೊಂಡ ಫಲಾನುಭವಿಗಳು ಸಮೀಕ್ಷೆಯಲ್ಲಿ ಅರ್ಜಿ ಸಲ್ಲಿಸಲು ಅನರ್ಹರಾಗಿರುತ್ತಾರೆ. ರಾಜ್ಯ ಮತ್ತು ಕೇಂದ್ರ ಸರ್ಕಾರದ ವಸತಿ ಯೋಜನೆಗಳಡಿ ಈಗಾಗಲೇ ವಸತಿ ಸೌಲಭ್ಯ ಪಡೆದಿರುವ ಫಲಾನುಭವಿಗಳು ಸಮೀಕ್ಷೆಯಲ್ಲಿ ಸೇರಲು ಅನರ್ಹರಾಗಿರುತ್ತಾರೆ.

ಆಸಕ್ತಿ ಸಾರ್ವಜನಿಕರು ಈ ಯೋಜನೆಯ ಸಮೀಕ್ಷೆಯನ್ನು ಸೇರ್ಪಡೆಯಾಗಲು 2026ರ ಜೂನ್ 30 ರೊಳಗೆ ಕೇಂದ್ರ ಸರ್ಕಾರದ ಆನ್‌ಲೈನ್ ಪೋರ್ಟಲ್‌ನಲ್ಲಿ ದಾಖಲಾತಿಗಳೊಂದಿಗೆ ಬಿಡದಿ ಪುರಸಭೆಯ ವಸತಿ ಶಾಖೆಯ ಅಧಿಕಾರಿ/ಸಿಬ್ಬಂದಿಯನ್ನು ಸಂಪರ್ಕಿಸಬಹುದು. ಸೈಬರ್ ಸೆಂಟರ್ ಕರ್ನಾಟಕ ಒನ್ ಹಾಗೂ ಇತರೆ ಸೇವಾ ಸಿಂಧೂ ಮೂಲಕ ಹಾಕುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ ಎಂದು ಬಿಡದಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುಂಡಿ ಮುಚ್ಚಲು ಎಐ ಮೊರೆಹೋದ ಎನ್‌ಎಚ್‌ಎಐ

ಬೆಂಗಳೂರು

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ದೇಶದ ರಾಷ್ಟ್ರೀಯ ಹೆದ್ದಾರಿಗಳ ನಿರ್ವಹಣೆಯಲ್ಲಿ ಮಹತ್ವದ ಬದಲಾವಣೆ ತರಲು ಮುಂದಾಗಿದ್ದು, ಕೃತಕ ಬುದ್ಧಿಮತ್ತೆ, ಡ್ರೋನ್‌ಗಳು ಹಾಗೂ ಸುಧಾರಿತ ಡೇಟಾ ವಿಶ್ಲೇಷಣಾ ತಂತ್ರಜ್ಞಾನಗಳನ್ನು ಬಳಸುವ ಪೂರ್ವಾನುಮಾನ ಆಧಾರಿತ ಆಸ್ತಿ ನಿರ್ವಹಣಾ ವ್ಯವಸ್ಥೆ ಅಳವಡಿಸಿಕೊಳ್ಳುತ್ತಿದೆ. ಗುಂಡಿಗಳು ಮತ್ತು ಇತರ ರಸ್ತೆ ದೋಷಗಳು ಗಂಭೀರ ಸಮಸ್ಯೆಗಳಾಗುವ ಮುನ್ನವೇ ಅವುಗಳನ್ನು ಪತ್ತೆಹಚ್ಚಿ ದುರಸ್ತಿಗೊಳಿಸುವುದು ಈ ಹೊಸ ವ್ಯವಸ್ಥೆಯ ಮುಖ್ಯ ಉದ್ದೇಶವಾಗಿದೆ.

ರಾಷ್ಟ್ರೀಯ ಹೆದ್ದಾರಿಗಳ ಸ್ಥಿತಿಯನ್ನು ಪರಿಶೀಲಿಸಲು ನೆಟ್‌ವರ್ಕ್ ಸರ್ವೇ ವೆಹಿಕಲ್ಸ್ ಅನ್ನು ಬಳಸಲಾಗುತ್ತಿದೆ. ಇವು ರಸ್ತೆಯ ಮೇಲ್ಮೈಯ ಅಸಮತೋಲನ, ಬಿರುಕುಗಳು, ಗುಂಡಿಗಳು ಹಾಗೂ ರಚನಾತ್ಮಕ ಹಾನಿಯನ್ನು ಮೌಲ್ಯಮಾಪನ ಮಾಡಲಿವೆ. ಇದರ ಜೊತೆಗೆ ಡ್ರೋನ್ ಅನಾಲಿಟಿಕ್ಸ್ ಮಾನಿಟರಿಂಗ್ ಸಿಸ್ಟಮ್ ಮೂಲಕ ಹೆದ್ದಾರಿ ಆಸ್ತಿಗಳ ಡಿಜಿಟಲ್ ದಾಖಲೆ ಸಿದ್ಧಪಡಿಸುವುದು, ಸೇತುವೆಗಳು ಹಾಗೂ ಇತರ ರಚನೆಗಳ ಮೇಲ್ವಿಚಾರಣೆ ಮತ್ತು ಅತಿಕ್ರಮಣ ಪತ್ತೆಹಚ್ಚುವ ಕಾರ್ಯ ನಡೆಯಲಿದೆ. ಫಾಲಿಂಗ್ ವೇಟ್ ಡಿಫ್ಲೆಕ್ಟೋಮೀಟರ್ ಪರೀಕ್ಷೆಗಳ ಮೂಲಕ ರಸ್ತೆಯ ಸಾಮರ್ಥ್ಯ ಅಳೆಯಲಾಗುತ್ತಿದ್ದು, ದುರ್ಬಲಗೊಳ್ಳುತ್ತಿರುವ ರಸ್ತೆ ಭಾಗಗಳನ್ನು ಗುರುತಿಸಲಾಗುತ್ತದೆ.

ಹೆದ್ದಾರಿಗಳಲ್ಲಿ ೦೫ ಆಧಾರಿತ ಡ್ಯಾಶ್‌ಕ್ಯಾಮ್ ಅನಾಲಿಟಿಕ್ಸ್ ಸರ್ವೀಸ್ ಅನ್ನು ಕೂಡ ಜಾರಿಗೊಳಿಸಲಾಗುತ್ತಿದೆ. ಈ ವ್ಯವಸ್ಥೆ ಸ್ವಯಂಚಾಲಿತವಾಗಿ, ರಸ್ತೆ ಗುಂಡಿಗಳು, ಹಾನಿಗೊಳಗಾದ ಕ್ರ್ಯಾಶ್ ಬ್ಯಾರಿಯರ್‌ಗಳು, ದೋಷಪೂರಿತ ಬೀದಿ ದೀಪಗಳು ಸೇರಿ ಮುಂತಾದ ಸಮಸ್ಯೆಗಳನ್ನು ಪತ್ತೆಹಚ್ಚಲಿದೆ. ಈ ಹೊಸ ವ್ಯವಸ್ಥೆಯಿಂದ ಹೆದ್ದಾರಿಗಳ ಆಯುಷ್ಯ ಹೆಚ್ಚಲಿರುವುದರ ಜೊತೆಗೆ ನಿರ್ವಹಣಾ ವೆಚ್ಚ ಕಡಿಮೆಯಾಗಲಿದೆ. ಪ್ರಯಾಣಿಕರಿಗೆ ಉತ್ತಮ ಸಂಚಾರ ಅನುಭವ ಕೂಡ ದೊರಕಲಿದೆ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತಿಳಿಸಿರೋದಾಗಿ ಡೆಕ್ಕನ್ ಹೆರಾಲ್ಡ್ ವರದಿ ಮಾಡಿದೆ.

# ಮರಗಳ ತೆರವಿಗೆ ಒತ್ತಾಯ



ವಿಜಯಪುರ

ಪಟ್ಟಣದ ಚಿಕ್ಕಬಳ್ಳಾಪುರ ಮುಖ್ಯರಸ್ತೆಯಲ್ಲಿ, ಕೆ.ಪಿ.ಟಿ.ಸಿ.ಎಲ್ ವಿದ್ಯುತ್ ಪ್ರಸರಣ ಘಟಕದ ಪಕ್ಕದಲ್ಲಿರುವ, ಬೆಸ್ಕಾಂ ಇಲಾಖೆಯ ವಸತಿ ಗೃಹಗಳ ಬಳಿಯಲ್ಲಿ, ಬೆಳೆದು ನಿಂತಿರುವ ಮರಗಳನ್ನು ತೆರವುಗೊಳಿಸಿಕೊಡುವಂತೆ, ಮೂರು ವರ್ಷಗಳಿಂದ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಪತ್ರಗಳು ಬರೆದರೂ, ಇದುವರೆಗೂ ಮರಗಳು ತೆರವುಗೊಳಿಸಿಲ್ಲವೆಂದು ಬೆಸ್ಕಾಂ ಇಲಾಖೆ ಸಿಬ್ಬಂದಿ ಬೇಸರ ವ್ಯಕ್ತಪಡಿಸಿದರು.

ವಸತಿ ಗೃಹಗಳ ಮುಂಭಾಗದಲ್ಲಿ ಬೆಳೆದಿರುವ ಮರಗಳ ಬೇರುಗಳು, ಮನೆಗಳ ಒಳಗೆ ನುಗ್ಗಿವೆ. ಇದರಿಂದ ಕಟ್ಟಡಗಳ ಗೋಡೆಗಳಿಗೆ ಹಾನಿಯಾಗಿದೆ. ಮೇಲ್ಚಾವಣಿಗಳು ಬಿರುಕು ಬಿಡುತ್ತಿದ್ದು, ಸಿಬ್ಬಂದಿ ಇಲ್ಲಿ ವಾಸ ಮಾಡುವುದಕ್ಕೂ ಹಿಂದೇಟು ಹಾಕುತ್ತಿದ್ದಾರೆ.

ಮರಗಳನ್ನು ತೆರವುಗೊಳಿಸಿಕೊಡಿ ಎಂದು ನಾಲ್ಕೈದು ಬಾರಿ ಮನವಿಗಳು ಕೊಟ್ಟಿದ್ದೇವೆ.

ಅರಣ್ಯ ಇಲಾಖೆಯ ಅಧಿಕಾರಿಗಳು ಬಂದು, ಮರಗಳನ್ನು ಪರಿಶೀಲನೆ ಮಾಡಿಕೊಂಡು, ಶೀಘ್ರವಾಗಿ ತೆರವುಗೊಳಿಸಿಕೊಡುತ್ತೇವೆಂದು ಭರವಸೆ ಕೊಟ್ಟು ಹೋದವರು, ಇದುವರೆಗೂ ಈ ಕಡೆಗೆ ಸುಳಿದಿಲ್ಲ. ವಸತಿ ಗೃಹಗಳಲ್ಲಿ ವಾಸ ಮಾಡಬೇಕಾಗಿದ್ದ ಸಿಬ್ಬಂದಿ, ದುಬಾರಿ ಬಾಡಿಗೆ ಕೊಟ್ಟು, ಬಾಡಿಗೆ ಮನೆಗಳಲ್ಲಿ ವಾಸ ಮಾಡುವಂತಾಗಿದೆ.

ಕೆ.ಪಿ.ಟಿ.ಸಿ.ಎಲ್. ವಿದ್ಯುತ್ ಪ್ರಸರಣ ಘಟಕದ ಪಕ್ಕದಲ್ಲೆ, ಬೃಹತ್ ನೀಲಗಿರಿ ಮರವಿದ್ದು, ಅದರ ಕೊಂಬೆಗಳು ಘಟಕದ ಕಡೆಗೆ ವಾಲಿಕೊಂಡಿವೆ. ಕೊಂಬೆಗಳು ವಾಲಿಕೊಂಡಿರುವುದರಿಂದ ಅದರ ಭಾರಕ್ಕೆ ಮರವೂ ಬಾಗುವುತ್ತಿದೆ.

ಗಾಳಿ ಜಾಸ್ತಿಯಾದರೆ ಬೃಹತ್ ಗಾತ್ರದ ಮರ ಉರುಳಿ ಬಿದ್ದರೆ, ಘಟಕಕ್ಕೆ ಪೂರ್ಣ ಪ್ರಮಾಣದಲ್ಲಿ ಹಾನಿಯಾಗುತ್ತದೆ. ಇದರಿಂದ ಇಡೀ ಪಟ್ಟಣಕ್ಕೆ ವಿದ್ಯುತ್ ಸರಬರಾಜು ಸ್ಥಗಿತವಾಗುತ್ತದೆ ಆದ್ದರಿಂದ ಸಂಬಂಧಪಟ್ಟ ಅರಣ್ಯ ಇಲಾಖೆಯವರು, ಮರಗಳನ್ನು ತೆರವುಗೊಳಿಸಿಕೊಡಬೇಕು ಎಂದು ಒತ್ತಾಯಿಸಿದರು.



ತಿಪಟೂರು ನಗರದ ಶ್ರೀ ಬಸವೇಶ್ವರ ಕಾಲೇಜಿನ ಕ್ರೀಡಾಂಗಣದಲ್ಲಿ,ಅದಾನಿ ಎಸಿಸಿ ಸಿಮೆಂಟ್ ವತಿಯಿಂದ ಆಯೋಜಿಸಲಾಗಿದ್ದ ರಕ್ತದಾನ ಶಿಬಿರ ಮತ್ತು ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜಿಸಲಾಗಿತ್ತು. ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾಗವಹಿಸಿದ ಶ್ರೀನಿಧಿ ನೇತೃತ್ವದ ಕಾಮ್ರೆಡ್ಸ್ ತಂಡವು ಫೈನಲ್ ಪಂದ್ಯದಲ್ಲಿ ರೋಚಕ ಗೆಲುವಿನೊಂದಿಗೆ ಟ್ರೋಫಿ ತಮ್ಮದಾಗಿಸಿಕೊಂಡಿತು. ಕಾಮ್ರೆಡ್ಸ್ ತಂಡದ ನಾಯಕ ಶ್ರೀನಿಧಿ ಕೆ.ಪಿ,ಆಟಗಾರರಾದ ತ್ರಿಲೋಕ್ ಕೆ.ಎನ್,ತ್ರಿನೇಶ್ ಬಿ.ಜಿ, ಧನಂಜಯ.ಕೆ ,ಮೋಹನ್, ಸ್ವರೂಪ ಹೆಚ್.ಜಿ, ವಚನ್, ವಿನ್ಯಾಸ್, ತೇಜಸ್, ಪ್ರಜ್ವಲ್ ಮತ್ತು ಸಂದೀಪ್ ವಿಜಯೋತ್ಸವದಲ್ಲಿ ಭಾಗಿಯಾಗಿದ್ದರು.

# ನೌಕರರ ಕ್ರೀಡಾಕೂಟಕ್ಕೆ ಚಾಲನೆ

ಕೋಲಾರ

ಕಂದಾಯ ಇಲಾಖೆ ನೌಕರರು ಹೆಚ್ಚು ಒತ್ತಡದಿಂದ ಕೆಲಸ ಮಾಡುತ್ತಾರೆ. ಕೃಷಿ, ತೋಟಗಾರಿಕೆ, ಸಾರಿಗೆ ಸೇರಿದಂತೆ ಉಳಿದ ಇಲಾಖೆಗಳಿಗೆ ಇರುವಂತೆ ಕಂದಾಯ ಇಲಾಖೆಗೆ ಕಾರ್ಯವ್ಯಾಪ್ತಿ ಎಂಬುದಿಲ್ಲ. ನಮ್ಮ ಕಾರ್ಯವ್ಯಾಪ್ತಿ ಬಹಳ ವಿಶಾಲವಾಗಿದೆ. ವೈವಿಧ್ಯತೆ, ಕ್ಲಿಷ್ಟಕರ ವಿಚಾರ ಗಮನಿಸಿದಾಗ ಹೆಚ್ಚು ಒತ್ತಡದಲ್ಲಿ ಇರುತ್ತಾರೆ. ಹೀಗಾಗಿ, ಎರಡು ದಿನಗಳ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ಆರ್ ರವಿ ಹೇಳಿದರು.

ನಗರದ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಕ್ರೀಡಾಪಟುಗಳೊಂದಿಗೆ ಆಟವಾಡಿದ ನಂತರ ಕ್ರೀಡಾಂಗಣದ ಮುಂಭಾಗ ಗಿಡ ನೆಟ್ಟು ಮಾತನಾಡಿದ ಅವರು ಕೆಲಸದಿಂದ ಬಿಡುವು ಪಡೆದು ಆಟದ ಮೂಲಕ ಮನಸ್ಸು ಹಾಗೂ ದೇಹ ರಿಲ್ಯಾಕ್ಸ್ ಮಾಡಿಕೊಳ್ಳಲು ಈ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ.

ದಿನನಿತ್ಯದ ಒತ್ತಡದ ನಡುವೆ ಮಾನಸಿಕವಾಗಿ ಹಾಗೂ ಭೌತಿಕವಾಗಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಸಹಾಯವಾಗಲಿದೆ.

ನಿತ್ಯ ಕರ್ತವ್ಯದ ಹೊರತಾಗಿ ಇಂಥ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ಮನಸ್ಸುಗಳನ್ನು ಒಗ್ಗೂಡಿಸುತ್ತವೆ, ಒತ್ತಡ ನಿವಾರಣೆ ಮಾಡುತ್ತವೆ. ಬಾಂಧವ್ಯಗಳನ್ನು ಬೆಳೆಸಲು ಅನುಕೂಲವಾಗುತ್ತದೆ. ಜಿಲ್ಲಾಧಿಕಾರಿ ಹಾಗೂ



ಉಪವಿಭಾಗಾಧಿಕಾರಿಗಳ ಕಚೇರಿಯ ಸಿಬ್ಬಂದಿ ಕೂಡ ತಂಡ ಮಾಡಿಕೊಂಡು ಪಾಲ್ಗೊಂಡಿದ್ದಾರೆ ಎಂದರು.

ಪ್ರತಿವರ್ಷದಂತೆ ಈ ವರ್ಷವೂ ಜುಲೈ 1ರಂದು ಕಂದಾಯ ದಿನಾಚರಣೆ ನಡೆಸಲಾಗುತ್ತದೆ. ಅದರ ಪೂರ್ವಭಾವಿಯಾಗಿ ಎರಡು ದಿನ ಕಂದಾಯ ಇಲಾಖೆಯ ಎಲ್ಲಾ ಅಧಿಕಾರಿಗಳು, ನೌಕರರು ಹಾಗೂ ಸಿಬ್ಬಂದಿ ಕ್ರೀಡಾ ಚಟುವಟಿಕೆ ಆಯೋಜಿಸಲಾಗಿದೆ' ಎಂದರು.

ಕಾರ್ಯಕ್ರಮ ದಲ್ಲಿ ಅಪರ ಜಿಲ್ಲಾಧಿಕಾರಿ ಎಸ್. ಎಂ.ಮಂಗಳಾ, ಎಲ್ಲಾ ತಹಶೀಲ್ದಾರ್‌ಗಳು, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎ.ಅಜಯ್ ಕುಮಾರ್, ಕಂದಾಯ ನೌಕರರ ಸಂಘದ ರಾಜೇಂದ್ರ ಪ್ರಸಾದ್, ಜಿಲ್ಲೆಯ ಮತ್ತು ತಾಲ್ಲೂಕು ವ್ಯಾಪ್ತಿಯ ಕಂದಾಯ ಇಲಾಖೆಯ ನೌಕರ, ಸಿಬ್ಬಂದಿಗಳು ಪಾಲ್ಗೊಂಡಿದ್ದರು.ಆರೂ ತಾಲ್ಲೂಕುಗಳಿಂದ ಕಂದಾಯ ಇಲಾಖೆಯ ಸುಮಾರು 300 ಮಂದಿ ಪಾಲ್ಗೊಂಡಿದ್ದರು.

# ಸರಕಾರಿ ಶಾಲೆಯಲ್ಲೂ, ಗುಣಮಟ್ಟದ ಶಿಕ್ಷಣ ನೀಡಲು, ಸಕಲ ಸಿದ್ಧತೆ

ವಿಜಯಪುರ

ಪಟ್ಟಣದ ಗುರಪ್ಪನಮಠದ ಪಿ.ಎಂ.ಶ್ರೀ ಶಾಲೆಗೆ 2026–27 ನೇ ಶೈಕ್ಷಣಿಕ ಸಾಲಿಗೆ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯಪುಸ್ತಕ, ಸಮವಸ್ತ್ರಗಳನ್ನು ವಿತರಣೆ ಮಾಡಲಾಯಿತು.

ಶಾಲೆಯ ಮುಖ್ಯಶಿಕ್ಷಕಿ ಸುಜಾತಮ್ಮ ಮಾತನಾಡಿ, ನಮ್ಮ ಶಾಲೆಯಲ್ಲಿ ಎಲ್.ಕೆ.ಜಿ.ಯಿಂದ 8 ನೇ ತರಗತಿಯವರೆಗೂ ಮಕ್ಕಳನ್ನು ದಾಖಲು ಮಾಡಿಕೊಳ್ಳಲಾಗುತ್ತಿದೆ. 1 ರಿಂದ 5 ನೇ ತರಗತಿಯವರೆಗೂ ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡಲಾಗುತ್ತಿದೆ.

6 ರಿಂದ 8ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ಬೋಧನೆ ಮಾಡಲಾಗುತ್ತಿದೆ. ಇಲಾಖೆಯ ನಿರ್ದೇಶನದಂತೆ, ಮಕ್ಕಳನ್ನು ಸರ್ವತೋಮುಖವಾಗಿ ಬೆಳೆಸಲು, ಪಠ್ಯಚಟುವಟಿಕೆಗಳು ಮಾತ್ರವಲ್ಲದೆ, ಪಠ್ಯೇತರ ಚಟುವಟಿಕೆಗಳ ಕಡೆಗೂ ನಾವು ಹೆಚ್ಚು ಗಮನಹರಿಸುತ್ತಿದ್ದೇವೆ. ಅದಕ್ಕೆ ಅಗತ್ಯವಾಗಿರುವ ವೇಳಾಪಟ್ಟಿಯನ್ನೂ ತಯಾರಿಸಿಕೊಂಡಿದ್ದೇವೆ.

ಈಗಾಗಲೇ ಕರಪತ್ರಗಳ ಮೂಲಕ, ಮನೆ,ಮನೆಗೆ ಹೋಗಿ ಮಕ್ಕಳನ್ನು ದಾಖಲು ಮಾಡುವಂತೆ ಪೋಷಕರಲ್ಲಿ ಮನವಿ ಮಾಡಿಕೊಂಡಿದ್ದೇವೆ. ಜಾಥಾ ಕಾರ್ಯಕ್ರಮಗಳನ್ನೂ ಮಾಡುತ್ತಿದ್ದೇವೆ. ಪೋಷಕರು ತಮ್ಮ ಮಕ್ಕಳನ್ನು ಸರಕಾರಿ ಶಾಲೆಗಳಿಗೆ ದಾಖಲು ಮಾಡಿ, ಸರಕಾರದಿಂದ ಸಿಗುವಂತಹ ಸೌಲಭ್ಯಗಳನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದರು. ಸಹಶಿಕ್ಷಕಿಯರಾದ ಜಲಜಾಕ್ಷಿ, ಪದ್ಮ, ಇದ್ದರು.

# ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ವಿರುದ್ಧ ದಾಳಿ



ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ಮಾರಾಟ ಹಾಗೂ ಸಂಗ್ರಹಣೆ ವಿರುದ್ಧ ಘನತ್ಯಾಜ್ಯ ನಿರ್ವಹಣಾ ವಿಭಾಗದ ಅಧಿಕಾರಿಗಳು ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ಒಟ್ಟು 1.26 ಲಕ್ಷ ರೂಪಾಯಿ ದಂಡ ವಸೂಲಿ ಮಾಡಲಾಗಿದ್ದು, 240 ಕೆಜಿಗೂ ಅಧಿಕ ಪ್ಲಾಸ್ಟಿಕ್ ಜಪ್ತಿ ಮಾಡಲಾಗಿದೆ.

ಬೃಹತ್ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಸಂಸ್ಥೆಯ ಮುಖ್ಯ ಕಾರ್ಯಾಚರಣೆ ಅಧಿಕಾರಿಗಳ ನಿರ್ದೇಶನದ ಮೇರೆಗೆ ದಕ್ಷಿಣ, ಉತ್ತರ ಹಾಗೂ ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಪ್ರದೇಶಗಳಲ್ಲಿ ಈ ಕಾರ್ಯಾಚರಣೆ ನಡೆಸಲಾಯಿತು.

ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಬಿಟಿಎಂ ಲೇಔಟ್ ಪ್ರದೇಶದಲ್ಲಿ ಅಧಿಕಾರಿಗಳು ನಡೆಸಿದ ದಾಳಿಯಲ್ಲಿ ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ಸಂಗ್ರಹಿಸಿಟ್ಟಿದ್ದ ಸುರೇಶ್ ಪ್ಯಾಕೇಜಿಂಗ್ ಸಂಸ್ಥೆಗೆ 10 ಸಾವಿರ ರೂ. ಹಾಗೂ ರಾಜಗುರು ಪ್ಯಾಕೇಜಿಂಗ್ ಸಂಸ್ಥೆಗೆ 10 ಸಾವಿರ ರೂ. ದಂಡ ವಿಧಿಸಲಾಯಿತು. ಜೊತೆಗೆ 15 ಕೆಜಿ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಯಿತು.

ಉತ್ತರ ನಗರ ಪಾಲಿಕೆ ವ್ಯಾಪ್ತಿಯ ಸರ್ವಜ್ಞನಗರದ ಕಮ್ಮನಹಳ್ಳಿಯಲ್ಲಿ ನಡೆದ ಕಾರ್ಯಾಚರಣೆಯಲ್ಲಿ 9 ಪ್ರಕರಣಗಳನ್ನು ದಾಖಲಿಸಿ, ಒಟ್ಟು 81 ಸಾವಿರ ರೂ. ದಂಡವನ್ನು ಸ್ಥಳದಲ್ಲೇ ವಸೂಲಿ ಮಾಡಲಾಯಿತು. ಅಲ್ಲದೆ 210 ಕೆಜಿ ನಿಷೇಧಿತ ಪ್ಲಾಸ್ಟಿಕ್ ಜಪ್ತಿ ಮಾಡಲಾಯಿತು.

ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ದೀಪಾಂಜಲಿನಗರದ ಮುತ್ತುಚಾರಿ ಕೈಗಾರಿಕಾ ಪ್ರದೇಶದಲ್ಲಿ ನಡೆದ ಕಾರ್ಯಾಚರಣೆಯಲ್ಲಿ 3 ಪ್ರಕರಣಗಳನ್ನು ದಾಖಲಿಸಿ, 25 ಸಾವಿರ ರೂ. ದಂಡ ವಿಧಿಸಲಾಯಿತು. ಜೊತೆಗೆ 15 ಕೆಜಿ ನಿಷೇಧಿತ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಯಿತು.

ಅಧಿಕಾರಿಗಳ ಮಾಹಿತಿ ಪ್ರಕಾರ, ನಗರದಲ್ಲಿ ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ಬಳಕೆ ಮತ್ತು ಮಾರಾಟವನ್ನು ಸಂಪೂರ್ಣವಾಗಿ ತಡೆಯುವ ಉದ್ದೇಶದಿಂದ ಇಂತಹ ಕಾರ್ಯಾಚರಣೆಗಳನ್ನು ಮುಂದುವರಿಸಲಾಗುವುದು. ಕಾರ್ಯಾಚರಣೆಯಲ್ಲಿ ಘನತ್ಯಾಜ್ಯ ನಿರ್ವಹಣಾ ವಿಭಾಗದ ಅಧಿಕಾರಿಗಳು, ಸಹಾಯಕ ಪ್ರಧಾನ ವ್ಯವಸ್ಥಾಪಕರು, ಮಾರ್ಷಲ್‌ಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

## ಬಿಡದಿ ಭೂಸ್ವಾಧೀನ ವಿರೋಧಿಸಿ ರಾಹುಲ್ ಗಾಂಧಿಗೆ ರೈತರ ಪತ್ರ ಚಳುವಳಿ

# ನಿಖಿಲ್ ಕುಮಾರಸ್ವಾಮಿ ಕರೆಗೆ ಸ್ಪಂದನೆ

ಬೆಂಗಳೂರು

ರಾಜ್ಯ ಸರ್ಕಾರದ ಪ್ರಸ್ತಾವಿತ ಬಿಡದಿ ಸಮಗ್ರ ಟೌನ್‌ಶಿಪ್‌ಕೃತಕ ಬುದ್ಧಿಮತ್ತೆ ನಗರ ಯೋಜನೆಗಾಗಿ ನಡೆಯುತ್ತಿರುವ ಭೂಸ್ವಾಧೀನ ಪ್ರಕ್ರಿಯೆಯನ್ನು ವಿರೋಧಿಸಿ ಬಿಡದಿ ಭಾಗದ ರೈತರು ಬೃಹತ್ ಪತ್ರ ಚಳುವಳಿಗೆ ಚಾಲನೆ ನೀಡಿದ್ದಾರೆ.

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಇತ್ತೀಚೆಗೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಪತ್ರ ಬರೆದು ಯೋಜನೆಯಲ್ಲಿ ಮಧ್ಯಪ್ರವೇಶಿಸುವಂತೆ ಮನವಿ ಮಾಡಿದ್ದರು. ಜೊತೆಗೆ ರೈತರು ಕೂಡ ತಮ್ಮ ಅಹವಾಲುಗಳನ್ನು ನೇರವಾಗಿ ರಾಹುಲ್ ಗಾಂಧಿ ಅವರಿಗೆ ತಲುಪಿಸುವಂತೆ ಕರೆ ನೀಡಿದ್ದರು.

ಈ ಹಿನ್ನೆಲೆಯಲ್ಲಿ ಬಿಡದಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ನೂರಕ್ಕೂ ಹೆಚ್ಚು ರೈತರು ರಾಹುಲ್ ಗಾಂಧಿ ಅವರಿಗೆ ಪತ್ರ ಬರೆದು, ಭೂಸ್ವಾಧೀನ ಪ್ರಕ್ರಿಯೆಯನ್ನು ತಕ್ಷಣ ಸ್ಥಗಿತಗೊಳಿಸುವಂತೆ ಒತ್ತಾಯಿಸಿದ್ದಾರೆ.

2013ರ ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ಸ್ಥಾಪನೆ ಕಾಯ್ದೆಯ ನಿಯಮಗಳನ್ನು ಸಮರ್ಪಕವಾಗಿ ಪಾಲಿಸದೆ, ಸಾರ್ವಜನಿಕ ವಿಚಾರಣೆ ಅಥವಾ ಗ್ರಾಮಸಭೆಗಳನ್ನು ನಡೆಸದೇ ಅಂತಿಮ ಅಧಿಸೂಚನೆ



ಹೊರಡಿಸಲಾಗಿದೆ ಎಂದು ಆರೋಪಿಸಲಾಗಿದೆ. ಯೋಜನೆಯಿಂದ ಬಾಧಿತರಾಗುತ್ತಿರುವವರಲ್ಲಿ ಬಹುಪಾಲು ಸಣ್ಣ ಮತ್ತು ಅತಿಸಣ್ಣ ರೈತರು, ದಲಿತರು ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದವರಾಗಿದ್ದು, ಅವರ ಜೀವನೋಪಾಯಕ್ಕೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ರಿಯಲ್ ಎಸ್ಟೇಟ್ ಅಭಿವೃದ್ಧಿಗೆ ಬಳಸುವ ಪ್ರಯತ್ನ ನಡೆಯುತ್ತಿದೆ ಎಂಬ ಆರೋಪವನ್ನೂ ಮುಂದಿರಿಸಲಾಗಿದೆ. ಈ ಯೋಜನೆಯ ಹಣಕಾಸು ಮತ್ತು ಅನುಷ್ಠಾನ ಪ್ರಕ್ರಿಯೆಗಳ ಬಗ್ಗೆ ಪಾರದರ್ಶಕತೆ ಅಗತ್ಯವಿದೆ ಎಂದು ರೈತರು ಒತ್ತಾಯಿಸಿದ್ದಾರೆ.

ರೈತರ ಪತ್ರ ಚಳುವಳಿಯಿಂದ ಬಿಡದಿ ಭೂಸ್ವಾಧೀನ ವಿರೋಧಿ ಹೋರಾಟ ಮತ್ತಷ್ಟು ಚುರುಕುಗೊಂಡಿದೆ. ಸರ್ಕಾರ ತಕ್ಷಣವೇ ಅಧಿಸೂಚನೆ ಹಿಂಪಡೆಯದಿದ್ದರೆ ಜೂನ್ 21ರಂದು ಹಳ್ಳಿಗಳಲ್ಲಿ ಬೃಹತ್ ಪಾದಯಾತ್ರೆ ನಡೆಸಿ, ಬಳಿಕ ವಿಧಾನಸೌಧದವರೆಗೆ ಪ್ರತಿಭಟನೆ ವಿಸ್ತರಿಸಲಾಗುವುದು ಎಂದು ಜೆಡಿಎಸ್ ಹಾಗೂ ರೈತ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಬಿಡದಿ ಟೌನ್‌ಶಿಪ್ ಯೋಜನೆ ಪರ ಮತ್ತು ವಿರೋಧದ ವಾದಗಳು ದಿನದಿಂದ ದಿನಕ್ಕೆ ತೀವ್ರವಾಗುತ್ತಿದ್ದು, ಅಭಿವೃದ್ಧಿ ಮತ್ತು ರೈತರ ಹಕ್ಕುಗಳ ನಡುವಿನ ಸಮತೋಲನದ ಪ್ರಶ್ನೆ ಇದೀಗ ರಾಜ್ಯ ರಾಜಕೀಯದ ಪ್ರಮುಖ ಚರ್ಚಾ ವಿಷಯವಾಗಿ ರೂಪುಗೊಳ್ಳುತ್ತಿದೆ.

# ವೇಶ್ಯಾವಾಟಿಕೆ ಅಡ್ಡೆ ಮೇಲೆ ದಾಳಿ

ಮಾಲೂರು

ನಗರದ ಬಾಲಾಜಿ ವೃತ್ತದ ಸಮೀಪ ಬಾಡಿಗೆ ಮನೆಯಲ್ಲಿ ನಡೆಸಲಾಗುತ್ತಿದ್ದ ವೇಶ್ಯಾವಾಟಿಕೆ ಅಡ್ಡೆಯ ಮೇಲೆ ಮಾಲೂರು ಪೊಲೀಸರು ದಾಳಿ ನಡೆಸಿ ನಾಲ್ವರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಂಡಿದ್ದಾರೆ.

ಬಾಲಾಜಿ ವೃತ್ತದ ಬಳಿ ಮಂಜುಳಮ್ಮ ಅವರ ಬಾಡಿಗೆ ಮನೆಯಲ್ಲಿ ಹೊರಗಡೆಯಿಂದ ಮಹಿಳೆಯರನ್ನು ಕರೆತಂದು ಪುರುಷರಿಂದ ಹಣ ಪಡೆದು ವೇಶ್ಯಾವಾಟಿಕೆ ನಡೆಸಲಾಗುತ್ತಿತ್ತು. ಈ ಬಗ್ಗೆ ಖಚಿತ ಮಾಹಿತಿ ಪಡೆದ ಮಾಲೂರು ಪೊಲೀಸ್ ಠಾಣೆಯ ಅಧಿಕಾರಿಗಳು ದಾಳಿ ನಡೆಸಿ ಅಕ್ರಮ ಚಟುವಟಿಕೆಯನ್ನು ಪತ್ತೆ ಹಚ್ಚಿದ್ದಾರೆ.

ಈ ವೇಳೆ ಅಡ್ಡೆಯಲ್ಲಿದ್ದ ಒಬ್ಬ ಮಹಿಳೆಯನ್ನು ರಕ್ಷಣೆ ಮಾಡಲಾಗಿದ್ದು, ವೇಶ್ಯಾವಾಟಿಕೆ ನಡೆಸುತ್ತಿದ್ದ ಹಾಗೂ ಅದರಲ್ಲಿ ಭಾಗಿಯಾಗಿದ್ದ ನಾಲ್ವರು ಆರೋಪಿಗಳನ್ನು ಬಂಧಿಸಲಾಗಿದೆ. ಅವರ ವಿರುದ್ಧ ಮಾಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು, ಆರೋಪಿಗಳಾದ ಮಂಜುಳ (36), ಕೃಷ್ಣ (24), ವಿಜಯಕುಮಾರ್ (27) ಹಾಗೂ ರಾಜೇಶ್ (30) ಎಂದು ಗುರುತಿಸಲಾಗಿದೆ. ಆರೋಪಿಗಳನ್ನು ನ್ಯಾಯಾಂಗ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ವೇಶ್ಯಾವಾಟಿಕೆ ಅಡ್ಡೆಯನ್ನು ಪತ್ತೆಹಚ್ಚಿ ಯಶಸ್ವಿ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಶ್ಲಾಘಿಸಿದ್ದಾರೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
19/06/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಇ–ಪೌತಿ ಖಾತಾ ಆಂದೋಲನ–2: ರೈತರಿಂದ ಅರ್ಜಿಗಳ ಸ್ವೀಕಾರ

ತುಮಕೂರು

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಬುಧವಾರ ಕೊರಟಗೆರೆ ತಾಲ್ಲೂಕಿನ ತುಂಬಾಡಿ ಗ್ರಾಮ ಹಾಗೂ ಮಧುಗಿರಿ ತಾಲ್ಲೂಕಿನ ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹಮ್ಮಿಕೊಂಡಿದ್ದ ಇ–ಪೌತಿ ಖಾತಾ ಆಂದೋಲನ–2 ಕಾರ್ಯಕ್ರಮದಲ್ಲಿ ಭಾಗವಹಿಸಿ ರೈತರಿಂದ ವಿವಿಧ ಕಂದಾಯ ಸೇವೆಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಸ್ವೀಕರಿಸಿದರು.

ನಂತರ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಕಂದಾಯ ಇಲಾಖೆಯ ಸೇವೆಗಳ ಕುರಿತು ಮಾಹಿತಿ ಪಡೆದು ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಸಿದ್ದಾಪುರ ಗ್ರಾಮದಲ್ಲಿ ಗ್ರಾಮಸ್ಥರೊಂದಿಗೆ ಕಂದಾಯ ಸೌಲಭ್ಯಗಳ ಕುರಿತು ಚರ್ಚಿಸಿದ ಸಂದರ್ಭದಲ್ಲಿ, ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಆರ್‌ಆರ್‌ಟಿ ಅರ್ಜಿಗಳ ವಿಲೇವಾರಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ ಸಾರ್ವಜನಿಕರು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು. ದೂರಿಗೆ ತಕ್ಷಣ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಉಪವಿಭಾಗಾಧಿಕಾರಿಗಳಿಗೆ ಬಾಕಿ ಇರುವ ಅರ್ಜಿಗಳನ್ನು ನಿಯಮಾನುಸಾರ ಆದ್ಯತೆಯ ಮೇರೆಗೆ ಶೀಘ್ರವಾಗಿ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದರು.



ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಮಧುಗಿರಿ ಪಟ್ಟಣದ ಸರ್ಕಾರಿ ಪಿಎಂಶ್ರೀ ಪ್ರಾಥಮಿಕ ಪಾಠಶಾಲೆಗೆ ಭೇಟಿ ನೀಡಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ವಿತರಿಸಲಾಗಿರುವ ಪಠ್ಯಪುಸ್ತಕಗಳ ಲಭ್ಯತೆ ಹಾಗೂ ಗುಣಮಟ್ಟವನ್ನು ಪರಿಶೀಲಿಸಿದರು. ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸೌಲಭ್ಯಗಳು ಸಮರ್ಪಕವಾಗಿ ದೊರೆಯುತ್ತಿರುವ ಬಗ್ಗೆ ಮಾಹಿತಿ ಪಡೆದು ಶಾಲಾ ಮುಖ್ಯ ಉಪಾಧ್ಯಾಯರೊಂದಿಗೆ ಚರ್ಚಿಸಿದರು.

ನಂತರ ಶಾಲೆಯ ಬೆಳಗಿನ ಉಪಾಹಾರ ಯೋಜನೆಯಡಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಹಾಲಿನ ಗುಣಮಟ್ಟ ಮತ್ತು ಪೌಷ್ಟಿಕತೆಯ ಬಗ್ಗೆ ಪರಿಶೀಲನೆ ನಡೆಸಿದರು. ಶಾಲೆಯ ಶೈಕ್ಷಣಿಕ ಚಟುವಟಿಕೆಗಳು ಹಾಗೂ ಪೌಷ್ಟಿಕ ಆಹಾರ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಶಿಕ್ಷಕರು ಮತ್ತು ಮುಖ್ಯೋಪಾಧ್ಯಾಯರಿಗೆ ಅಗತ್ಯ ಮಾರ್ಗದರ್ಶನ ಹಾಗೂ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಮಧುಗಿರಿ ಉಪ ವಿಭಾಗಾಧಿಕಾರಿ ಸೇರಿದಂತೆ ಕಂದಾಯ ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಜೂ.21ರಂದು "12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ"

ತುಮಕೂರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ಹಾಗೂ ಜಿಲ್ಲೆಯ ವಿವಿಧ ಇಲಾಖೆಗಳ ಸಹಯೋಗದಲ್ಲಿ ತುಮಕೂರು ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಜೂನ್ 21ರಂದು ಬೆಳಿಗ್ಗೆ 6.30 ರಿಂದ 8 ಗಂಟೆಯವರೆಗೆ "12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ–2026" ಕಾರ್ಯಕ್ರಮವನ್ನು "ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ಆಯೋಜಿಸಲಾಗಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಗಂಗಾಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

ತುಮಕೂರು

ಬೆಸ್ಕಾಂ ಶಿರಾ ನಗರ ಉಪವಿಭಾಗ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಂಡಿರುವುದರಿಂದ ಜೂನ್ 18ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಗೌಡಗೆರೆ, ಹೊಸೂರು, ಹುಣಸೆಹಳ್ಳಿ, ದ್ವಾರನಕುಂಟೆ, ಬೇವಿನಹಳ್ಳಿ, ಹುಲಿಕುಂಟೆ ಪಂಚಾಯ್ತಿಯ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

## ಸ್ವಯಂ ಸೇವಾ ಗೃಹರಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ತುಮಕೂರು

ತುಮಕೂರು ಜಿಲ್ಲೆಯ ವಿವಿಧ ಘಟಕಗಳಲ್ಲಿ ಖಾಲಿ ಇರುವ 234 ಸ್ವಯಂ ಸೇವಾ ಗೃಹರಕ್ಷಕ/ಗೃಹರಕ್ಷಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಗೃಹರಕ್ಷಕ ದಳದ ಸಂಸ್ಥೆಯು ಸ್ವಯಂ ಸೇವಕ ಸಂಸ್ಥೆಯಾಗಿದ್ದು, ಇದು ಖಾಯಂ ನೌಕರಿಯಾಗಿರುವುದಿಲ್ಲ. ಯಾವುದೇ ರೀತಿಯ ಮಾಸಿಕ ಸಂಬಳ / ವಿಶೇಷ ಭತ್ಯೆಗಳನ್ನು ಈ ಸಂಸ್ಥೆಯು ನೀಡುವುದಿಲ್ಲ. ನಿಯಮಾನುಸಾರ ತುರ್ತು ಸಂದರ್ಭದಲ್ಲಿ ಕರ್ತವ್ಯ, ಕಾನೂನು ಸುವ್ಯವಸ್ಥೆ, ಟ್ರಾಫಿಕ್ ಕರ್ತವ್ಯ ಹಾಗೂ ಚುನಾವಣೆ ಕರ್ತವ್ಯಗಳಿಗೆ ನಿಯೋಜಿಸಿದ ದಿನಗಳಂದು ಮಾತ್ರ ಗೌರವಧನವನ್ನು ಬ್ಯಾಂಕ್ ಉಳಿತಾಯ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು. ಪ್ರತೀ ಮಾಹೆಯಲ್ಲಿ 4 ಕವಾಯತುಗಳನ್ನು, ವಾರದಲ್ಲಿ ಒಂದರಂತೆ ನಡೆಸಲಾಗುವುದು.

ಗೃಹರಕ್ಷಕದಳಕ್ಕೆ ಸೇರ ಬಯಸುವ ಅಭ್ಯರ್ಥಿಗಳು ಜಿಲ್ಲಾ ಗೃಹರಕ್ಷಕದಳದ ಕಚೇರಿ, ಬಟವಾಡಿ, ತುಮಕೂರು(ಅಗ್ನಿಶಾಮಕ ಠಾಣೆ ಹತ್ತಿರ) ಇಲ್ಲಿ ಜೂನ್ 25ರೊಳಗಾಗಿ ಅರ್ಜಿಯನ್ನು ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ 10ನೇ ತರಗತಿ ಉತ್ತೀರ್ಣ ಅಥವಾ ಮೇಲ್ಪಟ್ಟು (ಅಂಕಪಟ್ಟಿ), ಜನ್ಮ ದಿನಾಂಕ ದೃಢೀಕರಣ(ಎಸ್.ಎಸ್.ಎಲ್.ಟಿ.ಸಿ.),3. ಆಧಾರ್‌ಕಾರ್ಡ್ ಮತ್ತು ಪಾನ್‌ಕಾರ್ಡ್, ವೋಟರ್ ಐ.ಡಿ., ರೇಷನ್‌ಕಾರ್ಡ್, ಪಾಸ್‌ಪೋರ್ಟ್ ಅಳತೆಯ 2 ಭಾವಚಿತ, ಪೋಸ್ಟ್‌ಕಾರ್ಡ್‌ನಲ್ಲಿ ಪೊಸ್ಟಲ್ ಪಿನ್ ಕೋಡ್‌ನೊಂದಿಗೆ ಸ್ಪಷ್ಟ ವಿಳಾಸವನ್ನು ನಮೂದಿಸಿ ಸಲ್ಲಿಸಬೇಕು. ದೈಹಿಕ ಸದೃಢತಾ ಪ್ರಮಾಣ ಪತ್ರ, ಎಸ್ ಬಿ ಐ ಬ್ಯಾಂಕ್ ಉಳಿತಾಯ ಖಾತೆಯ ನಕಲು ಪ್ರತಿಯನ್ನು ಲಗತ್ತಿಸಿ ಜೂನ್ 30ರೊಳಗಾಗಿ ಖುದ್ದಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0816–2009116ನ್ನು ಸಂಪರ್ಕಿಸಬೇಕೆಂದು ಗೃಹರಕ್ಷಕದಳದ ಜಿಲ್ಲಾ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೂಲಸೌಕರ್ಯಗಳ ಕೊರತೆ: ಎಬಿವಿಪಿ ಆಕ್ರೋಶ

ಚಿಕ್ಕನಾಯಕನಹಳ್ಳಿ

ತಾಲೂಕಿನ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ತೀವ್ರವಾಗಿದ್ದು, ವಿದ್ಯಾರ್ಥಿಗಳು ನಾನಾ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದು ಆರೋಪಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ವತಿಯಿಂದ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು.

ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಪೂರಕ ವಾತಾವರಣ ಕಲ್ಪಿಸುವಲ್ಲಿ ವಿದ್ಯಾರ್ಥಿ ನಿಲಯ ಆಡಳಿತ ಸಂಪೂರ್ಣ ವಿಫಲವಾಗಿದೆ ಎಂದು ಎಬಿವಿಪಿ ಮುಖಂಡರು ಆರೋಪಿಸಿದರು. ಸರ್ಕಾರದಿಂದ ವಿವಿಧ ಯೋಜನೆಗಳು ಹಾಗೂ ಅನುದಾನಗಳು ಬಿಡುಗಡೆಯಾಗುತ್ತಿದ್ದರೂ ಅವುಗಳ ಪ್ರಯೋಜನ ವಿದ್ಯಾರ್ಥಿಗಳಿಗೆ ತಲುಪುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಆಹಾರದ ಗುಣಮಟ್ಟ ಕಳಪೆಯಾಗಿದ್ದು, ಪೌಷ್ಟಿಕ ಆಹಾರ ವಿತರಣೆಯಲ್ಲಿ ನಿರ್ಲಕ್ಷ್ಯ ವಹಿಸಲಾಗುತ್ತಿದೆ ಎಂದು ದೂರಿದರು. ತಕ್ಷಣವೇ ಗುಣಮಟ್ಟದ ಹಾಗೂ ಪೌಷ್ಟಿಕ ಆಹಾರ ವಿತರಣೆ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ವಿದ್ಯಾರ್ಥಿ ನಿಲಯದಲ್ಲಿ ಸುರಕ್ಷತಾ ವ್ಯವಸ್ಥೆಯ ಕೊರತೆಯೂ ಗಂಭೀರ ಸಮಸ್ಯೆಯಾಗಿದೆ. ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸುತ್ತಿಲ್ಲ. ವಾಚ್‌ಮನ್ ಇಲ್ಲದ ಕಾರಣ ವಿದ್ಯಾರ್ಥಿಗಳಲ್ಲಿ ಭದ್ರತೆಯ ಆತಂಕ ಮನೆ ಮಾಡಿದೆ. ಯಾವುದೇ ಅನಾಹುತ ಸಂಭವಿಸಿದರೆ ಅದರ ಹೊಣೆ ಯಾರು ಎಂಬ ಪ್ರಶ್ನೆಯನ್ನು ಎಬಿವಿಪಿ ಎತ್ತಿದೆ.

ವಸತಿ ಕೊಠಡಿಗಳಲ್ಲಿ ಸಮರ್ಪಕ ಬೆಳಕು ಮತ್ತು ಗಾಳಿಯ ವ್ಯವಸ್ಥೆ ಇಲ್ಲದಿರುವುದು, ಫ್ಯಾನ್‌ಗಳು ದುರಸ್ತಿಯಲ್ಲಿರುವುದು ಹಾಗೂ ವಿದ್ಯುತ್ ಸ್ವಿಚ್ ಬಾಕ್ಸ್‌ಗಳು ಅಪಾಯಕಾರಿಯಾಗಿ ಇರುವುದರಿಂದ ವಿದ್ಯಾರ್ಥಿಗಳ ಸುರಕ್ಷತೆ ಪ್ರಶ್ನಾರ್ಹವಾಗಿದೆ ಎಂದು ತಿಳಿಸಿದರು.

## ಅಹವಾಲು ಸ್ವೀಕಾರ

ರಾಮನಗರ

ಬೆಂಗಳೂರು ದಕ್ಷಿಣ ಜಿಲ್ಲಾ ಲೋಕಾಯುಕ್ತ ಠಾಣಾ ಪೊಲೀಸ್ ಅಧಿಕಾರಿಗಳು ಜೂ. 18ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಹಾಗೂ ಜೂ. 19ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ರಾಮನಗರ ಟೌನ್‌ನಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ (ಆರ್.ಟಿ.ಓ) ಕಚೇರಿಯ ಆವರಣದಲ್ಲಿ ರಾಮನಗರ ತಾಲ್ಲೂಕು ವ್ಯಾಪ್ತಿಯ ಸಾರ್ವಜನಿಕರಿಂದ ಕುಂದುಕೊರತೆಗಳ ಅಹವಾಲುಗಳನ್ನು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿರುತ್ತಾರೆ.

ಅರ್ಜಿ ಸ್ವೀಕರಿಸಲು ಜೂ. 18 ಹಾಗೂ 19ರಂದು ರಾಮನಗರ ಟೌನ್‌ನಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ (ಆರ್.ಟಿ.ಓ) ಕಚೇರಿಯ ಆವರಣದಲ್ಲಿ ತಮ್ಮ ಲಿಖಿತ ದೂರು ಮತ್ತು ಸಂಬಂಧಿಸಿದ ದಾಖಲಾತಿ/ಗುರುತಿನ ಚೀಟಿಯೊಂದಿಗೆ ದ್ವಿಪ್ರತಿಯಲ್ಲಿ ಹಾಜರಾಗುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರ್ ರಾಜ್ಯ ವಿಕಿಬಾಲ್ ಕ್ರಿಕೆಟ್ ಟೂರ್ನಿ ಯಶಸ್ವಿ

ಬೂದಿಕೋಟೆ

ಹೋಬಳಿಯ ಗುಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೊಡ್ಡೋರು ಗ್ರಾಮದಲ್ಲಿ ಯುವಕರ ಬಳಗದ ವತಿಯಿಂದ ಆಯೋಜಿಸಲಾಗಿದ್ದ ಅಂತರ್ ರಾಜ್ಯ ಗ್ರಾಮೀಣ ಮಟ್ಟದ ವಿಕಿಬಾಲ್ ಕ್ರಿಕೆಟ್ ಪಂದ್ಯಾವಳಿ ಯಶಸ್ವಿಯಾಗಿ ಮುಕ್ತಾಯಗೊಂಡಿತು.

ಮೂರು ದಿನಗಳ ಕಾಲ ನಡೆದ ಈ ಕ್ರೀಡಾಕೂಟದಲ್ಲಿ ಕರ್ನಾಟಕ ಸೇರಿದಂತೆ ನೆರೆಯ ರಾಜ್ಯಗಳಿಂದ ಆಗಮಿಸಿದ್ದ ಒಟ್ಟು 39 ತಂಡಗಳು ಭಾಗವಹಿಸಿ ಕ್ರೀಡಾಭಿಮಾನಿಗಳಿಗೆ ರೋಚಕ ಪಂದ್ಯಗಳ ರಸದೌತಣ ನೀಡಿದವು. ಪ್ರತಿಯೊಂದು ಪಂದ್ಯವೂ ತೀವ್ರ ಪೈಪೋಟಿಯಿಂದ ಕೂಡಿದ್ದು, ಆಟಗಾರರು ತಮ್ಮ ಪ್ರತಿಭೆ, ಕೌಶಲ್ಯ ಮತ್ತು ಕ್ರೀಡಾಸ್ಫೂರ್ತಿಯನ್ನು ಪ್ರದರ್ಶಿಸಿದರು.



ಅಂತಿಮ ಹಣಾಹಣಿಯಲ್ಲಿ ಕದರೇನಹಳ್ಳಿ ತಂಡ ಅತ್ಯುತ್ತಮ ಪ್ರದರ್ಶನ ನೀಡಿ ಚಾಂಪಿಯನ್ ಪಟ್ಟ ಅಲಂಕರಿಸಿತು. ವಿಜೇತ ತಂಡಕ್ಕೆ ಜಲ್ಲಿಕಟ್ಟು ಎತ್ತು ಹಾಗೂ ರೂ.5,000 ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು. ಪಾತಾರಾಮಗೋಳು ತಂಡ ರನ್ನರ್ಸ್–ಅಪ್ ಸ್ಥಾನ ಪಡೆದಿದ್ದು, ಟಗರು ಬಹುಮಾನವಾಗಿ ನೀಡಲಾಯಿತು. ಮೂರನೇ ಸ್ಥಾನ ಪಡೆದ ಗುಟ್ಟೂರು ತಂಡಕ್ಕೆ ರೂ.7,001 ನಗದು ಬಹುಮಾನ ವಿತರಿಸಲಾಯಿತು.

ಬಹುಮಾನ ವಿತರಣಾ ಸಮಾರಂಭದಲ್ಲಿ ಮಾತನಾಡಿದ ಬೂದಿಕೋಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವಿ. ನಾಗರಾಜ್, ಗ್ರಾಮೀಣ ಪ್ರದೇಶಗಳಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಹೆಚ್ಚಿನ ಉತ್ತೇಜನ ನೀಡುವ ಅಗತ್ಯವಿದೆ ಎಂದು ಹೇಳಿದರು.

ಯುವಕರು ಕ್ರೀಡೆಯ ಮೂಲಕ ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸುವುದರ ಜೊತೆಗೆ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು. ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡೆಗಳು ಶಿಸ್ತು, ಏಕಾಗ್ರತೆ, ಆತ್ಮವಿಶ್ವಾಸ ಹಾಗೂ ತಂಡದ ಮನೋಭಾವವನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು.

ಗ್ರಾಮೀಣ ಮಟ್ಟದಲ್ಲಿ ಇಂತಹ ಕ್ರೀಡಾಕೂಟಗಳನ್ನು ಆಯೋಜಿಸುವುದರಿಂದ ಪ್ರತಿಭಾವಂತ ಆಟಗಾರರನ್ನು ಗುರುತಿಸಿ ಅವರಿಗೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ಅವಕಾಶಗಳನ್ನು ಕಲ್ಪಿಸಲು ಸಾಧ್ಯವಾಗುತ್ತದೆ. ಕ್ರೀಡೆಗಳು ಯುವ ಸಮುದಾಯವನ್ನು ಸಕಾರಾತ್ಮಕ ಚಟುವಟಿಕೆಗಳತ್ತ ಸೆಳೆಯುವ ಪರಿಣಾಮಕಾರಿ ಮಾಧ್ಯಮವಾಗಿವೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಗೋವಿಂದಗೌಡ, ಅಂಗಡಿ ನಾಗರಾಜ್, ವೆಂಕಟೇಗೌಡ, ಅಯ್ಯಪ್ಪ, ಪ್ರದೀಪ್, ಈಶ್ವರ್, ಸುರೇಶ್, ಶಿವು, ರಾಮಕೃಷ್ಣ, ಯೋಧ ಶ್ರೀನಿವಾಸ್, ಪ್ರಕಾಶ್, ಮುನಿರಾಜ್, ಶ್ರೀನಿವಾಸ್, ಜಿ. ವೆಂಕಟಸ್ವಾಮಿ, ಅಂಬರೀಶ್, ರಮೇಶ್, ನಾರಾಯಣಸ್ವಾಮಿ ಸೇರಿದಂತೆ ಅನೇಕ ಗಣ್ಯರು, ಕ್ರೀಡಾಭಿಮಾನಿಗಳು ಹಾಗೂ ಯುವಕರು ಉಪಸ್ಥಿತರಿದ್ದರು.

## ವಿಪತ್ತು ನಿರ್ವಹಣಾ ತರಬೇತಿಗೆ ಚಾಲನೆ

ಬೆಂಗಳೂರು

ಸಾರ್ವಜನಿಕ ಆರೋಗ್ಯ ತುರ್ತುಸ್ಥಿತಿ ಹಾಗೂ ವಿಪತ್ತು ನಿರ್ವಹಣಾ ಸಾಮರ್ಥ್ಯ ವೃದ್ಧಿಸುವ ಉದ್ದೇಶದಿಂದ ಆಯೋಜಿಸಲಾದ ವೃತ್ತಿಪರ ಅಭಿವೃದ್ಧಿ ಕಾರ್ಯಕ್ರಮದ ಪ್ರಥಮ ಹಂತದ ತರಬೇತಿ ಶಿಬಿರವು ಜೂನ್ 17ರಿಂದ 19ರವರೆಗೆ ಬೆಂಗಳೂರಿನಲ್ಲಿ ನಡೆಯುತ್ತಿದೆ.



ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಅಧೀನದ ರಾಷ್ಟ್ರೀಯ ರೋಗ ನಿಯಂತ್ರಣ ಕೇಂದ್ರ, ಆರೋಗ್ಯ ಸೇವೆಗಳ ಮಹಾನಿರ್ದೇಶನಾಲಯ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಸಂಸ್ಥೆ, ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಅಮೆರಿಕದ ರೋಗ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಕೇಂದ್ರದ ಸಹಯೋಗದಲ್ಲಿ ಈ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬೆಂಗಳೂರು ವಿಭಾಗದ ಒಂಬತ್ತು ಜಿಲ್ಲೆಗಳು ಹಾಗೂ ಐದು ಮಹಾನಗರ ಪಾಲಿಕೆಗಳ ಅಧಿಕಾರಿಗಳನ್ನು ಒಳಗೊಂಡಿರುವ ಈ ತರಬೇತಿ ಕಾರ್ಯಕ್ರಮವು ಕರ್ನಾಟಕದಲ್ಲಿ ಆಯೋಜಿಸಲಾಗುತ್ತಿರುವ ನಾಲ್ಕು ತರಬೇತಿ ಬ್ಯಾಚ್‌ಗಳ ಪೈಕಿ ಮೊದಲನೆಯದಾಗಿದೆ.

ಕಾರ್ಯಕ್ರಮದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಭಿಯಾನ ನಿರ್ದೇಶಕರಾದ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ವಹಿಸಿದ್ದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕರಾದ ಡಾ.ರಜಿನಿ ಎಂ., ಸಮಗ್ರ ರೋಗ ಮೇಲ್ವಿಚಾರಣಾ ಕಾರ್ಯಕ್ರಮದ ಮುಖ್ಯಸ್ಥ ಹಾಗೂ ಅಪರ ನಿರ್ದೇಶಕರಾದ ಡಾ.ಹಿಮಾಂಶು ಚೌಹಾಣ್, ಗ್ಲೋಬಲ್ ಹೆಲ್ತ್ ಪ್ರೊಟೆಕ್ಷನ್ ವಿಭಾಗದ ಉಪ ನಿರ್ದೇಶಕರಾದ ವಿಲಿಯಂ ಅಬ್ರಾಮ್ಸ್, ಪ್ರಾದೇಶಿಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯ ಹಿರಿಯ ಪ್ರಾದೇಶಿಕ ನಿರ್ದೇಶಕರಾದ ಡಾ. ಸಿತಾ ರಾವತ್, ರಾಜ್ಯ ನೋಡಲ್ ಅಧಿಕಾರಿಯಾದ ಡಾ. ಇಂದಿರಾ ಆರ್. ಕಬಾಡೆ ಹಾಗೂ ಸಾರ್ವಜನಿಕ ಆರೋಗ್ಯ ತಜ್ಞರಾದ ಡಾ. ರಜತ್ ಗರ್ಗ್ ಉಪಸ್ಥಿತರಿದ್ದರು.

ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಸಾರ್ವಜನಿಕ ಆರೋಗ್ಯ ತುರ್ತುಸ್ಥಿತಿ ಮತ್ತು ವಿಪತ್ತು ನಿರ್ವಹಣೆಗೆ ಸಂಬಂಧಿಸಿದ ಕರ್ತವ್ಯಗಳು, ಜವಾಬ್ದಾರಿಗಳು ಹಾಗೂ ಅಗತ್ಯ ಕೌಶಲ್ಯಗಳ ಕುರಿತು ಸಮಗ್ರ ಅರಿವು ಮೂಡಿಸುವ ಉದ್ದೇಶದಿಂದ ಈ ತರಬೇತಿಯನ್ನು ರೂಪಿಸಲಾಗಿದೆ.

'ಮಾರ್ಗದರ್ಶಕ ಪ್ರಶಿಕ್ಷಣಾರ್ಥಿ' ಪರಿಕಲ್ಪನೆಯಡಿ ನಡೆಯುತ್ತಿರುವ ತರಬೇತಿಯಲ್ಲಿ ತಾಂತ್ರಿಕ ಅಧಿವೇಶನಗಳು, ಪ್ರಶ್ನೋತ್ತರ ಕಾರ್ಯಕ್ರಮಗಳು, ಗುಂಪು ಚಟುವಟಿಕೆಗಳು, ಪ್ರಕರಣ ಅಧ್ಯಯನಗಳು ಹಾಗೂ ಅನುಕರಣಾತ್ಮಕ ಅಭ್ಯಾಸಗಳನ್ನು ಒಳಗೊಂಡಿದ್ದು, ಭಾಗವಹಿಸುವವರಿಗೆ ಪ್ರಾಯೋಗಿಕ ಅನುಭವ ಒದಗಿಸುವ ಮೂಲಕ ಕಾರ್ಯಕ್ಷಮತೆ ಹೆಚ್ಚಿಸುವ ಗುರಿ ಹೊಂದಿದೆ.

ತರಬೇತಿ ಕಾರ್ಯಕ್ರಮದಲ್ಲಿ ಆರೋಗ್ಯ, ವಿಪತ್ತು ನಿರ್ವಹಣೆ, ಪಶುಸಂಗೋಪನೆ ಸೇರಿದಂತೆ ವಿವಿಧ ಇಲಾಖೆಗಳ ಒಟ್ಟು 30 ಪ್ರತಿನಿಧಿಗಳು ಭಾಗವಹಿಸಿದ್ದು, ಅವರಲ್ಲಿ 9 ಮಂದಿ ಮಾರ್ಗದರ್ಶಕರು ಹಾಗೂ 21 ಮಂದಿ ಪ್ರಶಿಕ್ಷಣಾರ್ಥಿಗಳಾಗಿದ್ದಾರೆ.

ಈ ಕಾರ್ಯಕ್ರಮವು ತುರ್ತು ಆರೋಗ್ಯ ಪರಿಸ್ಥಿತಿಗಳನ್ನು ಸಮರ್ಥವಾಗಿ ಎದುರಿಸಲು ಅಗತ್ಯ ಮಾನವ ಸಂಪನ್ಮೂಲ ಸಾಮರ್ಥ್ಯವನ್ನು



ತಿಪಟೂರು ತಾಲೂಕಿನ ನೊಣವಿನಕೆರೆಯ ಕೆಪಿಎಸ್ ಪ್ರೌಢಶಾಲೆಯ ಸುಮಾರು 300 ವಿದ್ಯಾರ್ಥಿಗಳಿಗೆ ನಗರದ ಶ್ರೀ ಚೌಡೇಶ್ವರಿ ಸೌಹಾರ್ದ ಪತ್ತಿನ ಸಹಕಾರ ಸಂಘ ಮತ್ತು ಶ್ರೀ ಚಾಮುಂಡೇಶ್ವರಿ ಸೌಹಾರ್ದ ಪತ್ತಿನ ಸಹಕಾರ ಸಂಘ ನಿಯಮಿತದ ವತಿಯಿಂದ ಉಚಿತವಾಗಿ ನೋಟ್ ಬುಕ್‌ಗಳನ್ನು ವಿತರಿಸಲಾಯಿತು. ಶ್ರೀ ಚೌಡೇಶ್ವರಿ ಸೌಹಾರ್ದ ಪತ್ತಿನ ಸಹಕಾರ ಸಂಘ ನಿಯಮಿತದ ಅಧ್ಯಕ್ಷ ಎಸ್.ಸೋಮಶೇಖರ, ಉಪಾಧ್ಯಕ್ಷ ಎಂ.ಸಿ.ಮಂಜುನಾಥ್, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎ.ಸಿ.ಮೃತ್ಯುಂಜಯ ಹಾಗೂ ಶ್ರೀ ಚಾಮುಂಡೇಶ್ವರಿ ಸೌಹಾರ್ದ ಪತ್ತಿನ ಸಹಕಾರಿ ಸಂಘ ನಿಯಮಿತದ ಅಧ್ಯಕ್ಷೆ ವಿಶಾಲ ಸೋಮಶೇಖರ್ ಸೇರಿದಂತೆ ನಿರ್ದೇಶಕರು, ಸಿಬ್ಬಂದಿ, ಶಾಲಾ ಶಿಕ್ಷಕ ವೃಂದ, ಪೋಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಪೋಸ್ಟರ್ ಅಪಪ್ರಚಾರಕ್ಕೆ ಹೆಚ್‌ಡಿಕೆ ಕಿಡಿ

ಬೆಂಗಳೂರು

ಬಿಡದಿ ಟೌನ್‌ಶಿಪ್ ವಿಚಾರವಾಗಿ ತಮ್ಮ ಹಾಗೂ ಕುಟುಂಬದ ವಿರುದ್ಧ ಪೋಸ್ಟರ್‌ಗಳ ಮೂಲಕ ಅಪಪ್ರಚಾರ ನಡೆಸಲಾಗುತ್ತಿದೆ ಎಂದು ಆರೋಪಿಸಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಬೆಂಗಳೂರಿನ ನಿವಾಸದ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಡದಿ ಭಾಗದಲ್ಲಿ ತಮ್ಮ ಹಾಗೂ ಕುಟುಂಬದ ವಿರುದ್ಧ ಪೋಸ್ಟರ್ ಅಂಟಿಸಿರುವ ಮಾಹಿತಿ ಲಭ್ಯವಾಗಿದ್ದು, ಮುಖ್ಯಮಂತ್ರಿ ಸ್ಥಾನಕ್ಕೇರಿದ ನಂತರವಾದರೂ ಇಂತಹ ಚಟುವಟಿಕೆಗಳನ್ನು ಬಿಡುತ್ತಾರೆ ಎಂದುಕೊಂಡಿದ್ದೆ. ಆದರೆ ಆ ಹಳೆಯ ಚಾಳಿ ಇನ್ನೂ ಮುಂದುವರಿದಿದೆ ಎಂದು ಆರೋಪಿಸಿದರು.

"ವೈಯಕ್ತಿಕವಾಗಿ ಅಪಪ್ರಚಾರ ಮಾಡಿದರೆ ನಾನು ಕುಗ್ಗುವ ವ್ಯಕ್ತಿಯಲ್ಲ. ಇಂತಹ ಪ್ರಯತ್ನಗಳು ನನ್ನ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸುತ್ತವೆ. ಕೈಲಾಗದವರ ಕೊನೆಯ ಅಸ್ತ್ರವೇ ಅಪಪ್ರಚಾರ" ಎಂದು ಕುಮಾರಸ್ವಾಮಿ ಹೇಳಿದರು.

ಪೋಸ್ಟರ್‌ಗಳಲ್ಲಿ ತಮ್ಮ ಪತ್ನಿಯ ಚಿತ್ರ ಬಳಸಿರುವುದನ್ನು ಖಂಡಿಸಿದ ಅವರು, "ನನ್ನ ಹೆಸರಿನಲ್ಲಿ 100 ಎಕರೆ ಭೂಮಿ ಇದೆ ಎಂದು ಬರೆದಿದ್ದಾರೆ. ಆದರೆ ನನ್ನ ಹೆಸರಿನಲ್ಲಿ ಸುಮಾರು 46 ಎಕರೆ ಜಮೀನು ಮಾತ್ರ ಇದೆ. ಅದು ಕೂಡ ನಾಲ್ಕು ದಶಕಗಳ ಹಿಂದೆ ಖರೀದಿಸಿದ ಭೂಮಿ. ನನ್ನ ಪತ್ನಿ ಅನಿತಾ ಕುಮಾರಸ್ವಾಮಿ ಅವರು ಪ್ರತ್ಯೇಕವಾಗಿ ಭೂಮಿ ಖರೀದಿಸಿದ್ದಾರೆ. ವಾಸ್ತವಾಂಶಗಳನ್ನು ತಿರುಚಿ ಜನರನ್ನು ದಾರಿ ತಪ್ಪಿಸುವ ಕೆಲಸ ನಡೆಯುತ್ತಿದೆ" ಎಂದು ಹೇಳಿದರು.



ಬೆನ್ನಿಗಾನಹಳ್ಳಿ ಡಿನೋಟಿಫಿಕೇಷನ್ ಪ್ರಕರಣವನ್ನು ಉಲ್ಲೇಖಿಸಿದ ಕುಮಾರಸ್ವಾಮಿ, "ಸತ್ತವರ ಹೆಬ್ಬೆರಳು ಗುರುತು ಬಳಸಿ ಭೂಮಿ ಲಪಟಾಯಿಸಿದ ಆರೋಪಗಳು ಯಾರ ಮೇಲೆ ಇದ್ದವೋ, ಅವರೇ ಇಂದು ಇತರರ ವಿರುದ್ಧ ಪೋಸ್ಟರ್‌ಗಳ ಮೂಲಕ ಪ್ರಚಾರ ಮಾಡುತ್ತಿದ್ದಾರೆ" ಎಂದು ಟೀಕಿಸಿದರು.

"ಆರಂಭದಿಂದಲೂ ಪೋಸ್ಟರ್ ಅಂಟಿಸುವುದು, ಅಪಪ್ರಚಾರ ನಡೆಸುವುದು ಕೆಲವರ ರಾಜಕೀಯ ಶೈಲಿಯಾಗಿದೆ. ಮುಖ್ಯಮಂತ್ರಿ ಸ್ಥಾನದಲ್ಲಿರುವ ವ್ಯಕ್ತಿಗೆ ಒಂದು ಮಟ್ಟದ ಜವಾಬ್ದಾರಿ ಇರಬೇಕು. ತಪ್ಪು ಮಾಡಿದ್ದರೆ ಕಾನೂನು ಕ್ರಮ ಕೈಗೊಳ್ಳಲಿ. ಅದನ್ನು ಬಿಟ್ಟು ಪೋಸ್ಟರ್ ರಾಜಕೀಯ ಮಾಡುವುದು ಸರಿಯಲ್ಲ" ಎಂದು ಅವರು ಹೇಳಿದರು.

ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ ಹಾಗೂ ಬಿ.ವೈ. ವಿಜಯೇಂದ್ರ ಅವರ ವಿರುದ್ಧವೂ ಇದೇ ರೀತಿಯ ಪೋಸ್ಟರ್‌ಗಳನ್ನು ಅಂಟಿಸಲಾಗಿದೆ ಎಂದು ಅವರು ಆರೋಪಿಸಿದರು.

"ನನ್ನ ಬದುಕು ತೆರೆದ ಪುಸ್ತಕ. ಜನರಿಗೆ ನನ್ನ ಬಗ್ಗೆ ಚೆನ್ನಾಗಿ ಗೊತ್ತಿದೆ. ಇಂತಹ ಪೋಸ್ಟರ್‌ಗಳು ಅಥವಾ ಬೆದರಿಕೆಗಳಿಗೆ ನಾನು ಹೆದರುವ ಪ್ರಶ್ನೆಯೇ ಇಲ್ಲ. ಜನರ ಹಾಗೂ ರೈತರ ಪರ ಹೋರಾಟ ಮುಂದುವರಿಯುತ್ತದೆ" ಎಂದು ಕುಮಾರಸ್ವಾಮಿ ಹೇಳಿದರು.

ಬಿಡದಿ ಟೌನ್‌ಶಿಪ್ ಯೋಜನೆ ತಮ್ಮ ಮುಖ್ಯಮಂತ್ರಿತ್ವದ ಅವಧಿಯಲ್ಲಿ ಪ್ರಸ್ತಾಪವಾಗಿದ್ದು ನಿಜ. ಆದರೆ ಸ್ಥಳೀಯರ ವಿರೋಧದ ಹಿನ್ನೆಲೆಯಲ್ಲಿ ಅದನ್ನು ಕೈಬಿಡಲಾಗಿತ್ತು. ಜನರಿಗೆ ಬೇಡವಾದ ಯೋಜನೆಯನ್ನು ಬಲವಂತವಾಗಿ ಜಾರಿಗೊಳಿಸಲು ನಾನು ಮುಂದಾಗಲಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

# ಅದ್ದೂರಿಯಾಗಿ ಜರುಗಿದ ಶ್ರೀ ಯಲ್ಲಮ್ಮದೇವಿ ಜಾತ್ರಾ ಮಹೋತ್ಸವ

ತಿಪಟೂರು

ನಗರದ ವಿವೇಕಾನಂದ ನಗರದಲ್ಲಿರುವ ಶ್ರೀ ಯಲ್ಲಮ್ಮ ದೇವಿ, ಶ್ರೀ ಚಿಕ್ಕಮ್ಮ ದೇವಿ ಹಾಗೂ ಶ್ರೀ ಮಾರಮ್ಮ ದೇವಿ ದೇವಸ್ಥಾನಗಳ 19ನೇ ವರ್ಷದ ಜಾತ್ರಾ ಮಹೋತ್ಸವವು ಭಕ್ತಿ, ಸಂಭ್ರಮ ಮತ್ತು ವೈಭವದೊಂದಿಗೆ ಅದ್ದೂರಿಯಾಗಿ ಜರುಗಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಧ್ವಜಾರೋಹಣ, ರಂಗೋಲಿ ಸ್ಪರ್ಧೆ ಹಾಗೂ ರಾಜಬೀದಿಗಳಲ್ಲಿ ವಿದ್ಯುತ್ ದೀಪಾಲಂಕಾರ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಬೆನ್ನನಾಯಕನಹಳ್ಳಿಯಿಂದ ಮಾತಂಗಿಯಲ್ಲಮ್ಮ ದೇವಿ, ಶ್ರೀ ಕರಿಯಮ್ಮ ದೇವಿ ಹಾಗೂ ಶ್ರೀ ಧೂತರಾಯ ಸ್ವಾಮಿಗಳ ಆಗಮನದೊಂದಿಗೆ ಜಾತ್ರೆಯ ಧಾರ್ಮಿಕ ವಿಧಿವಿಧಾನಗಳಿಗೆ ಚಾಲನೆ ದೊರೆಯಿತು.



ರಾತ್ರಿ ಮಧುವಣಗಿತ್ತಿ ಕಾರ್ಯಕ್ರಮ ಹಾಗೂ ಬೆಳಿಗ್ಗೆ ಗ್ರಾಮದೇವತೆ ಕೆಂಪಮ್ಮ ದೇವಿಯ ಗಂಗಾಪೂಜೆಯೊಂದಿಗೆ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆದವು. ಬಳಿಕ ದುರ್ಗಾ ಹೋಮ, ಪೂರ್ಣಾಹುತಿ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು. ಮಧ್ಯಾಹ್ನ ಭಕ್ತಾದಿಗಳಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದ್ದು, ಸಾವಿರಾರು ಭಕ್ತರು ಪಾಲ್ಗೊಂಡು ಪ್ರಸಾದ ಸ್ವೀಕರಿಸಿದರು.

ಸಂಜೆ ದೇವರುಗಳಿಗೆ ಮಡಿಲಕ್ಕಿ ಸೇವೆ ಸಲ್ಲಿಸಲಾಯಿತು. ಶ್ರೀ ಕೊಲ್ಲಾಪುರದಮ್ಮ ದೇವಿ, ಶ್ರೀ ಚಿಕ್ಕಮ್ಮ ದೇವಿ ಹಾಗೂ ಶ್ರೀ ಧೂತರಾಯ ಸ್ವಾಮಿಯವರ ಆಗಮನದೊಂದಿಗೆ ಆರತಿ, ಎಡೆ ಸೇವೆ ಸೇರಿದಂತೆ ವಿವಿಧ ಧಾರ್ಮಿಕ ಆಚರಣೆಗಳು ಭಕ್ತಿಭಾವದಿಂದ ನೆರವೇರಿದವು.

ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ್ದ ಡಾ. ಶ್ರೀಧರ್, ಜೆಡಿಎಸ್ ಮುಖಂಡ ಕೆ.ಟಿ. ಶಾಂತಕುಮಾರ್, ಜಿ. ನಾರಾಯಣ್, ಕೆಪಿಸಿಸಿ ಸದಸ್ಯ ಯೋಗೇಶ್ ಸೇರಿದಂತೆ ಹಲವು ಗಣ್ಯರನ್ನು ಸನ್ಮಾನಿಸಿ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ದೇವರುಗಳ ಅದ್ದೂರಿ ಉತ್ಸವ, ಮದ್ದಿನ ಪ್ರದರ್ಶನ ಹಾಗೂ ಮಣೇವು ಕಾರ್ಯಕ್ರಮಗಳು ಜನರ ಗಮನ ಸೆಳೆದವು. ಮೂರು ದಿನಗಳ ಕಾಲ ನಡೆದ ಜಾತ್ರಾ ಮಹೋತ್ಸವದಲ್ಲಿ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡು ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ಜಾತ್ರೆಯು ಭಕ್ತಿ, ಸಂಪ್ರದಾಯ ಮತ್ತು ಸಮುದಾಯದ ಐಕ್ಯತೆಯ ಸಂಕೇತವಾಗಿ ಯಶಸ್ವಿಯಾಗಿ ಸಂಪನ್ನಗೊಂಡಿತು.

# ವೃದ್ಧೆಯ ಬರ್ಬರ ಹತ್ಯೆ

ತುಮಕೂರು

ತೋಟಕ್ಕೆ ವಾಕಿಂಗ್‌ಗೆಂದು ತೆರಳಿದ್ದ ವೃದ್ಧೆಯನ್ನು ಭೀಕರವಾಗಿ ಕೊಲೆ ಮಾಡಿರುವ ಘಟನೆ ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಸಿಎನ್ ದುರ್ಗದ ದಾಸಲುಕುಂಟೆಯಲ್ಲಿ ನಡೆದಿದೆ.

ರತ್ನಮ್ಮ (74) ಕೊಲೆಯಾದ ವೃದ್ಧೆ. ರತ್ನಮ್ಮ ಮಂಗಳವಾರ ಸಂಜೆ ವಾಕಿಂಗ್‌ಗೆಂದು ತೆರಳಿದ್ದು, ರಾತ್ರಿಯಾದರೂ ಮನೆಗೆ ವಾಪಸ್ ಆಗಿರಲಿಲ್ಲ. ಈ ಹಿನ್ನೆಲೆ ಅನುಮಾನಗೊಂಡ ಸೊಸೆ ಭಾಗ್ಯಮ್ಮ ಹಾಗೂ ಊರಿನ ಜನರು ರತ್ನಮ್ಮನಿಗಾಗಿ ಹುಡುಕಾಡಿದ್ದಾರೆ. ಈ ವೇಳೆ ಮನೆಯಿಂದ ಒಂದು ಕಿ.ಮಿ ದೂರದ ತೋಟದ ಮನೆ ಬಳಿ ರತ್ನಮ್ಮ ಶವವಾಗಿ ಪತ್ತೆಯಾಗಿದ್ದಾರೆ.

ಕಳೆದ ಮೂರು ವರ್ಷದ ಹಿಂದೆ ರತ್ನಮ್ಮ ತಮ್ಮ ಪತಿ ಮುದ್ದಬಸಪ್ಪರನ್ನು ಕಳೆದುಕೊಂಡಿದ್ದರು. ಬಳಿಕ ಸೊಸೆ ಭಾಗ್ಯಮ್ಮ ಜೊತೆ ವಾಸವಾಗಿದ್ದರು.

ರತ್ನಮ್ಮ ಪ್ರತಿದಿನ ಸಂಜೆ ತೋಟಕ್ಕೆ ವಾಕಿಂಗ್‌ಗೆ ತೆರಳುತಿದ್ದರು. ಅದೇ ರೀತಿ ಮಂಗಳವಾರ ತೆರಳಿದಾಗ ಹತ್ಯೆ ಮಾಡಲಾಗಿದೆ. ಕೈ ಕಾಲು ಕಟ್ಟಿ ಬಾಯಿಗೆ ಬಟ್ಟೆ ಸುತ್ತಿ ರತ್ನಮ್ಮನನ್ನು ಕೊಲೆ ಮಾಡಲಾಗಿದೆ. ಮೈಮೇಲಿದ್ದ ಚಿನ್ನಕ್ಕಾಗಿ ರತ್ನಮ್ಮನ್ನು ಹತ್ಯೆ ಮಾಡಿರುವ ಶಂಕೆ ವ್ಯಕ್ತವಾಗಿದೆ.

ಘಟನೆ ಸಂಬಂಧ ಕೊರಟಗೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸದ್ಯ ರತ್ನಮ್ಮ ಮೃತದೇಹವನ್ನು ಮರಣೊತ್ತರ ಪರಿಕ್ಷೆಗೆಂದು ಆಸ್ಪತ್ರೆಗೆ ರವಾನಿಸಲಾಗಿದ್ದು, ಹಂತಕನಿಗಾಗಿ ಪೊಲೀಸರು ಬಲೆ ಬೀಸಿದ್ದಾರೆ.

# ನೀಟ್ ಮರು ಪರೀಕ್ಷೆ: ಕಟ್ಟುನಿಟ್ಟಿನ ಸಿದ್ಧತೆಗೆ ಅಪರ ಜಿಲ್ಲಾಧಿಕಾರಿ ಸೂಚನೆ

ತುಮಕೂರು

ನೀಟ್ (ಯುಜಿ) 2026ರ ಮರು ಪರೀಕ್ಷೆಯನ್ನು ಜೂನ್ 21ರಂದು ಜಿಲ್ಲೆಯ 13 ಪರೀಕ್ಷಾ ಕೇಂದ್ರಗಳಲ್ಲಿ ಸುಸೂತ್ರವಾಗಿ, ಪಾರದರ್ಶಕವಾಗಿ ಹಾಗೂ ಯಾವುದೇ ಲೋಪದೋಷಗಳಿಗೆ ಅವಕಾಶವಿಲ್ಲದಂತೆ ನಡೆಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್. ತಿಪ್ಪೇಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೀಟ್ ಪರೀಕ್ಷೆಯು ರಾಷ್ಟ್ರ ಮಟ್ಟದಲ್ಲಿ ಅತ್ಯಂತ ಮಹತ್ವದ್ದಾಗಿರುವುದರಿಂದ ಯಾವುದೇ ರೀತಿಯ ನಿರ್ಲಕ್ಷ್ಯ ಅಥವಾ ಅಸಮರ್ಪಕತೆಗೆ ಅವಕಾಶ ನೀಡಬಾರದು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.



ಪ್ರಶ್ನೆಪತ್ರಿಕೆಗಳನ್ನು ವಾಯುಪಡೆಯ ಭದ್ರತೆಯಲ್ಲಿ ತರಲಾಗುತ್ತಿರುವ ಹಿನ್ನೆಲೆಯಲ್ಲಿ ಭದ್ರತಾ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕು ಎಂದು ಅವರು ತಿಳಿಸಿದರು. ಇತ್ತೀಚಿನ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳನ್ನು ಗಮನದಲ್ಲಿಟ್ಟುಕೊಂಡು, ಪರೀಕ್ಷೆಗೆ ಸಂಬಂಧಿಸಿದ ಅಕ್ರಮಗಳನ್ನು ತಡೆಗಟ್ಟುವ ಉದ್ದೇಶದಿಂದ ಟೆಲಿಗ್ರಾಂ ಸೇರಿದಂತೆ ಕೆಲವು ಸಾಮಾಜಿಕ ಜಾಲತಾಣಗಳ ಬಳಕೆಯ ಮೇಲೂ ನಿಯಂತ್ರಣ ಕ್ರಮಗಳನ್ನು ಜಾರಿಗೊಳಿಸಲಾಗಿದೆ ಎಂದು ಹೇಳಿದರು.

ಪರೀಕ್ಷಾ ದಿನದಂದು ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಪೊಲೀಸ್ ಭದ್ರತೆಯನ್ನು ಕಡ್ಡಾಯವಾಗಿ ಒದಗಿಸಬೇಕು. ತುರ್ತು ಪರಿಸ್ಥಿತಿಗಳನ್ನು ಎದುರಿಸಲು ಆಂಬುಲೆನ್ಸ್ ವ್ಯವಸ್ಥೆಯನ್ನು ಸಜ್ಜುಗೊಳಿಸಬೇಕು.

ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ತೊಂದರೆ ಆಗದಂತೆ ನಗರ ಸಾರಿಗೆ, ವಿಶೇಷವಾಗಿ ನಗರ ಬಸ್‌ಗಳ ಸಂಚಾರವನ್ನು ಸಮರ್ಪಕವಾಗಿ ವ್ಯವಸ್ಥೆಗೊಳಿಸುವಂತೆ ಸಂಬಂಧಿತ ಇಲಾಖೆಗೆ ಸೂಚನೆ ನೀಡಿದರು.

ಪ್ರಶ್ನೆಪತ್ರಿಕೆಗಳ ಸಾಗಣೆ, ಸಂರಕ್ಷಣೆ ಮತ್ತು ವಿತರಣೆಯ ಪ್ರತಿಯೊಂದು ಹಂತದಲ್ಲೂ ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಪರೀಕ್ಷೆಯ ಗೌಪ್ಯತೆ ಮತ್ತು ನಿಷ್ಠೆಯನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಯಾವುದೇ ರೀತಿಯ ಲೋಪ ಕಂಡುಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಬಾರಿ ತುಮಕೂರು ನಗರದಲ್ಲಿರುವ 13 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 5,329 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಪರೀಕ್ಷೆಯ ನಗರ ಸಂಯೋಜಕ ಮನೀಶ್ ಸಾಹೆ ಸಭೆಯಲ್ಲಿ ಪರೀಕ್ಷಾ ಪೂರ್ವ ಸಿದ್ಧತೆಗಳು, ಕೇಂದ್ರ ಅಧೀಕ್ಷಕರ ಜವಾಬ್ದಾರಿಗಳು ಹಾಗೂ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ಮಾರ್ಗಸೂಚಿಗಳ ಕುರಿತು ವಿವರಿಸಿದರು. ಪರೀಕ್ಷೆಯ ಪ್ರತಿಯೊಂದು ಹಂತದಲ್ಲೂ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಸಿ. ಗೋಪಾಲ್ ಸೇರಿದಂತೆ ಪೊಲೀಸ್ ಇಲಾಖೆ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೀ.ಶೇ.ಟಿ.ಸಿದ್ದಲಿಂಗಯ್ಯನವರ ಸ್ಮರಣೆ

ಮಾಲೂರು

ಬೆಂಗಳೂರಿನ ನಗರೇಶ್ವರ ಕಲ್ಯಾಣ ಮಂಟಪದಲ್ಲಿ ಎ.ಎಸ್.ವಿ.ಎನ್.ವಿ. ಸಂಘ (ರಿ.), ಮತ್ತು ನಗರ್ತ ಮಹಿಳಾ ಸಂಘದ ಸಹಕಾರದೊಂದಿಗೆ ನಡೆದ ಸಂಸ್ಥಾಪಕರ ಸಂಸ್ಮರಣೆ, ಸಾಧಕರಿಗೆ ಅಭಿನಂದನೆ, ಪ್ರತಿಭಾ ಪುರಸ್ಕಾರ ಮತ್ತು ಕೀ.ಶೇ. ಟಿ. ಸಿದ್ದಲಿಂಗಯ್ಯನವರ ಸ್ಮರಣೆ” ಕಾರ್ಯಕ್ರಮ ನಡೆಯಿತು.

ಎ.ಎಸ್.ವಿ.ಎನ್.ವಿ. ಸಂಘ (ರಿ.) ಅಧ್ಯಕ್ಷ ಎಸ್ ಪ್ರಕಾಶ್ ಮಾತನಾಡಿ ಬೆಂಗಳೂರು– ನಗರ್ತ ಜನಾಂಗವು ದಾನ ಧರ್ಮಕ್ಕೆ ಹೆಸರುವಾಸಿಯಾಗಿದೆ. ಜನಾಂಗದವರ ಸಹಾಯ ಹಸ್ತದಿಂದ ಪ್ರತಿಭಾ ಪುರಸ್ಕಾರವನ್ನು ನೀಡುತ್ತಾ ಬಂದಿರುತ್ತೇವೆ. ವರ್ಷದಿಂದ ವರ್ಷಕ್ಕೆ ದಾನಿಗಳಿಂದ ಸುಮಾರು 50 ಲಕ್ಷ ಮೀರಿ ಪುದುವಟ್ಟು ನೀಡಿದ್ದಾರೆ. ಮಕ್ಕಳು ಪ್ರತಿಭಾ ಪುರಸ್ಕಾರವನ್ನು ತೆಗೆದುಕೊಂಡು ನೀವು ಸಹ ಮುಂದಿನ ಪೀಳಿಗೆಗೆ ಸಹಾಯ ಹಸ್ತವನ್ನು ನೀಡಬೇಕೆಂದು ಹೇಳಿದರು.

ಸಮಾಜ ಬಾಂಧವರ ಸಹಕಾರದಿಂದ ವಾಣಿಜ್ಯ ಸಂಕೀರ್ಣ ಕಟ್ಟಡ ಉದ್ಘಾಟನೆಯಾಯಿತ್ತು. ಸಂಘದ ಯೋಜನೆಗಳಲ್ಲಿ ಒಂದೇನಿಸಿರುವ ವೃದ್ಧಾಪ್ಯ ವೇತನ ವಿಧವ ವೇತನ ಯೋಜನೆಯು ಫಲಾನುಭವಿಗಳ ಸಂಖ್ಯೆಗಳು ಏರಿದೆ. ತದನಂತರ ಕೃಷ್ಣಾಲಯ ಕಟ್ಟಡ ಜಾಗದಲ್ಲಿ ಸುಸರ್ಜಿತ ಕಲ್ಯಾಣ ಮಂಟಪವನ್ನು ನಿರ್ಮಿಸಲಾಯಿತು. ಶ್ರೀ ಕ್ಷೇತ್ರ ಘಾಟಿಯಲ್ಲಿ ಎ ಎಸ್ ವಿಎನ್ ವಿ ಸಂಘದ ವತಿಯಿಂದ ಸಮುದಾಯ ಭವನವನ್ನು ನಿರ್ಮಿಸಲಾಯಿತು. ಎ ಎಸ್ ವಿ ಎನ್ ವಿ ಸಂಘದ ವಿದ್ಯಾರ್ಥಿಗಳಿಂದ ಸ್ಪಂದನ ವಿದ್ಯಾರ್ಥಿಗಳ ಸಂಘ ಉದಯವಾಯಿತು. ಸಂಘದ ಮುಖವಾಣಿಯಂತಿರುವ ನಮ್ಮ ನಗರ್ತ ವಿದ್ಯಾ ವರ್ಧಕ ವಾಣಿ* ಮಾಸಿಕ ಪತ್ರಿಕೆಯ ಬಿಡುಗಡೆ ಮಾಡಲಾಯಿತು. ಜನಾಂಗದ ಅನುಕೂಲಕ್ಕಾಗಿ ಶ್ರೀ ನಗರೇಶ್ವರ ಸೌಹಾರ್ದ ಪತ್ತಿನ ಸಹಕಾರಿಯ ಸ್ಥಾಪನೆಗೊಂಡಿತ್ತು.

ಉದ್ಘಾಟನೆಯನ್ನು ಗೌರವ ಕಾರ್ಯದರ್ಶಿ ಎಂ.ಎಸ್. ಕೃಷ್ಣಮೂರ್ತಿ, ಮುಖ್ಯ ಅತಿಥಿಗಳಾಗಿ ಬಿ.ವಿ.ಬಸವರಾಜ್, ವೀರಭದ್ರಯ್ಯ, ಖಜಾಂಚಿ ಎಂ.ಶಂಕರ್, ಎ.ಎಸ್.ವಿ.ಎನ್.ವಿ. ಸಂಘ ಅಧ್ಯಕ್ಷ ಎಸ್.ಪ್ರಕಾಶ್, ಲೆಕ್ಕಪರಿಶೋಧಕ ಕೆ.ಸಿ.ಜಯಕುಮಾರ್ ಇದ್ದರು.

# 2ಲಕ್ಷ ನೋಟ್ ಪುಸ್ತಕಗಳ ವಿತರಣೆ

ಕೋಲಾರ

ಪ್ರತಿ ವಿದ್ಯಾರ್ಥಿಯಲ್ಲೂ ಅಗಾಧವಾದ ಶಕ್ತಿ ಇದ್ದು, ಅದನ್ನು ಹೊರತೆಗೆಯುವ ಕೆಲಸ ಶಿಕ್ಷಕರಿಂದ ಆಗಬೇಕು, ಮಕ್ಕಳಲ್ಲಿ ಕಲಿಕೆಯ ಛಲ ಮೂಡಿಸಿ ಸಾಧನೆಯತ್ತ ಮುನ್ನುಗ್ಗುವ ಶಕ್ತಿಯನ್ನು ತುಂಬಬೇಕು, ನಿಮ್ಮ ಶಾಲೆಗಳ ನೆರವಿಗೆ ನಾವಿದ್ದೇವೆ ಎಂದು ಎಪ್ಸನ್ ಇಂಡಿಯಾ ಕಂಪನಿಯ ಮಾನವ ಸಂಪನ್ಮೂಲ ಅಭಿವೃದ್ಧಿ ಅಧಿಕಾರಿ ರಾಜೇಂದ್ರಕುಮಾರ್‌ಸಿಂಗ್ ತಿಳಿಸಿದರು.

ನಗರದ ಮೆಥೋಡಿಸ್ಟ್ ಶಾಲೆ ಆವರಣದಲ್ಲಿ ಎಪ್ಸನ್ ಕಂಪನಿ ಅಧ್ಯಕ್ಷ ಎನ್.ಸಾಂಭಮೂರ್ತಿ ಮಾರ್ಗದರ್ಶನದಲ್ಲಿ ಕೊಡುಗೆಯಾಗಿ ನೀಡಿರುವ ಸುಮಾರು 2 ಕೋಟಿ ಮೌಲ್ಯದ 2 ಲಕ್ಷ ನೋಟ್‌ಪುಸ್ತಕಗಳು, 1 ರಿಂದ 5ನೇ ತರಗತಿ ಮಕ್ಕಳಿಗೆ ಬ್ಯಾಗ್‌ಗಳನ್ನು ಸರ್ಕಾರಿ ಶಾಲೆಗಳಿಗೆ ಹಸ್ತಾಂತರಿಸಿ ಅವರು ಮಾತನಾಡುತ್ತಿದ್ದರು.

ಕಲಿಕೆಗೆ ಶ್ರದ್ಧೆ,ಛಲ, ನಿರ್ಧಿಷ್ಟ ಗುರಿಯಿದ್ದರೆ ಸಾಕು, ಕಷ್ಟಪಟ್ಟು ಕಲಿಯುವುದಕ್ಕಿಂತ ಇಷ್ಟಪಟ್ಟು ಕಲಿಯುವುದು ಮುಖ್ಯ, ಅಂತಹ ವಾತಾವರಣವನ್ನು ಶಿಕ್ಷಕರು ಮೂಡಿಸಬೇಕು, ಮಕ್ಕಳನ್ನು ಸಮಾಜಕ್ಕೆ ಕೊಡುಗೆ ನೀಡುವಂತೆ ಬೆಳೆಸಬೇಕು ಎಂದರು.

ಕಳೆದ 20 ವರ್ಷಗಳಿಂದ ಸರ್ಕಾರಿ ಶಾಲೆಗಳಿಗೆ ನೆರವಾಗುತ್ತಿದ್ದೇವೆ, ಈ ವರ್ಷ ನೋಟ್ ಪುಸ್ತಕಗಳ ಜತೆಗೆ 1 ರಿಂದ 5ನೇ ತರಗತಿ ಮಕ್ಕಳಿಗೆ ಬ್ಯಾಗ್ ನೀಡುತ್ತಿದ್ದು, ಮುಂದಿನ ವರ್ಷ 6 ನೇ ತರಗತಿಯಿಂದ 10ನೇ ತರಗತಿವರೆಗಿನ ಮಕ್ಕಳಿಗೆ ಬ್ಯಾಗ್ ನೀಡಲಾಗುವುದು ಎಂದು ತಿಳಿಸಿದರು.

ನಾವು ನೀಡುತ್ತಿರುವ ನೋಟ್ ಪುಸ್ತಕ ಮತ್ತು ಶೈಕ್ಷಣಿಕ ಸಲಕರಣೆಗಳನ್ನು ಸದ್ಬಳಕೆ ಮಾಡಿಕೊಳ್ಳಿ, ನಿಮ್ಮ ಸಾಧನೆಗೆ ಇನ್ನಷ್ಟು ನೆರವು ನೀಡಲು ನಾವು ಸಿದ್ದರಿದ್ದೇವೆ ಎಂದರು.

ಕಂಪನಿಯ ಮಾನವ ಸಂಪನ್ಮೂಲ ವಿಭಾಗದ ಅಧಿಕಾರಿ ವಿಜಯ್ ಗೋವಿಂದ್ ಮಾತನಾಡಿ, ನಮ್ಮ ಸಂಸ್ಥೆಯ ಅಧ್ಯಕ್ಷರಾದ ಎನ್.ಸಾಂಭಮೂರ್ತಿ ಅವರ ಶೈಕ್ಷಣಿಕ ಹಾಗೂ ಸರ್ಕಾರಿ ಶಾಲಾ ಮಕ್ಕಳ ಬಗೆಗಿನ ಕಾಳಜಿಯ ಪ್ರತೀಕವಾಗಿ ಈ ನೆರವನ್ನು ಜಿಲ್ಲೆಗೆ ಹರಿಸುತ್ತಿದ್ದು, ನಮ್ಮ ಪ್ರಯತ್ನಕ್ಕೆ ಶಿಕ್ಷಕರ ಬಳಗ ಕೈಜೋಡಿಸಿ ಮಕ್ಕಳಿಗೆ ಪಾರದರ್ಶಕವಾಗಿ ತಲುಪುವಂತೆ ಮಾಡುತ್ತಿದ ಎಂದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಅಲ್ಮಾಸ್ ಫರ್ವೀನ್ ತಾಜ್ ಮಾತನಾಡಿ, ಪ್ರತಿ ವರ್ಷ ಕೋಟ್ಯಾಂತರ ರೂ ಮೌಲ್ಯದ ಪರಿಕರಗಳ ನೆರವನ್ನು ಸರ್ಕಾರಿ ಶಾಲೆಗಳಿಗೆ ಎಪ್ಸನ್ ಕಂಪನಿ ಹರಿಸಿದೆ, ಸರ್ಕಾರಿ ಶಾಲೆಗಳ ದಾಖಲಾತಿ ಹೆಚ್ಚಳಕ್ಕೆ ಮತ್ತು ಬಲವರ್ಧನೆಗೆ ಇದು ಸಹಕಾರಿಯಾಗಿದೆ ಎಂದು ತಿಳಿಸಿ, ಶಾಲೆಯಲ್ಲಿ ಕೆಲಸ ಮಾಡುವುದು ಖುಷಿ ನೀಡುತ್ತದೆ, ಇಲ್ಲಿಗೆ ಬರೋದು ಬಿಪಿಎಲ್ ಮಕ್ಕಳೇ ಹೆಚ್ಚಿದ್ದಾರೆ ಅವರಿಗೆ ನ್ಯಾಯ ಒದಗಿಸುವುದು ಶಿಕ್ಷಕರಾಗಿ ನಿಮ್ಮ ಜವಾಬ್ದಾರಿಯಾಗಿದೆ ಎಂದರು.

ತಾಲ್ಲೂಕು ಸಮನ್ವಯಾಧಿಕಾರಿ ರಾಧಮ್ಮ ಮಾತನಾಡಿ, ಎಪ್ಸನ್ ಕಂಪನಿ ಮತ್ತು ಶಿಕ್ಷಕ ಗೆಳೆಯರ ಬಳಗದ ಕಾರ್ಯ ಶ್ಲಾಘನೀಯವಾಗಿದೆ, ಸರ್ಕಾರಿ ಶಾಲೆಗಳಿಗೆ ಶೌಚಾಲಯ, ಫಿಲ್ಟರ್, ನೋಟ್ ಪುಸ್ತಕ ಬ್ಯಾಗ್, ಶಾಲಾ ಕಟ್ಟಡಗಳಿಗೆ ಸುಣ್ಣಬಣ್ಣ, ಹೊಸ ಕಟ್ಟಡಗಳ ನಿರ್ಮಾಣ ಹೀಗೆ ನೂರಾರು ಕೆಲಸಗಳನ್ನು ಮಾಡುತ್ತಿದ್ದು, ಅದನ್ನು ಸದ್ಬಳಕೆ ಮಾಡಿಕೊಳ್ಳೋಣ ಎಂದರು.

# ಮಕ್ಕಳನ್ನು ಕೈಬೀಸಿ ಕರೆಯುತ್ತಿರುವ ನಾಯನಹಳ್ಳಿ ಸರ್ಕಾರಿ ಶಾಲೆ

ಚಿಕ್ಕಬಳ್ಳಾಪುರ

ಸರ್ಕಾರಿ ಶಾಲೆಗಳ ಬಗ್ಗೆ ಜನರಲ್ಲಿರುವ ಸಾಂಪ್ರದಾಯಿಕ ಕಲ್ಪನೆಗಳನ್ನು ಬದಲಾಯಿಸುತ್ತಿರುವ ಚಿಕ್ಕಬಳ್ಳಾಪುರ ತಾಲೂಕಿನ ನಾಯನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಗುಣಮಟ್ಟದ ಶಿಕ್ಷಣ ಹಾಗೂ ಆಕರ್ಷಕ ಪರಿಸರದ ಮೂಲಕ ಮಕ್ಕಳನ್ನು ಕೈಬೀಸಿ ಕರೆಯುತ್ತಿದೆ.

ಚಿಕ್ಕಬಳ್ಳಾಪುರ–ಶಿಡ್ಲಘಟ್ಟ ರಾಷ್ಟ್ರೀಯ ಹೆದ್ದಾರಿ ಮಾರ್ಗದಲ್ಲಿರುವ ಈ ಶಾಲೆ ಇಂದು ಸಕಲ ಸೌಲಭ್ಯಗಳನ್ನು ಒಳಗೊಂಡ ಮಾದರಿ ಶಾಲೆಯಾಗಿ ಹೊರಹೊಮ್ಮಿದೆ. ಶಿಕ್ಷಕರ ಅವಿರತ ಶ್ರಮ, ಎಸ್‌ಡಿಎಂಸಿ ಸದಸ್ಯರು, ಗ್ರಾಮಸ್ಥರು ಹಾಗೂ ಹಳೆಯ ವಿದ್ಯಾರ್ಥಿಗಳ ಸಹಕಾರದಿಂದ ಶಾಲೆಯ ಆವರಣವು ಹಸಿರಿನ ಉದ್ಯಾನವನದಂತಾಗಿದೆ.

ಶಾಲೆಯ ಒಳಾಂಗಣ ಹಾಗೂ ಹೊರಾಂಗಣದಲ್ಲಿ ಕನ್ನಡ ಅಕ್ಷರಮಾಲೆ, ಅಂಕಿಗಳು, ಕಾಗುಣಿತಗಳು, ಬಣ್ಣ ಬಣ್ಣದ ಚಿತ್ರಕಲೆಗಳು ಮತ್ತು ಕಲಾಕೃತಿಗಳನ್ನು ಅಳವಡಿಸಲಾಗಿದ್ದು, ಮಕ್ಕಳ ಕಲಿಕೆಗೆ ಪೂರಕ ವಾತಾವರಣ ನಿರ್ಮಿಸಲಾಗಿದೆ. ಹಸಿರಿನಿಂದ ಕಂಗೊಳಿಸುವ ಶಾಲಾ ಆವರಣ ವಿದ್ಯಾರ್ಥಿಗಳಿಗೆ ವಿಶೇಷ ಆಕರ್ಷಣೆಯಾಗಿದೆ.

ಶಾಲೆಯಲ್ಲಿ ದ್ವಿಭಾಷಾ (ಕನ್ನಡ–ಇಂಗ್ಲಿಷ್) ಶಿಕ್ಷಣದ ಜೊತೆಗೆ ಗಣಕಯಂತ್ರ ಶಿಕ್ಷಣವನ್ನೂ ನೀಡಲಾಗುತ್ತಿದೆ. ಸ್ಮಾರ್ಟ್ ಫಲಕಗಳ ಮೂಲಕ ಆಧುನಿಕ ಶಿಕ್ಷಣ ಕಲಿಸಲಾಗುತ್ತಿದ್ದು, ಪರಿಸರ, ಕೃಷಿ, ತೋಟಗಾರಿಕೆ ಹಾಗೂ ಹೂವಿನ ಬೆಳೆಯ ಕುರಿತು ಪ್ರಾಯೋಗಿಕ ಜ್ಞಾನವನ್ನೂ ಮಕ್ಕಳಿಗೆ ನೀಡಲಾಗುತ್ತಿದೆ.

ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಒಂದರಿಂದ



ಏಳನೇ ತರಗತಿವರೆಗೆ ಒಟ್ಟು 59 ವಿದ್ಯಾರ್ಥಿಗಳು ದಾಖಲಾಗಿದ್ದು, ಅವರಲ್ಲಿ 33 ಗಂಡು ಹಾಗೂ 26 ಹೆಣ್ಣು ಮಕ್ಕಳು




ಇದ್ದಾರೆ. ಖಾಸಗಿ ಶಾಲೆಗಳು ಸಮೀಪದಲ್ಲಿದ್ದರೂ ಹೆಚ್ಚಿನ ಸಂಖ್ಯೆಯಲ್ಲಿ ಪೋಷಕರು ತಮ್ಮ ಮಕ್ಕಳನ್ನು ಈ ಸರ್ಕಾರಿ ಶಾಲೆಗೆ ದಾಖಲಿಸುತ್ತಿರುವುದು ವಿಶೇಷವಾಗಿದೆ.

ಶಾಲೆಯಲ್ಲಿ ಮಕ್ಕಳಿಗೆ ಅಗತ್ಯವಾದ ಬೆಂಚುಗಳು, ಕುರ್ಚಿಗಳು, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಪ್ರತ್ಯೇಕ ಶೌಚಾಲಯಗಳು, ಅನ್ನದಾಸೋಹ ಕೊಠಡಿ ಹಾಗೂ ವಿಶಾಲ ಆಟದ ಮೈದಾನವಿದೆ. ಕ್ರಿಕೆಟ್, ವಾಲಿಬಾಲ್, ಥ್ರೋಬಾಲ್ ಸೇರಿದಂತೆ ವಿವಿಧ ಕ್ರೀಡೆಗಳ ಜೊತೆಗೆ ಯೋಗ, ಪ್ರಾಣಾಯಾಮ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೂ ಆದ್ಯತೆ ನೀಡಲಾಗಿದೆ.

ವಿದ್ಯಾಚೇತನ ಹಾಗೂ ವರ್ಗಾಂತರ ಹಂತದ ವಿದ್ಯಾರ್ಥಿಗಳಿಗೆ ಆಟದ ಮೂಲಕ ಕಲಿಕೆ, ವಿಷಯವಾರು ಚಟುವಟಿಕೆಗಳು ಹಾಗೂ ದ್ವಿಭಾಷಾ ಬೋಧನೆಯ ಮೂಲಕ ಕಲಿಕೆಯನ್ನು ಆಸಕ್ತಿದಾಯಕಗೊ ಳಿಸಲಾಗಿದೆ.

“ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಶಿಸ್ತು ಮತ್ತು ಮೌಲ್ಯಾಧಾರಿತ ಶಿಕ್ಷಣ ನೀಡುವ ಗುರಿಯೊಂದಿಗೆ ಶಾಲೆಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಈ ಕಾರ್ಯಕ್ಕೆ ಪೋಷಕರು, ಎಸ್‌ಡಿಎಂಸಿ ಸದಸ್ಯರು ಹಾಗೂ ಗ್ರಾಮಸ್ಥರ ಉತ್ತಮ ಸಹಕಾರ ದೊರೆಯುತ್ತಿದೆ” ಎಂದು ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕ ಎನ್. ಲಕ್ಷ್ಮೀನಾರಾಯಣ ತಿಳಿಸಿದ್ದಾರೆ.

“ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಅನುದಾನ ನೀಡುತ್ತಿದೆ. ನಾಯನಹಳ್ಳಿ ಶಾಲೆಯ ಶಿಕ್ಷಕರು ಶಾಲೆಯನ್ನು ಉದ್ಯಾನವನದ ಮಾದರಿಯಲ್ಲಿ ರೂಪಿಸಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿದ್ದಾರೆ. ಇದು ಇತರ ಶಾಲೆಗಳಿಗೆ ಮಾದರಿಯಾಗಿದೆ” ಎಂದು

ಶಾಲೆಯಲ್ಲಿ ಮಕ್ಕಳಿಗೆ ಅಗತ್ಯವಾದ ಬೆಂಚುಗಳು, ಕುರ್ಚಿಗಳು, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಪ್ರತ್ಯೇಕ ಶೌಚಾಲಯಗಳು, ಅನ್ನದಾಸೋಹ ಕೊಠಡಿ ಹಾಗೂ ವಿಶಾಲ ಆಟದ ಮೈದಾನವಿದೆ. ಕ್ರಿಕೆಟ್, ವಾಲಿಬಾಲ್, ಥ್ರೋಬಾಲ್ ಸೇರಿದಂತೆ ವಿವಿಧ ಕ್ರೀಡೆಗಳ ಜೊತೆಗೆ ಯೋಗ, ಪ್ರಾಣಾಯಾಮ ಹಾಗೂ ಸಾಂಸ್ಕೃತಿಕ ಚಟುವಣಿಕೆಗಳಿಗೂ ಆದ್ಯತೆ ನೀಡಲಾಗಿದೆ.




ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಸುಖನ್ಯ ಅಭಿಪ್ರಾಯಪಟ್ಟರು.

“ಶಾಲೆಯಲ್ಲಿ ಉತ್ತಮ ಕಲಿಕಾ ವಾತಾವರಣವಿದೆ. ಗುಣಮಟ್ಟದ ಶಿಕ್ಷಕರಿಂದ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯುತ್ತಿದೆ. ಸರ್ಕಾರಿ ಶಾಲೆಗಳ ಸೌಲಭ್ಯಗಳನ್ನು ಪೋಷಕರು ಸದುಪಯೋಗಪಡಿಸಿಕೊಳ್ಳಬೇಕು” ಎಂದು ಗ್ರಾಮಸ್ಥ ಬಿ.ಎನ್.ಮುನಿಕೃಷ್ಣಪ್ಪ ಹೇಳಿದರು.

ನಾಯನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಇಂದು ಗ್ರಾಮೀಣ ಪ್ರದೇಶದಲ್ಲಿಯೂ ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳಿಗೆ ಸಮಾನವಾಗಿ ಗುಣಮಟ್ಟದ ಶಿಕ್ಷಣ ನೀಡಬಲ್ಲವು ಎಂಬುದಕ್ಕೆ ಉತ್ತಮ ಉದಾಹರಣೆಯಾಗಿ ಹೊರಹೊಮ್ಮಿದೆ.



ಕೋಲಾರವಾಣಿ ವಿಶೇಷ



# ‘ವಿಕಸಿತ ಭಾರತಕ್ಕಾಗಿ ಮೊದಲು ವಿಕಸಿತ ಗ್ರಾಮಗಳ ನಿರ್ಮಾಣ ಅಗತ್ಯ’

ಚಿಕ್ಕಬಳ್ಳಾಪುರ

ಪ್ರಧಾನ ಮಂತ್ರಿಯವರ ವಿಕಸಿತ ಭಾರತ್–2047 ಸಂಕಲ್ಪವನ್ನು ಸಾಕಾರಗೊಳಿಸಲು ಮೊದಲು ದೇಶದ ಗ್ರಾಮಗಳನ್ನು ಅಭಿವೃದ್ಧಿಪಡಿಸುವ ವಿಕಸಿತ ಗ್ರಾಮ ಪರಿಕಲ್ಪನೆಯನ್ನು ಯಶಸ್ವಿಗೊಳಿಸಬೇಕು ಎಂದು ಸಂಸದ ಡಾ.ಕೆ.ಸುಧಾಕರ್ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಿದ್ದ ನಬಾರ್ಡ್ ಜಿಲ್ಲಾ ಶಾಖೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ನಬಾರ್ಡ್ ಕಚೇರಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಬಾರ್ಡ್ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿಗೆ ಸಮರ್ಪಿತವಾದ ರಾಷ್ಟ್ರೀಯ ಹಣಕಾಸು ಸಂಸ್ಥೆಯಾಗಿದ್ದು, ರೈತರು ಹಾಗೂ ಗ್ರಾಮೀಣ ಸಮುದಾಯದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

ಚಿಕ್ಕಬಳ್ಳಾಪುರ ಜಿಲ್ಲೆ ರಚನೆಯಾಗಿ 17 ವರ್ಷಗಳಾದ ನಂತರ ಜಿಲ್ಲೆಯಲ್ಲಿ ನಬಾರ್ಡ್ ಶಾಖೆ ಆರಂಭವಾಗುತ್ತಿರುವುದು ಸಂತಸದ ವಿಷಯವಾಗಿದೆ. ಈ ಹಿಂದೆ ಚಿಕ್ಕಬಳ್ಳಾಪುರ ಜಿಲ್ಲೆ ಕೋಲಾರ ಜಿಲ್ಲೆಯ ನಬಾರ್ಡ್ ವ್ಯಾಪ್ತಿಗೆ ಒಳಪಟ್ಟಿತ್ತು. ಇದೀಗ ಜಿಲ್ಲೆಯಲ್ಲಿಯೇ ಸ್ವತಂತ್ರ



ಶಾಖೆ ಆರಂಭವಾಗಿರುವುದರಿಂದ ರೈತರು, ಸ್ವಸಹಾಯ ಸಂಘಗಳು ಹಾಗೂ ಗ್ರಾಮೀಣ ಉದ್ಯಮಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು.

ಜಿಲ್ಲೆಗೆ ನಬಾರ್ಡ್ ಶಾಖೆ ಮಂಜೂರು ಮಾಡುವಂತೆ ರಾಷ್ಟ್ರೀಯ ಮಟ್ಟದ ಅಧಿಕಾರಿಗಳನ್ನು ಭೇಟಿ ಮಾಡಿ ಮನವಿ ಮಾಡಲಾಗಿತ್ತು. ಅದರ ಫಲವಾಗಿ ಇಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ನಬಾರ್ಡ್ ಶಾಖೆ ಕಾರ್ಯಾರಂಭ ಮಾಡಿದೆ ಎಂದು ಹೇಳಿದರು.

ನಬಾರ್ಡ್ ಇತರೆ ಬ್ಯಾಂಕುಗಳಂತೆ ಕೇವಲ ಸಾಲ ನೀಡುವ ಸಂಸ್ಥೆಯಲ್ಲ. ಮಹಿಳಾ ಸಬಲೀಕರಣ, ಸ್ತ್ರೀಶಕ್ತಿ ಸಂಘಗಳ ಅಭಿವೃದ್ಧಿ, ಸಣ್ಣ ಮತ್ತು ಮಧ್ಯಮ ರೈತರ ಆರ್ಥಿಕ ಬಲವರ್ಧನೆ, ಬೀದಿಬದಿ ವ್ಯಾಪಾರಿಗಳು ಹಾಗೂ ಆಹಾರ ಸಂಸ್ಕರಣಾ ಘಟಕಗಳಿಗೆ ಉತ್ತೇಜನ ನೀಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಜಿಲ್ಲೆಯ ರೈತರು ಹಾಗೂ ಗ್ರಾಮೀಣ ಉದ್ಯಮಿಗಳು ನಬಾರ್ಡ್ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು. ಕೃಷಿ ಹಾಗೂ ಸಂಬಂಧಿತ ಚಟುವಟಿಕೆಗಳಿಗೆ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯ ದೊರೆಯಲಿದ್ದು, ಗ್ರಾಮೀಣ ಆರ್ಥಿಕತೆಯ ಬೆಳವಣಿಗೆಗೆ ಇದು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಬಾರ್ಡ್ ರಾಜ್ಯ ಮುಖ್ಯ ಮಹಾಪ್ರಬಂಧಕ ಡಾ. ಸುರೇಂದ್ರಬಾಬು, ಕರ್ನಾಟಕ ವೃತ್ತದ ಮಹಾಪ್ರಬಂಧಕ ಡಾ. ಅಶುತೋಷ್ ಕುಮಾರ್, ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕ ಅರುಣ್ ಕುಮಾರ್, ಕರ್ನಾಟಕ ಗ್ರಾಮೀಣ ಬ್ಯಾಂಕ್ ಕೋಲಾರ ಪ್ರಾದೇಶಿಕ ವ್ಯವಸ್ಥಾಪಕ ಎಂ.ಇ. ವಿನಯ್ ಹಾಗೂ ನಬಾರ್ಡ್ ಜಿಲ್ಲಾ ಅಭಿವೃದ್ಧಿ ವ್ಯವಸ್ಥಾಪಕ ಮಹದೇವ್ ರೆಡ್ಡಿ ಸೇರಿದಂತೆ ವಿವಿಧ ಬ್ಯಾಂಕುಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ‘ಭೂಮಿಯ ಫಲವತ್ತತೆ ನಾಶಮಾಡುವ ರಸಗೊಬ್ಬರ ನಿಯಂತ್ರಿಸಿ’

ತುಮಕೂರು

ಭೂಮಿಯ ಫಲವತ್ತತೆ ಕಾಪಾಡಲು ಕ್ರಿಮಿನಾಶಕ ಮತ್ತು ರಸಗೊಬ್ಬರಗಳ ಬಳಕೆ ಬದಲು ಸಾವಯವ ಗೊಬ್ಬರ ಬಳಕೆಯಿಂದ ಆಗುವ ಪ್ರಯೋಜನಗಳ ಬಗ್ಗೆ ಕೃಷಿ ಅಧಿಕಾರಿಗಳು ರೈತರಿಗೆ ಮನವರಿಕೆ ಮಾಡಿಕೊಟ್ಟು ಪರಿಸರಸ್ನೇಹಿ, ಸಾಂಪ್ರದಾಯಕ ಕೃಷಿ ಪದ್ಧತಿ ಅನುಸರಿಸಲು ಪ್ರೋತ್ಸಾಹಿಸಬೇಕು ಎಂದು ಶಾಸಕ ಜಿ.ಬಿ. ಜ್ಯೋತಿಗಣೇಶ್ ಸಲಹೆ ಮಾಡಿದರು.

ನರೇಂದ್ರ ಮೋದಿಯವರು ಪ್ರಧಾನಿಯಾಗಿ 12 ವರ್ಷ ಪೂರೈಸಿದ್ದರ ಹಿನ್ನೆಲೆಯಲ್ಲಿ ತಾಲ್ಲೂಕಿನ ಹಿರೇಹಳ್ಳಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಬುಧವಾರ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಹಮ್ಮಿಕೊಂಡಿದ್ದ ಖೇತ್ ಬಚಾವೋ ಅಭಿಯಾನ್ ಕಾರ್ಯಕ್ರಮದಲ್ಲಿ ನೈಸರ್ಗಿಕ ಕೃಷಿ ಉತ್ತೇಜಿಸುವ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಶಾಸಕರು, ಅತಿಯಾದ ರಾಸಾಯನಿಕ ಗೊಬ್ಬರಗಳ ಬಳಕೆಯಿಂದ ಭೂಮಿಯ ಫಲವತ್ತತೆ ಹಾಳಾಗುವುದನ್ನು ತಪ್ಪಿಸಲು ರೈತರು ನೈಸರ್ಗಿಕ ಕೃಷಿ ಪದ್ಧತಿ ಅನುಸರಿಸಬೇಕು. ಸಾವಯವ ಕೃಷಿ ಪ್ರೋತ್ಸಾಹಿಸಲು ನರೇಂದ್ರ ಮೋದಿಯವರ ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ರೈತರು ಯೋಜನೆಗಳ ಪ್ರಯೋಜನ ಪಡೆದು ದೇಶದ ಆಹಾರಧಾನ್ಯ ಉತ್ಪಾದನೆ ಹೆಚ್ಚಾಗಲು ಕೈ ಜೋಡಿಸಬೇಕು ಎಂದರು.

ಕೃಷಿ ಅಧಿಕಾರಿಗಳು, ರೈತ ಮೋರ್ಚಾಗಳು ಹಾಗೂ ಕೃಷಿ ಅಧಿಕಾರಿಗಳು ನೈಸರ್ಗಿಕ ಕೃಷಿ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಬೇಕು. ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಕಡಿಮೆ ಮಾಡಿ, ಪೂರ್ಣ ಪ್ರಮಾಣದಲ್ಲಿ ಸಾಧ್ಯವಾಗದಿದ್ದರೂ ಹಂತಹಂತವಾಗಿಯಾದರೂ ಸಾವಯವ ಕೃಷಿ ಅಳವಡಿಸುವ ಪ್ರಯತ್ನ ಮಾಡಬೇಕು ಎಂದು ಶಾಸಕ ಜ್ಯೋತಿಗಣೇಶ್ ಹೇಳಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್. ರವಿಶಂಕರ್ ಹೆಬ್ಬಾಕ ಮಾತನಾಡಿ, ಪ್ರಧಾನಮಂತ್ರಿ ಮೋದಿಯವರ ಮಹತ್ವಾಕಾಂಕ್ಷೆಯ ನೈಸರ್ಗಿಕ ಕೃಷಿ ಪದ್ಧತಿ ಅನುಸರಿಸಿ ಭೂಮಿಯ ಫಲವತ್ತತೆಯನ್ನು ರಕ್ಷಣೆ ಮಾಡಬೇಕು. ರೈತ ಮೋರ್ಚಾ ಮುಖಂಡರು, ಕಾರ್ಯಕರ್ತರು ರೈತರಲ್ಲಿ ಈ ಬಗ್ಗೆ ಮನವರಿಕೆ ಮಾಡಿಕೊಡಬೇಕು. ಮೋರ್ಚಾ ಕಾರ್ಯಕರ್ತರೇ ನೈಸರ್ಗಿಕ ಕೃಷಿ ಅನುಸರಿಸಿ ರೈತರಿಗೆ ಪ್ರೇರಣೆಯಾಗಬೇಕು ಎಂದರು.

ರಸಗೊಬ್ಬರಗಳ ಬದಲು ಕೊಟ್ಟಿಗೆ ಗೊಬ್ಬರ, ಹಸಿರು ಗೊಬ್ಬರ, ಜೀವಾಮೃತ ಬಳಕೆಯನ್ನು ಹೆಚ್ಚು ಮಾಡಬೇಕು. ಆರಂಭದಲ್ಲಿ ಇಳುವರಿ ಕಡಿಮೆಯಾದರೂ ಭೂಮಿಯ ಫಲವತ್ತತೆ ಹೆಚ್ಚಾದಂತೆ ಇಳುವರಿಯೂ ಹೆಚ್ಚುತ್ತದೆ. ಎಲ್ಲಾ ಮಂಡಲಗಳಲ್ಲಿ, ನೈಸರ್ಗಿಕ ತೋಟಗಳಲ್ಲಿ ರೈತ ಮೋರ್ಚಾದಿಂದ ರೈತರ ಸಭೆಗಳನ್ನು ಆಯೋಜಿಸಿ ಪ್ರಚಾರ ಮಾಡಬೇಕು ಎಂದು ಹೇಳಿದರು.

19/06/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ದೇವಾಲಯದ ಹಣ ದುರುಪಯೋಗ ಆರೋಪ...?

ಕೋಲಾರ

ಶ್ರೀನಿವಾಸಪುರ ತಾಲೂಕಿನ ಗೌನಿಪಲ್ಲಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಕೊರುಕೋನಪಲ್ಲಿ ಗ್ರಾಮದ ಗ್ರಾಮಸ್ಥರು, ಅರ್ಚಕ ಚನ್ನಕೇಶವಚಾರ್ ಅವರು ಬೆಂಗಳೂರಿನಿಂದ ಬಂದು ಗ್ರಾಮದ ಹಾಗೂ ಚನ್ನಕೇಶವಸ್ವಾಮಿ ದೇವಾಲಯದ ವಾತಾವರಣವನ್ನು ಹಾಳು ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಗ್ರಾಮಸ್ಥರ ಹೇಳಿಕೆಯ ಪ್ರಕಾರ, ತಹಸೀಲ್ದಾರ್ ಕಚೇರಿಯಿಂದ ವಿಧಾನಸಭೆಯ ಅಧಿವೇಶನ ಹಾಗೂ ಲೋಕಾಯುಕ್ತರಿಗೆ ಸಲ್ಲಿಸಿರುವ ವರದಿಯಲ್ಲಿ ಚನ್ನಕೇಶವಸ್ವಾಮಿ ದೇವಾಲಯದಲ್ಲಿ ಜಾನಕಿ ದೇವಿಗೆ ಸಂಬಂಧಿಸಿದ ಕಲ್ಲು ಇದೆ ಹಾಗೂ ಭಕ್ತರು ಅದನ್ನು ಜಾನಕಿ ದೇವರ ಹೆಸರಿನಿಂದ ಕರೆಯುತ್ತಾರೆ ಎಂದು ಉಲ್ಲೇಖಿಸಲಾಗಿದೆ. ಅಲ್ಲದೆ, ದೇವಾಲಯದಲ್ಲಿ ಚನ್ನಕೇಶವಚಾರ್ ಪೂಜೆ ಸಲ್ಲಿಸುತ್ತಿದ್ದಾರೆ ಎಂದು ತಿಳಿಸಲಾಗಿದೆ.

ಆದರೆ ಈ ಎಲ್ಲ ಮಾಹಿತಿಯೂ ಸತ್ಯಕ್ಕೆ ದೂರವಾಗಿದ್ದು, ಸುಳ್ಳು ಮಾಹಿತಿಯನ್ನು ನೀಡಲಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ದೇವಾಲಯದಲ್ಲಿ ಜಾನಕಿ ದೇವಿಗೆ ಸಂಬಂಧಿಸಿದ ಯಾವುದೇ ಕಲ್ಲು ಇಲ್ಲ. ಜಾನಕಿ ಎಂಬ ಹೆಸರನ್ನೇ ಗ್ರಾಮದಲ್ಲಿ ಯಾರೂ ಕೇಳಿಲ್ಲ. ದೇವಾಲಯದ ಹೆಸರಿನಲ್ಲಿ ಅಕ್ರಮ ನಡೆಸಿ ಹಣ ದುರುಪಯೋಗಪಡಿಸಿಕೊಳ್ಳುವ ಉದ್ದೇಶದಿಂದ ಈ ರೀತಿಯ ಯೋಜನೆ ರೂಪಿಸಲಾಗಿದೆ ಎಂದು ಅವರು ದೂರಿದ್ದಾರೆ. ಇದಕ್ಕೆ ಗ್ರಾಮದ ಕೆಲವರು ಸಹಕಾರ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಚನ್ನಕೇಶವಚಾರ್ ಅವರು ಚನ್ನಕೇಶವಸ್ವಾಮಿ ದೇವಾಲಯದಲ್ಲಿ ಪೂಜೆ ಸಲ್ಲಿಸುತ್ತಿಲ್ಲ. ಭಕ್ತರು ಸಹ ದೇವಾಲಯಕ್ಕೆ ಬರುತ್ತಿಲ್ಲ.

ಈಗಾಗಲೇ ಲಕ್ಷಾಂತರ ರೂಪಾಯಿ ವೆಚ್ಚ ಮಾಡಲಾಗಿದೆ ಎಂದು ಹೇಳಲಾಗುತ್ತಿದ್ದು, ಸರ್ಕಾರದಿಂದ ದೊರೆಯುವ ಅನುದಾನ ಪಡೆಯುವ ಉದ್ದೇಶದಿಂದ ಜಾನಕಿ ದೇವಾಲಯದಲ್ಲಿ ವಾರಕ್ಕೊಮ್ಮೆ ಅಥವಾ ಹದಿನೈದು ದಿನಕ್ಕೊಮ್ಮೆ ಪೂಜೆ ನಡೆಸಲಾಗುತ್ತಿದೆ ಎಂದು ಗ್ರಾಮಸ್ಥರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಇದಲ್ಲದೆ, ತಮ್ಮ ತಂದೆಯವರ ನಿಧನದ ನಂತರ ಗ್ರಾಮ ಹಾಗೂ ಚನ್ನಕೇಶವಸ್ವಾಮಿ ದೇವಾಲಯಕ್ಕೆ ಸೇರಿದ ಜಾಗದಲ್ಲಿ ಅಕ್ರಮವಾಗಿ ಮನೆ ನಿರ್ಮಿಸಲು ಪ್ರಯತ್ನಿಸಿದಾಗ ಗ್ರಾಮಸ್ಥರು ಅದನ್ನು ತಡೆದಿದ್ದಾರೆ ಎಂದು ಹೇಳಿದ್ದಾರೆ. ಆ ಜಾಗವನ್ನು ತೆರವುಗೊಳಿಸಿ ದೇವಾಲಯಕ್ಕೆ ಮೀಸಲಿಡಬೇಕು ಎಂದು ಒತ್ತಾಯಿಸಿದ್ದಾರೆ.

ತಮ್ಮ ತಂದೆಯವರ ಮೇಲಿನ ಗೌರವ ಹಾಗೂ ಅಭಿಮಾನದಿಂದ ಇಷ್ಟು ದಿನ ಮೌನವಾಗಿದ್ದೇವೆ. ಆದರೆ ಗ್ರಾಮದಲ್ಲಿ ಯಾವುದೇ ಅಹಿತಕರ ಘಟನೆ ನಡೆದರೆ ಅದಕ್ಕೆ ಚನ್ನಕೇಶವಚಾರ್ ಹಾಗೂ ರಾಮಾಚಾರ್ ಹೊಣೆಗಾರರಾಗಿರುತ್ತಾರೆ ಎಂದು ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ವಿಧಾನಸಭೆಯ ಅಧಿವೇಶನ ಹಾಗೂ ಲೋಕಾಯುಕ್ತರಿಗೆ ತಪ್ಪು ಮಾಹಿತಿ ನೀಡಿದ ಅಧಿಕಾರಿಗಳ ವಿರುದ್ಧ ಹಾಗೂ ದೇವಾಲಯದ ವಿಚಾರದಲ್ಲಿ ಅಕ್ರಮ ಎಸಗಿರುವ ಆರೋಪ ಎದುರಿಸುತ್ತಿರುವ ಚನ್ನಕೇಶವಚಾರ್ ಮತ್ತು ರಾಮಾಚಾರ್ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಕೊರುಕೋನಪಲ್ಲಿ ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಬೀದಿ ದೀಪಗಳ ಎಲ್‌ಇಡಿ ಪರಿವರ್ತನೆ ಕಾಮಗಾರಿ ಶೇ.86ರಷ್ಟು ಪೂರ್ಣ



ಬೆಂಗಳೂರು

ಉತ್ತರ ನಗರ ಪಾಲಿಕೆಯ ಆಯುಕ್ತರಾದ ಶ್ರೀ ಪೋಮ್ಮಲ ಸುನೀಲ್ ಕುಮಾರ್ ಅವರ ನಿರ್ದೇಶನದಂತೆ, ಪಾಲಿಕೆಯ ವ್ಯಾಪ್ತಿಯಲ್ಲಿ ಇಂಧನ ಉಳಿತಾಯ ಹಾಗೂ ಸಾರ್ವಜನಿಕ ಸುರಕ್ಷತೆಯನ್ನು ಹೆಚ್ಚಿಸುವ ಉದ್ದೇಶದಿಂದ ಸಾಂಪ್ರದಾಯಿಕ ಬೀದಿದೀಪಗಳನ್ನು ಇಂಧನ ದಕ್ಷತೆಯ ಎಲ್‌ಇಡಿ ಬೀದಿದೀಪಗಳಾಗಿ ಪರಿವರ್ತಿಸುವ ಕಾರ್ಯವೂ ವೇಗವಾಗಿ ನಡೆಯುತ್ತಿದ್ದು, ಈಗಾಗಲೇ ಶೇ.86ರಷ್ಟು ಪೂರ್ಣಗೊಂಡಿದೆ.

ಸರ್ಕಾರದ ಅನುಮೋದನೆಯೊಂದಿಗೆ ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಕೈಗೊಳ್ಳಲಾಗುತ್ತಿರುವ ಈ ಯೋಜನೆಯಡಿ ಯಲಹಂಕ, ಬ್ಯಾಟರಾಯನಪುರ, ಪುಲಿಕೇಶಿನಗರ, ಹೆಬ್ಬಾಳ, ಸರ್ವಜ್ಞನಗರ, ದಾಸರಹಳ್ಳಿಯ 5 ವಾರ್ಡ್‌ಗಳು ಹಾಗೂ ರಾಜರಾಜೇಶ್ವರಿನಗರದ 3 ವಾರ್ಡ್‌ಗಳಲ್ಲಿ ಈಗಾಗಲೇ ಇಂಧನ ದಕ್ಷತೆಯ ಎಲ್‌ಇಡಿ ಬೀದಿ ದೀಪಗಳನ್ನು ಶೇ.86 ರಷ್ಟು ಪೂರ್ಣಗೊಂಡಿದ್ದು, ಬಾಕಿ ಉಳಿಕೆ ಎಲ್‌ಇಡಿ ಅಳವಡಿಕೆ ಕಾಮಗಾರಿ ಚಾಲ್ತಿಯಲಿರುತ್ತದೆ. ಹಾಗೂ ಇದಕ್ಕೆ ಸಂಬಂಧಿಸಿದಂತೆ ಅಅಒಖ ಸ್ವಿಚ್ ನಿಯಂತ್ರಣ ಪರಿಕರಗಳನ್ನು ಅಳವಡಿಸುವ ಕಾಮಗಾರಿ ಬಾಕಿ ಇರುತ್ತದೆ.

68,907 ಎಲ್‌ಇಡಿ ಬೀದಿದೀಪಗಳ ಅಳವಡಿಕೆ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು ಇರುವ 1,24,325 ಬೀದಿದೀಪಗಳ ಪೈಕಿ, 59,693 ಸಂಖ್ಯೆಯ ಹಾಲಿ ಎಲ್‌ಇಡಿ ಹಾಗೂ 64,632 ಸಂಖ್ಯೆಯ ಸಾಂಪ್ರದಾಯಿಕ ಬೀದಿದೀಪಗಳಿದ್ದು, ಇದರಲ್ಲಿ 14,576 ಸಂಖ್ಯೆಯ ಖಾಲಿ ಕಂಬಗಳನ್ನು ಒಳಗೊಂಡಂತೆ ಒಟ್ಟು 68,907 ಸಂಖ್ಯೆಯ ಬೀದಿದೀಪಗಳನ್ನು ಅಳವಡಿಸಲಾಗಿದ್ದು, ಉಳಿದ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಲಾಗುತ್ತಿದ್ದು, ಸ್ಮಾರ್ಟ್ ಮಾನಿಟರಿಂಗ್ ವ್ಯವಸ್ಥೆಯ ಭಾಗವಾಗಿ ಅಅಒಖ ಸ್ವಿಚ್‌ಗಳ ಅಳವಡಿಕೆ ಕಾರ್ಯವೂ ಪ್ರಗತಿಯಲ್ಲಿದೆ.

ನಗರ ಪಾಲಿಕೆಯ ಆಯುಕ್ತರವರ ನಿರ್ದೇಶನದಂತೆ ಸಾರ್ವಜನಿಕರಿಂದ ಸ್ವೀಕರಿಸಲ್ಪಟ್ಟ ದೂರುಗಳು ಹಾಗೂ ಸ್ಥಳ ಪರಿಶೀಲನೆ ಆಧರಿಸಿ ಕತ್ತಲಿನಿಂದ ಕೂಡಿರುವ ಪ್ರದೇಶಗಳಲ್ಲಿ ಹೆಚ್ಚುವರಿ ಬೀದಿದೀಪ ಕಂಬಗಳು, ಭೂಗತ ಮತ್ತು ಏರಿಯಲ್ ಬಂಚ್ಡ್ (ಂಃ) ಕೇಬಲ್‌ಗಳನ್ನು ಅಳವಡಿಸಿ ಬೀದಿದೀಪ ಮೂಲಸೌಕರ್ಯವನ್ನು ಮೇಲ್ದರ್ಜೆಗೇರಿಸುವ ಯೋಜನೆಯನ್ನೂ ಕೈಗೊಳ್ಳಲಾಗಿದೆ.

ಯಲಹಂಕ ಹಾಗೂ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಗಳಲ್ಲಿ ಸುಮಾರು 1,313 ಹೊಸ ಬೀದಿದೀಪ ಕಂಬಗಳು ಹಾಗೂ 63.63 ಕಿಲೋಮೀಟರ್ ಉದ್ದದ ಕೇಬಲ್ ಅಳವಡಿಕೆಗೆ ಯೋಜನೆ ರೂಪಿಸಲಾಗಿದ್ದು, ಇದಕ್ಕಾಗಿ ರೂ.550 ಲಕ್ಷಗಳ ಅಂದಾಜು ಮೊತ್ತದ ಕಾಮಗಾರಿಯನ್ನು ಪ್ರಸ್ತಾಪಿಸಲಾಗಿದೆ.

ಒಟ್ಟಾರೆಯಾಗಿ ಯಲಹಂಕ, ಬ್ಯಾಟರಾಯನಪುರ, ಹೆಬ್ಬಾಳ, ಪುಲಿಕೇಶಿನಗರ ಹಾಗೂ ಸರ್ವಜ್ಞನಗರ ಕ್ಷೇತ್ರಗಳಲ್ಲಿ ಸುಮಾರು 1,942 ಹೊಸ ಬೀದಿದೀಪ ಕಂಬಗಳು ಹಾಗೂ 92.50 ಕಿಲೋಮೀಟರ್ ವಿದ್ಯುತ್ ಕೇಬಲ್ ಅಳವಡಿಕೆಗೆ ಅಗತ್ಯ ಅನುದಾನ ಲಭ್ಯವಿದ್ದು, ಕಾಮಗಾರಿ ಕೈಗೊಳ್ಳಲು ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಪ್ರಸ್ತಾವನೆಯು ಅನುಮೋದನೆ ಹಂತದಲ್ಲಿದೆ.

## ಕೆ.ಹೆಚ್.ಮುನಿಯಪ್ಪರಿಗೆ ಡಿಸಿಎಂ ಸ್ಥಾನ ನೀಡಲು ಒತ್ತಾಯ

ತುಮಕೂರು



ರಾಜ್ಯದಲ್ಲಿ ಹೆಚ್ಚು ಜನಸಂಖ್ಯೆ ಇರುವ ಮಾದಿಗ ಸಮುದಾಯದ ಮುಖಂಡರಾದ ಕೆ.ಹೆಚ್.ಮುನಿಯಪ್ಪ ಅವರನ್ನು ಉಪಮುಖ್ಯಮಂತ್ರಿಯಾಗಿ ನೇಮಿಸಿ,ಸಮಾಜ ಕಲ್ಯಾಣ ಇಲಾಖೆಯ ಮಂತ್ರಿಯನ್ನಾಗಿ ಮಾಡುವಂತೆ ಒಳಮೀಸಲಾತಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಮಾರಸಂದ್ರ ಮುನಿಯಪ್ಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಪಕ್ಷದ ಹೈಕಮಾಂಡನ್ನು ಒತ್ತಾಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು,ರಾಜ್ಯದಲ್ಲಿ ಮಾದಿಗ ಸಮುದಾಯ, ಹೊಲೆಯ ಸಮುದಾಯಕ್ಕಿಂತ ಹೆಚ್ಚಿನ ಜನಸಂಖ್ಯೆಯನ್ನು ಹೊಂದಿದೆ.ಹೀಗಿದ್ದು, ಡಿ.ಕೆ.ಶಿವಕುಮಾರ ಸಚಿವ ಸಂಪುಟದಲ್ಲಿ ಹೊಲೆಯರಿಗೆ ಡಿ.ಸಿ.ಎಂ. ಮಾಡಿದ ಎರಡು ಸಚಿವ ಸ್ಥಾನ ನೀಡಿ,ಗೃಹ ಮತ್ತು ಕಂದಾಯದಂತಹ ಪ್ರಭಾವಿ ಖಾತೆಗಳನ್ನು ನೀಡಲಾಗಿದೆ.ಆದರೆ ಆರು ಬಾರಿ ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಹಿರಿಯರಾದ ಕೆ.ಹೆಚ್.ಮುನಿಯಪ್ಪ ಅವರನ್ನು ಮಾತ್ರ ಸಚಿವರನ್ನಾಗಿಸಿ, ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ನೀಡಿ ಅವಮಾನ ಮಾಡಲಾಗಿದೆ. ಹಾಗಾಗಿ ಕೆ.ಹೆಚ್.ಮುನಿಯಪ್ಪ ಅವರಿಗೆ ನೀಡಿರುವ ಖಾತೆಯನ್ನು ಬದಲಾಯಿಸಿ, ಅವರ ಹಿರಿತನದ ಆಧಾರದಲ್ಲಿ ಸಮಾಜ ಕಲ್ಯಾಣ ಇಲಾಖೆ ನೀಡಬೇಕು. ಹಾಗು ಅವರನ್ನು ಉಪಮುಖ್ಯಮಂತ್ರಿ ಮಾಡಬೇಕೆಂಬುದು ನಮ್ಮಗಳ ಆಗ್ರಹವಾಗಿದೆ ಎಂದರು.

ರಾಜ್ಯದಲ್ಲಿರುವ ಕಾಂಗ್ರೆಸ್ ಸರಕಾರ ಒಳಮೀಸಲಾತಿಯಲ್ಲಿ ಮಾದಿಗರಿಗೆ ತೀವ್ರ ಅನ್ಯಾಯ ಮಾಡಿದೆ.35 ವರ್ಷಗಳ ಸುಧೀರ್ಘ ಹೋರಾಟವನ್ನು ಕಡೆಗಣಿಸಿದೆ.ಪಕ್ಷದ ಪ್ರಾಣಾಳಿಕೆಯಲ್ಲಿ ಒಳಮೀಸಲಾತಿ ಜಾರಿ ಅಂಶವಿದ್ದರೂ ಸುಪ್ರಿಂಕೋರ್ಟಿನ ಆದೇಶ ಬರುವವರೆಗು ಒಳಮೀಸಲಾತಿ ವಿಚಾರವನ್ನು ನಿರ್ಲಕ್ಷ ಮಾಡುತ್ತಲೇ ಬಂದಿತ್ತು. ಅಲ್ಲದೆ ಸರಕಾರದ ಮುಂದೆ ನ್ಯಾ.ಎ.ಜೆ. ಸದಾಶಿವ ಆಯೋಗ,ಜೆ.ಸಿ.ಮಾಧುಸ್ವಾಮಿ ಉಪಸಮಿತಿಯ ವರದಿ ಇದ್ದರೂ ಅವುಗಳನ್ನು ಕೈಬಿಟ್ಟು, ನ್ಯಾ.ನಾಗಮೋಹನದಾಸ್ ಅವರ ಸಮಿತಿ ರಚಿಸಿ, ಅವರ ಶಿಫಾರಸ್ಸುಗಳನ್ನು ಕೈಬಿಟ್ಟು, ಮನಬಂದಂತೆ ಮೀಸಲಾತಿ ಹಂಚಿಕೆ ಮಾಡಿ ಮಾದಿಗರನ್ನು ವಂಚಿಸಲಾಗಿದೆ.

ಹೊಸ ಒಳಮೀಸಲಾತಿ ನೀತಿಯಲ್ಲಿಯೂ 3 ಕ್ಕಿಂತ ಕಡಿಮೆ ಹುದ್ದೆಗಳಿದ್ದಾಗ ಒಳಮೀಸಲಾತಿ ಅನ್ವಯಿಸು ವುದಿಲ್ಲ ಎಂಬ ನಿಯಮ ರೂಪಿಸಿ, ಒಳಮೀಸಲಾತಿ ಇದ್ದೂ ಇಲ್ಲದಂತೆ ಮಾಡಲಾಗಿದೆ.ಸರಕಾರ ನ್ಯಾ.ನಾಗಮೋಹನ ದಾಸ್ ವರದಿ ಅನ್ವಯ ಒಳಮೀಸಲಾತಿ ಹಂಚಿಕೆ ಮಾಡಬೇಕು.ಅಲೆಮಾರಿ ಮತ್ತು ಅರೆ ಅಲೆಮಾರಿಗಳಿಗೆ ಶೇ1ರ ಪ್ರತ್ಯೇಕ ಮೀಸಲಾತಿಯ ಜೊತೆಗೆ, ಪ್ರತ್ಯೇಕ ಅಲೆಮಾರಿ ಅಭಿವೃದ್ದಿ ನಿಗಮ ಸ್ಥಾಪಿಸಿ, ಹೆಚ್ಚಿನ ಅನುದಾನ ನೀಡಬೇಕೆಂದು ಮಾರಸಂದ್ರ ಮುನಿಯಪ್ಪ ಸರಕಾರವನ್ನು ಒತ್ತಾಯಿಸಿದರು.

ಸರಕಾರಕ್ಕೆ ಈಗಾಗಲೇ ಮಾದಿಗ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸಂಬಂಧ ಪಟ್ಟವರ ಗಮನಕ್ಕೆ ತಂದು, ನ್ಯಾಯ ಒದಗಿಸುವಂತೆ ಕೋರಲಾಗಿದೆ. ಸರಕಾರದ ಧೋರಣೆ ಹೀಗೆಯೇ ಮುಂದುವರೆದರೆ ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗಳ ಜೊತೆಗೆ, ಮುಂಬರುವ ಚುನಾವಣೆಗಳಲ್ಲಿ ಮಾದಿಗರು ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಮಾರಸಂದ್ರ ಮುನಿಯಪ್ಪ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಒಳಮೀಸಲಾತಿ ಹೋರಾಟ ಸಮಿತಿ ಕಾರ್ಯಾಧ್ಯಕ್ಷರಾದ ಬಸವರಾಜ ಕೌತುಕ್, ಮಾದಿಗ ದಂಡೋರದ ಪಾವಗಡ ಶ್ರೀರಾಮ್, ದಸಂಸದ ರಾಜ್ಯಾಧ್ಯಕ್ಷ ಎಂ.ಗುರುಮೂರ್ತಿ, ಒಳಮೀಸಲಾತಿ ಹೋರಾಟ ಸಮಿತಿಯ ಡಾ.ವೈ.ಕೆ.ಬಾಲಕೃಷ್ಣಪ್ಪ, ಗಂಗಾಧರ್, ಅರೆ ಅಲೆಮಾರಿ ಸಂಘಟನೆಯ ಚಾವಡಿ ಲೋಕೇಶ್ ಸೇರಿದಂತೆ ರಾಜ್ಯ ಮತ್ತು ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

## ಎಸ್‌ಐಆರ್ ಜಾಗೃತಿಗೆ ಪಾಲಿಕೆವಾರು ನೋಡಲ್
### ಅಧಿಕಾರಿಗಳ ನೇಮಕಕ್ಕೆ ಸೂಚನೆ

ಬೆಂಗಳೂರು

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತ ಸ್ವೀಪ್ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪಾಲಿಕೆವಾರು ನೋಡಲ್ ಅಧಿಕಾರಿಗಳನ್ನು ನೇಮಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ವರ್ಚುವಲ್ ಸಭೆಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸಲು ವಿವಿಧ ಸ್ವೀಪ್ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಜೂನ್ 30ರಿಂದ ಬೂತ್ ಮಟ್ಟದ ಅಧಿಕಾರಿಗಳು ಮನೆ–ಮನೆ ಭೇಟಿ ಆರಂಭಿಸಲಿದ್ದು, ಎಲ್ಲಾ ಬಿಎಲ್‌ಒಗಳು ಕಡ್ಡಾಯವಾಗಿ ಗುರುತಿನ ಚೀಟಿಯೊಂದಿಗೆ ಮತದಾರರನ್ನು ಭೇಟಿ ಮಾಡಬೇಕು ಎಂದು ಸೂಚಿಸಿದರು.

ಸಾಮಾಜಿಕ ಜಾಲತಾಣಗಳು, ವೆಬ್‌ತಾಣಗಳು, ಪಾಡ್‌ಕಾಸ್ಟ್‌ಗಳು ಹಾಗೂ ದೂರವಾಣಿ ಸಂವಾದ ಕಾರ್ಯಕ್ರಮಗಳ ಮೂಲಕ ಎಸ್‌ಐಆರ್ ಕುರಿತು ನಿಖರ ಮಾಹಿತಿ ತಲುಪಿಸಬೇಕು ಎಂದು ನಿರ್ದೇಶನ ನೀಡಿದರು. ಪ್ರತಿ ಪಾಲಿಕೆಯಲ್ಲಿ ನಡೆಯುವ ಸ್ವೀಪ್ ಚಟುವಟಿಕೆಗಳ ಮೇಲ್ವಿಚಾರಣೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸಿ, ಪ್ರತಿದಿನದ ಪ್ರಗತಿ ವರದಿ ಸಲ್ಲಿಸಬೇಕು. ಜೊತೆಗೆ ಜಿಬಿಎ ಮಟ್ಟದಲ್ಲಿಯೂ ಒಬ್ಬ ನೋಡಲ್ ಅಧಿಕಾರಿಯನ್ನು ನೇಮಿಸಿ ಜೂನ್ 30ರವರೆಗೆ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವಂತೆ ಸೂಚಿಸಲಾಯಿತು.

ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ವಸ್ತ್ರದ್ ಮಾತನಾಡಿ, ಮತದಾರ ನೋಂದಣಾಧಿಕಾರಿಗಳು, ಬಿಎಲ್‌ಒಗಳು ಸೇರಿದಂತೆ ಎಲ್ಲಾ ಸಿಬ್ಬಂದಿಗೆ ತರಬೇತಿ ನೀಡಲಾಗಿದ್ದು, ನಿಗದಿತ ವೇಳಾಪಟ್ಟಿಯಂತೆ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

ನಗರದ ವಿವಿಧ ಭಾಗಗಳಲ್ಲಿ ಜಾಗೃತಿ ರ್‍ಯಾಲಿ, ಮ್ಯಾರಥಾನ್, ಸೈಕ್ಲೋಥಾನ್, ತ್ರಿಚಕ್ರ ವಾಹನ ಜಾಥಾ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಶಾಲೆಗಳು, ಕಾಲೇಜುಗಳು, ವಿಶ್ವವಿದ್ಯಾಲಯಗಳು, ನರ್ಸಿಂಗ್ ಕಾಲೇಜುಗಳು ಹಾಗೂ ವಿವಿಧ ಸಂಘ–ಸಂಸ್ಥೆಗಳಲ್ಲಿ ಮತದಾರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವಂತೆ ಸೂಚಿಸಿದರು. ಹಿರಿಯ ನಾಗರಿಕರು, ದಿವ್ಯಾಂಗರು, ಮಹಿಳಾ ಮತದಾರರು, ಆದಿವಾಸಿ ಸಮುದಾಯಗಳು, ವಲಸೆ ಕಾರ್ಮಿಕರು, ನಿರಾಶ್ರಿತರು, ದುರ್ಬಲ ವರ್ಗಗಳು ಹಾಗೂ ಸೇವಾ ಮತದಾರರನ್ನು ತಲುಪುವ ಉದ್ದೇಶದಿಂದ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಸ್ವೀಪ್ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಎಲ್ಲಾ ಛಾಯಾಚಿತ್ರಗಳು ಮತ್ತು ದೃಶ್ಯಾವಳಿಗಳನ್ನು ಸಂಬಂಧಿತ ಜಾಲತಾಣದಲ್ಲಿ ಅಪ್‌ಲೋಡ್ ಮಾಡಿ, ಮಾಹಿತಿಯನ್ನು ನಿರಂತರವಾಗಿ ನವೀಕರಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ನಗರದ ಜನಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು, ಸಿನಿಮಾ ಕ್ಷೇತ್ರದ ಗಣ್ಯರು, ನ್ಯಾಯಾಧೀಶರು, ಕ್ರೀಡಾಪಟುಗಳು, ಮಾಧ್ಯಮ ಪ್ರತಿನಿಧಿಗಳು ಹಾಗೂ ಪ್ರಶಸ್ತಿ ಪುರಸ್ಕೃತರ ಪಟ್ಟಿಯನ್ನು ಸಿದ್ಧಪಡಿಸಿ, ಅವರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಮಹೇಶ್ವರ್ ರಾವ್ ಸೂಚಿಸಿದರು. ಸಭೆಯಲ್ಲಿ ವಿವಿಧ ನಗರ ಪಾಲಿಕೆಗಳ ಆಯುಕ್ತರು, ಅಪರ ಆಯುಕ್ತರು, ಮತದಾರ ನೋಂದಣಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿದ್ಯುತ್ ಖಾಸಗೀಕರಣಕ್ಕೆ ವಿರೋಧ; ಒಗ್ಗಟ್ಟಿನ ಹೋರಾಟಕ್ಕೆ ಕರೆ



ಕೋಲಾರ

ಬೆಸ್ಕಾಂ ಸೇರಿದಂತೆ ವಿವಿಧ ಎಸ್ಕಾಂಗಳಲ್ಲಿನ ವಿದ್ಯುತ್ ವಿತರಣಾಜಾಲ ಹಾಗೂ ನಿರ್ವಹಣೆಯನ್ನು ಟಾಟಾ ಪವರ್ ಕಂಪನಿಗೆ ವಹಿಸಲು ಮುಂದಾಗಿರುವ ಕ್ರಮವನ್ನು ವಿರೋಧಿಸಿ ಒಗ್ಗಟ್ಟಿನಿಂದ ಹೋರಾಡಲು ತೀರ್ಮಾನ ಕೈಗೊಳ್ಳಲಾಗಿದೆ.

ನಗರದ ಕೆಇಬಿ ಸಮುದಾಯ ಭವನದಲ್ಲಿ ಬುಧವಾರ ವಿದ್ಯುತ್ ಖಾಸಗೀಕರಣ ವಿರೋಧಿಸಿ ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ವಿವಿಧ ಸಂಘಟನೆಗಳ ಮುಖಂಡರ ತುರ್ತು ಸಮಾಲೋಚನೆ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ರೈತ ಸಂಘ, ದಲಿತ ಸಂಘಟನೆಗಳು, ಕನ್ನಡ ಪರ ಸಂಘಟನೆಗಳು, ಪ್ರಗತಿಪರ ಸಂಘಟನೆಗಳು, ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಪದಾಧಿಕಾರಿಗಳು, ಬೆಸ್ಕಾಂ ಅಧಿಕಾರಿಗಳು, ನೌಕರರು ಕೆಪಿಟಿಸಿಎಲ್ ನೌಕರರ ಸಂಘದವರು ಈ ಸಭೆಯಲ್ಲಿ ಪಾಲ್ಗೊಂಡಿದ್ದರು.

ಖಾಸಗೀಕರಣ ಮಾಡುವ ಪ್ರಸ್ತಾವವನ್ನು ಎಲ್ಲರೂ ತಿರಸ್ಕರಿಸಿದರು. ಆದಾಗ್ಯೂ ಖಾಸಗೀಕರಣದತ್ತ ಹೆಜ್ಜೆ ಇಟ್ಟರೆ ಹೋರಾಟ ಮಾಡಲು ಸರ್ವಾನುಮತದಿಂದ ತೀರ್ಮಾನ ಅಂಗೀಕರಿಸಲಾಯಿತು. ಪತ್ರ ಚಳವಳಿ ನಡೆಸಲು ಸಲಹೆಗಳು ಬಂದವು.

ಸಿಎಂಆರ್ ಶ್ರೀನಾಥ್ ಮಾತನಾಡಿ, ಕೋಲಾರ ಸೇರಿದಂತೆ 19 ಜಿಲ್ಲೆಗಳಲ್ಲಿ ಖಾಸಗೀಕರಣದ ಪ್ರಕ್ರಿಯೆ ನಡೆಯುತ್ತಿದೆ. ಬರೀ ಎಸ್ಕಾಂಗಳ ನೌಕರರು ಮಾತ್ರವಲ್ಲ; ಬಡವರ, ರೈತರು ಸಾಮಾನ್ಯ ಜನರಿಗೂ ಸಮಸ್ಯೆ ಉಂಟಾಗಲಿದೆ ಎಂದರು.

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗಕ್ಕೆ (ಕೆಇಆರ್‌ಸಿ) ಆಕ್ಷೇಪಣೆ ಸಲ್ಲಿಸಲು ಜೂನ್ 23ರವರೆಗೆ ಅವಕಾಶವಿದೆ. ನೌಕರರು, ಸಣ್ಣ ವ್ಯಾಪಾರಿಗಳು, ಸಣ್ಣ ಉದ್ಯಮದಾರರು ಸೇರಿದಂತೆ ಸಂಬಂಧಪಟ್ಟ ಎಲ್ಲಾ ಗ್ರಾಹಕರು ಆಕ್ಷೇಪಣೆ ಸಲ್ಲಿಸಬೇಕು. ಖಾಸಗೀಕರಣದ ಯತ್ನದಿಂದ ಸರ್ಕಾರ ಹಿಂದೆ ಸರಿಯಬೇಕು ಎಂದು ಹೇಳಿದರು.

ಪ್ರತಿ ಕ್ಷೇತ್ರದಲ್ಲಿ ಶಾಸಕರನ್ನು ಭೇಟಿಯಾಗಿ ಖಾಸಗೀಕರಣ ಮಾಡದಂತೆ ಮನವಿಪತ್ರ ಸಲ್ಲಿಸಬೇಕು. ಒಕ್ಕೊರಲಿನಿಂದ ಹೋರಾಟ ನಡೆಸಬೇಕು. ಖಾಸಗೀಕರಣವನ್ನು ಖಂಡಿಸಬೇಕು. ಇದು ಪ್ರಜ್ಞಾವಂತರ ಜವಾಬ್ದಾರಿ. ಎಸ್ಕಾಂಗಳ 84 ಸಾವಿರ ಉದ್ಯೋಗಿಗಳು ಹಾಗೂ 54 ಸಾವಿರ ಪಿಂಚಣಿದಾರರ ಬದುಕು ಇದರಲ್ಲಿ ಅಡಗಿದೆ. ಕೆಪಿಟಿಸಿಎಲ್, ಎಸ್ಕಾಂ ಸಂಸ್ಥೆ ಕನ್ನಡ ನಾಡಿನದ್ದು. ಉಗ್ರ ಹೋರಾಟದ ಮೂಲಕ ನಮ್ಮ ಸಂಸ್ಥೆ ಉಳಿಸಬೇಕು ಎಂದು ಕರೆ ನೀಡಿದರು.

ಸಾಹಿತಿ ಕೋಟಿಗಾನಹಳ್ಳಿ ರಾಮಯ್ಯ ಮಾತನಾಡಿ, ಪ್ರಭುತ್ವವು ಕಾರ್ಪೊರೇಟ್ ಸಂಸ್ಥೆಗಳ ದಳ್ಳಾಳಿಗಳಾದಾಗ ಈ ಸಮಸ್ಯೆ ಉದ್ಭವಿಸುತ್ತದೆ. ಕ್ರಿಯೆಗೆ ಪ್ರತಿಕ್ರಿಯೆ ಆದರೆ ಹೋರಾಟ ಯಶಸ್ವಿ ಆಗಲ್ಲ. ದೆಹಲಿಯಲ್ಲಿ ರೈತರು ನಡೆಸಿದ ಹೋರಾಟದಂತೆ ನಡೆಯಬೇಕು. ಮಾದರಿ ಹೋರಾಟ ರೂಪಿಸಬೇಕು ಎಂದು ಸಲಹೆ ನೀಡಿದರು.

ಸೂಪರಿಂಟೆಂಡೆಂಟ್ ಎಂಜಿನಿಯರ್ ದೇವಿ ರೆಡ್ಡಿ, ಬೆಸ್ಕಾಂ ಕಾರ್ಯಪಾಲಕ ಎಂಜಿನಿಯರ್, ಕೆಪಿಟಿಸಿಎಲ್ ನೌಕರರ ಒಕ್ಕೂಟದ ವೆಂಕಟೇಶ್, ಅಂಥೋಣಿ ದಾಸ್ ಹಾಗೂ ನೌಕರರು ಇದ್ದರು. ಸಭೆಯ ಬಳಿಕ ವಿವಿಧ ಸಂಘಟನೆಗಳ ಮುಖಂಡರು ನಗರದ ಡೂಂಲೈಟ್ ಸರ್ಕಲ್‌ನಲ್ಲಿ ಸಾಂಕೇತಿಕವಾಗಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

## ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧ ರಾಜಕೀಯ ಪ್ರೇರಿತ: ಶಾಸಕ ಬಾಲಕೃಷ್ಣ

ಬಿಡದಿ

"ಮುಖ್ಯಮಂತ್ರಿಯಾಗಿರುವ ಡಿ.ಕೆ.ಶಿವಕುಮಾರ್ ಅವರನ್ನು ರಾಜಕೀಯವಾಗಿ ಗುರಿಯಾಗಿಸಿಕೊಂಡು ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ರೈತರ ಹಿತದ ಬಗ್ಗೆ ನಿಜವಾದ ಕಾಳಜಿ ಇದ್ದಿದ್ದರೆ, ಹಿಂದಿನ ಸರ್ಕಾರಗಳ ಅವಧಿಯಲ್ಲೇ ಈ ಯೋಜನೆಯನ್ನು ಕೈಬಿಡಬಹುದಾಗಿತ್ತು" ಎಂದು ಮಾಗಡಿ ಶಾಸಕ ಬಾಲಕೃಷ್ಣ ಆರೋಪಿಸಿದರು.

ಬಿಡದಿಯ ಸಮೀಪ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗಲೂ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿತ್ತು. ಆಗಲೂ ಕೆಲವು ರೈತರು ವಿರೋಧ ವ್ಯಕ್ತಪಡಿಸಿದ್ದರು. ಆದರೆ ಆ ಸಂದರ್ಭದಲ್ಲಿ ಎಚ್.ಡಿ. ಕುಮಾರಸ್ವಾಮಿ ಅಥವಾ ಆರ್. ಅಶೋಕ್ ಅವರು ರೈತರ ಪರವಾಗಿ ಹೋರಾಟ ನಡೆಸಲಿಲ್ಲ. ಈಗ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆಗಿರುವುದನ್ನು ಸಹಿಸಿಕೊಳ್ಳಲಾಗದೆ ಈ ವಿಚಾರವನ್ನು ರಾಜಕೀಯವಾಗಿ ಬಳಸಿಕೊಳ್ಳಲಾಗುತ್ತಿದೆ" ಎಂದು ಹೇಳಿದರು.



ಬಿಜೆಪಿ ನಾಯಕರು ಬಿಡದಿಗೆ ಭೇಟಿ ನೀಡಿ ಟೌನ್‌ಶಿಪ್ ಯೋಜನೆ ವಿರುದ್ಧ ಹೋರಾಟ ನಡೆಸುತ್ತಿರುವ ಕುರಿತು ಪ್ರತಿಕ್ರಿಯಿಸಿದ ಅವರು, "ಯಡಿಯೂರಪ್ಪ ಸರ್ಕಾರದ ಅವಧಿಯಲ್ಲಿ ಸಾವಿರ ಎಕರೆ ಭೂಮಿ ಸ್ವಾಧೀನ ಪ್ರಕ್ರಿಯೆ ಆರಂಭವಾಗಿತ್ತು. ಆಗ ಸರ್ಕಾರ ಬಯಸಿದ್ದರೆ ಯೋಜನೆಯನ್ನು ಕೈಬಿಡಬಹುದಾಗಿತ್ತು. ರೈತರು ಇಷ್ಟು ವರ್ಷ ಹೋರಾಟ ನಡೆಸುವ ಪರಿಸ್ಥಿತಿಯೇ ಉಂಟಾಗುತ್ತಿರಲಿಲ್ಲ" ಎಂದರು.

"ಆ ಸಂದರ್ಭದಲ್ಲಿ ಯಡಿಯೂರಪ್ಪ ಹಾಗೂ ವಿಜಯೇಂದ್ರ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದೆವು. ರೈತರಿಗೆ ಉತ್ತಮ ಪರಿಹಾರ ಕೊಡಿಸುವ ಭರವಸೆ ನೀಡಲಾಗಿತ್ತು. ಕೈಗಾರಿಕಾ ಅಭಿವೃದ್ಧಿಗೆ ಸಹಕಾರ ನೀಡುವಂತೆ ಮನವಿ ಮಾಡಲಾಗಿತ್ತು. ಈಗ ಅದೇ ನಾಯಕರು ಯೋಜನೆ ವಿರುದ್ಧ ಹೋರಾಟ ನಡೆಸುತ್ತಿರುವುದು ಅವಕಾಶವಾದಿ ರಾಜಕಾರಣಕ್ಕೆ ಉದಾಹರಣೆ" ಎಂದು ಟೀಕಿಸಿದರು.

ಟೌನ್‌ಶಿಪ್ ಯೋಜನೆಯನ್ನು ಡಿ.ಕೆ. ಶಿವಕುಮಾರ್ ಆರಂಭಿಸಿಲ್ಲ ಎಂದು ಸ್ಪಷ್ಟಪಡಿಸಿದ ಅವರು, "ಈ ಯೋಜನೆಗೆ ಮೂಲ ಚಾಲನೆ ನೀಡಿದ್ದು ಎಚ್.ಡಿ. ಕುಮಾರಸ್ವಾಮಿ ಅವರೇ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರೈತರು ರೆಡ್‌ಝೋನ್ ತೆರವುಗೊಳಿಸುವಂತೆ ಅಥವಾ ಸೂಕ್ತ ಪರಿಹಾರ ನೀಡುವಂತೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಪ್ರಕ್ರಿಯೆ ಮುಂದುವರಿಯಿತು" ಎಂದರು.

"ಯೋಜನೆಯ ವ್ಯಾಪ್ತಿಯಲ್ಲಿ ಈಗಾಗಲೇ ಸಾವಿರ ಎಕರೆಗೂ ಹೆಚ್ಚು ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಆಗ ಪ್ರತಿ ಎಕರೆಗೆ ಸುಮಾರು 90 ಲಕ್ಷದಿಂದ 1 ಕೋಟಿ ರೂಪಾಯಿವರೆಗೆ ಪರಿಹಾರ ನೀಡಲಾಗಿತ್ತು ಎಂದರು.

## ಸಿಸಿ ರಸ್ತೆ ಕಾಮಗಾರಿ ಅವಾಂತರ: ಮನೆಗಳಿಗೆ ನುಗ್ಗಿದ ಮಳೆನೀರು, ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಗ್ರಾಮಸ್ಥರ ಆಕ್ರೋಶ

ಪಾವಗಡ

ಅಭಿವೃದ್ಧಿ ಕಾಮಗಾರಿಗಳು ಜನರ ಜೀವನವನ್ನು ಸುಗಮಗೊಳಿಸಬೇಕಾದರೆ, ಚನ್ನಸಾಗರದಹಟ್ಟಿ ಗ್ರಾಮದಲ್ಲಿ ನಡೆದ ಸಿಸಿ ರಸ್ತೆ ಕಾಮಗಾರಿ ಗ್ರಾಮಸ್ಥರ ಬದುಕಿಗೆ ಹೊಸ ಸಂಕಷ್ಟವನ್ನು ತಂದೊಡ್ಡಿದೆ. ಇತ್ತೀಚೆಗೆ ಸುರಿದ ಭಾರಿ ಮಳೆಯಿಂದ ಮಳೆನೀರು ಸರಾಗವಾಗಿ ಹರಿದು ಹೋಗದೆ ಹಲವು ಮನೆಗಳಿಗೆ ನುಗ್ಗಿ ಗೃಹೋಪಯೋಗಿ ವಸ್ತುಗಳು, ದವಸ–ಧಾನ್ಯಗಳು ಹಾನಿಗೊಳಗಾಗಿವೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ತಾಲ್ಲೂಕಿನ ಸಿ.ಕೆ.ಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚನ್ನಸಾಗರದಹಟ್ಟಿ ಗ್ರಾಮದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ವೇಳೆ ಅಗತ್ಯ ತಾಂತ್ರಿಕ ಮಾನದಂಡಗಳನ್ನು ಪಾಲಿಸಿಲ್ಲ ಎಂಬ ಆರೋಪ ಕೇಳಿಬಂದಿದೆ. ರಸ್ತೆ ಮಟ್ಟವನ್ನು ಸಮರ್ಪಕವಾಗಿ ನಿರ್ಧರಿಸದೆ ನಿರ್ಮಿಸಿರುವ ಪರಿಣಾಮ ಮಳೆನೀರು ಮನೆಗಳತ್ತ ಹರಿದು ಬಂದು ನಿವಾಸಿಗಳಿಗೆ ತೊಂದರೆ ಉಂಟುಮಾಡುತ್ತಿದೆ ಎಂದು ಸ್ಥಳೀಯರು ದೂರಿದ್ದಾರೆ.



ಗ್ರಾಮಸ್ಥರ ಪ್ರಕಾರ, ರಸ್ತೆಯ ಎರಡೂ ಬದಿಗಳಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಹಾಗೂ ನೀರು ಹೊರಹಾಕುವ ಮಾರ್ಗಗಳನ್ನು ಕಲ್ಪಿಸದೇ ಕಾಮಗಾರಿ ನಡೆಸಲಾಗಿದೆ. ಇದರಿಂದ ಮಳೆನೀರು ರಸ್ತೆಯಲ್ಲೇ ಸಂಗ್ರಹವಾಗಿ ಮನೆಗಳೊಳಗೆ ನುಗ್ಗುತ್ತಿದೆ. ತಾಂತ್ರಿಕ ಲೋಪದೋಷಗಳಿಂದ ಕೂಡಿರುವ ಕಾಮಗಾರಿಯಲ್ಲಿ ಸಂಬಂಧಪಟ್ಟ ಅಭಿಯಂತರರ ನಿರ್ಲಕ್ಷ್ಯ ಸ್ಪಷ್ಟವಾಗಿ ಗೋಚರಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಮಕ್ಕಳು, ಮಹಿಳೆಯರು ಹಾಗೂ ವೃದ್ಧರು ರಾತ್ರಿಯಿಡೀ ಆತಂಕದಲ್ಲಿ ಕಾಲ ಕಳೆಯುವಂತಾಗಿದೆ. ಮನೆಗಳಲ್ಲಿ ನೀರು ನುಗ್ಗಿರುವ ಕಾರಣ ಸಾಮಾನ್ಯ ಜೀವನ ಅಸ್ತವ್ಯಸ್ತಗೊಂಡಿದ್ದು, ಆರೋಗ್ಯ ಹಾಗೂ ಸುರಕ್ಷತೆ ಸಮಸ್ಯೆಗಳೂ ಎದುರಾಗುವ ಭೀತಿ ಮೂಡಿದೆ.

> ಇಷ್ಟೆಲ್ಲ ಸಮಸ್ಯೆಗಳು ಎದುರಾದರೂ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸದಿರುವುದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ. ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಲ್ಯಾಂಡ್ ಆರ್ಮಿ ಸಂಸ್ಥೆಯ ಅಭಿಯಂತರರು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯ ಮೂಲವನ್ನು ಪರಿಶೀಲಿಸಿ, ಹಾನಿಗೊಳಗಾದ ಕುಟುಂಬಗಳಿಗೆ ಪರಿಹಾರ ಒದಗಿಸಬೇಕು.

ಈ ಕುರಿತು ಹಲವು ಬಾರಿ ಗ್ರಾಮ ಪಂಚಾಯಿತಿ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ವಿಶೇಷವಾಗಿ ಸಿ.ಕೆ.ಪುರ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ರಂಗಸ್ವಾಮಿ ಅವರಿಗೆ ಮನವಿ ಸಲ್ಲಿಸಿದರೂ ಸ್ಪಂದನೆ ದೊರೆತಿಲ್ಲ ಎಂದು ಆರೋಪಿಸಿದ್ದಾರೆ.

ಇಷ್ಟೆಲ್ಲ ಸಮಸ್ಯೆಗಳು ಎದುರಾದರೂ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸದಿರುವುದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ. ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಲ್ಯಾಂಡ್ ಆರ್ಮಿ ಸಂಸ್ಥೆಯ ಅಭಿಯಂತರರು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯ ಮೂಲವನ್ನು ಪರಿಶೀಲಿಸಿ, ಹಾನಿಗೊಳಗಾದ ಕುಟುಂಬಗಳಿಗೆ ಪರಿಹಾರ ಒದಗಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಮಳೆನೀರು ಮನೆಗಳಿಗೆ ನುಗ್ಗದಂತೆ ಶಾಶ್ವತ ಪರಿಹಾರ ಕ್ರಮಗಳನ್ನು ಕೈಗೊಂಡು ಗ್ರಾಮಸ್ಥರ ಸಂಕಷ್ಟಕ್ಕೆ ಅಂತ್ಯ ಹಾಡಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

ಸುಮಾರು ಮೂರು ತಿಂಗಳ ಹಿಂದೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಗ್ರಾಮಕ್ಕೆ ಭೇಟಿ ನೀಡಿ ಜನಸಂಪರ್ಕ ಸಭೆ ನಡೆಸಿ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿದ್ದರು. ಅಗತ್ಯ ಕ್ರಮ ಕೈಗೊಳ್ಳುವ ಭರವಸೆಯನ್ನೂ ನೀಡಿದ್ದರು. ಆದರೆ ಇದುವರೆಗೂ ಯಾವುದೇ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದ್ದಾರೆ.

ಜಿಲ್ಲಾಧಿಕಾರಿಗಳ ಭೇಟಿ ಬಳಿಕವೂ ಗ್ರಾಮದಲ್ಲಿ ಯಾವುದೇ ಸುಧಾರಣೆ ಕಂಡುಬಂದಿಲ್ಲ. ಮಳೆನೀರು ಮನೆಗಳಿಗೆ ನುಗ್ಗುವ ಸಮಸ್ಯೆ ಸೇರಿದಂತೆ ಹಲವು ಮೂಲಭೂತ ಸಮಸ್ಯೆಗಳು ಹಾಗೆಯೇ ಮುಂದುವರಿದಿವೆ.

ಇದರಿಂದ ಆಡಳಿತದ ಕಾರ್ಯವೈಖರಿಯ ಕುರಿತು ಪ್ರಶ್ನೆಗಳು ಉದ್ಭವಿಸಿವೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಎಚ್ಚೆತ್ತುಕೊಂಡು ಗ್ರಾಮಸ್ಥರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy